ವಿಶ್ವವಾಣಿ
ವಿಶ್ವಾಸವೇ ವಿಶ್ವ

ಕಮಿನ್ಸ್ ಕೈಚಳಕ ದಿಂಡುರುಳಿದ ಡೆಲ್ಲಿ

ಸನ್‌ರೈಸರ್ಸ್ ಹೈದರಾಬಾದ್ ತಂಡದ ನಾಯಕ ಪ್ಯಾಟ್ ಕಮಿನ್ಸ್ ತಮ್ಮ 3 ಓವರ್‌ಗಳ ಮೊದಲ ಎಸೆತದಲ್ಲಿ ವಿಕೆಟ್ ಪಡೆಯುವ ಮೂಲಕ ಐಪಿಎಲ್‌ನಲ್ಲಿ ಹೊಸ ದಾಖಲೆ ಮಾಡಿದ್ದಾರೆ. ಕಮಿನ್ಸ್ ದಾಳಿಗೆ ಕುಸಿದ ಡೆಲ್ಲಿ ತಂಡವು ನಿಗದಿತ 20 ಓವರ್‌ನಲ್ಲಿ ಕೇವಲ 133 ರನ್ ಗಳಿಸಲಷ್ಟೇ ಶಕ್ತವಾಯಿತು. ಮಳೆಯ ಕಾರಣ ಪಂದ್ಯ ರದ್ದಾದ ಹಿನ್ನೆಲೆಯಲ್ಲಿ ಎರಡೂ ತಂಡಗಳಿಗೆ ತಲಾ ಒಂದು ಅಂಕ ನೀಡಲಾಗಿದೆ.

ಪಾಕ್ ಮೇಲೆ ದಾಳಿಗೆ ಭಾರತ ಸನ್ನದ್ಧ
ನಾಳೆ ದೇಶಾದ್ಯಂತ ಅಣಕು ತಾಲೀಮು
ಯುದ್ಧ ಸನ್ನಿಹಿತ

ದೆಹಲಿ: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧದ ಕಾರ್ಮೋಡ ಮತ್ತಷ್ಟು ದಟ್ಟವಾಗಿದೆ. ಈ ನಡುವೆಯೇ ಮೇ 7ರಂದು ಮಾಕ್ ಡ್ರಿಲ್ ನಡೆಸುವಂತೆ ನಡೆಸುವಂತೆ ಕೇಂದ್ರ ಗೃಹ ಸಚಿವಾಲಯವು ಹಲವು ರಾಜ್ಯಗಳಿಗೆ ಸೂಚಿಸಿದೆ.

ವಾಯುದಾಳಿಯ ಸೈರನ್ ವ್ಯವಸ್ಥೆ ಇರುವಂತೆ ನೋಡಿಕೊಳ್ಳಿ ಮತ್ತು ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಪರಿಣಾಮಕಾರಿ ರಕ್ಷಣಾ ಅಂಶಗಳ ಕುರಿತು ತರಬೇತಿ ನೀಡಬೇಕು. ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ಸಿದ್ಧತೆಯನ್ನು ಪರೀಕ್ಷಿಸಲು ಮತ್ತು ಸಾರ್ವಜನಿಕ ಜಾಗೃತಿಯನ್ನು ಹೆಚ್ಚಿಸಲು ಮೇ 7ರಂದು ಸಮಗ್ರ ನಾಗರಿಕ ರಕ್ಷಣಾ ಅಣಕು ಕವಾಯತುಗಳನ್ನು ನಡೆಸಬೇಕು. ಕ್ರ್ಯಾಶ್ ಬ್ಲ್ಯಾಕೌಟ್ ಕ್ರಮಗಳನ್ನು ಒದಗಿಸಬೇಕು, ಪ್ರಮುಖ ಸ್ಥಾವರಗಳು ಮತ್ತು ಪ್ರಮುಖ ಕಟ್ಟಡಗಳನ್ನು ಮರೆಮಾಚುವಿಕೆ ಮತ್ತು ನಾಗರಿಕರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ ನಡೆಸುವ ಬಗ್ಗೆ ಪೂರ್ವಾಭ್ಯಾಸ ಮಾಡಬೇಕು ಎಂದು ಸೂಚಿಸಲಾಗಿದೆ.

ರಕ್ಷಣಾ ಕಾರ್ಯದರ್ಶಿ ಜತೆ ಪ್ರಧಾನಿ ಚರ್ಚೆ: ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರು ಸೋಮವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದಾರೆ.

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಬಳಿಕ ಭಾರತ ಹಾಗೂ ಪಾಕಿಸ್ತಾನ ನಡುವೆ ಉದ್ವಿಗ್ನ ಸ್ಥಿತಿ ನಿರ್ಮಾಣವಾಗಿದ್ದು, ದಾಳಿಯಲ್ಲಿ ಭಾಗಿಯಾದವರನ್ನು ಕಠಿಣ ಶಿಕ್ಷೆಗೆ ಗುರಿಪಡಿಸುವುದಾಗಿ ಕೇಂದ್ರ ಸರಕಾರ ಹೇಳಿದೆ. → 4

ಭಾರತಕ್ಕೆ ರಷ್ಯಾ, ಜಪಾನ್ ಬೆಂಬಲ

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೋಮವಾರ ದೂರವಾಣಿ ಕರೆ ಮಾಡಿ, ಭಯೋತ್ಪಾದನೆ ವಿರುದ್ಧದ ಭಾರತದ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ. ಜತೆಗೆ, ಪಹಲ್ಗಾಮ್ ಉಗ್ರ ದಾಳಿಕೋರರಿಗೆ ಮಣ್ಣುಮುಕ್ಕಿಸಿ ಎಂದು ಹೇಳಿದ್ದಾರೆ. ಭಾರತದ ಪ್ರವಾಸದಲ್ಲಿರುವ ಜಪಾನ್‌ನ ರಕ್ಷಣಾ ಸಚಿವ ಜನರಲ್ ನಕಾಟಾನಿ ಅವರನ್ನು ಭೇಟಿಯಾಗಿರುವ ರಕ್ಷಣಾ ಸಚಿವ ರಾಜನಾಥ ಸಿಂಗ್, ಭಯೋತ್ಪಾದನೆ, ಇಂಡೋ-ಫೆಸಿಫಿಕ್‌ನಲ್ಲಿ ಚೀನಾ ಮಿಲಿಟರಿ ನಿಲುವು ಸೇರಿದಂತೆ ದ್ವಿಪಕ್ಷೀಯ ರಕ್ಷಣಾ ಬಾಂಧವ್ಯ ವಿಸ್ತರಿಸುವ ಸಂಬಂಧ ಮಾತುಕತೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯನ್ನು ಜಪಾನ್‌ನ ರಕ್ಷಣಾ ಸಚಿವರು ಖಂಡಿಸಿದ್ದು, ಭಾರತಕ್ಕೆ ಸಂಪೂರ್ಣ ಬೆಂಬಲ ಘೋಷಿಸಿದ್ದಾರೆ.

ಉಗ್ರರ ಅಡಗುತಾಣ ಪತ್ತೆ

ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ಅರಣ್ಯದಲ್ಲಿ ಉಗ್ರರ ಅಡಗುತಾಣವನ್ನು ಪತ್ತೆ ಮಾಡಿರುವ ಭದ್ರತಾ ಪಡೆಗಳು ಐದು ಕಚ್ಚಾಬಾಂಬ್‌ಗಳು ಮತ್ತು ಎರಡು ವೈರ್‌ಲೆಸ್‌ಗಳನ್ನು ವಶಕ್ಕೆ ಪಡೆದಿವೆ. ಬಳಕೆಗೆ ಸಜ್ಜುಗೊಳಿಸಿ ಇಟ್ಟಿದ್ದ ಅರ್ಧ ಕೆ.ಜಿಯಿಂದ ಐದು ಕೆ.ಜಿ ತೂಗುತ್ತಿದ್ದ ಕಚ್ಚಾ ಬಾಂಬ್‌ಗಳನ್ನು ಸ್ಥಳದಲ್ಲೇ ನಿಷ್ಕ್ರಿಯಗೊಳಿಸಲಾಗಿದೆ. ಸುರಾನ್ ಕೋಟ್ ಸಮೀಪದ ಸುರಂತಾಲ್‌ನಲ್ಲಿ ಜಂಟಿ ಕಾರ್ಯಾಚರಣೆಯಲ್ಲಿ ಬಕೆಟ್ ಮತ್ತು ಟಿಫನ್ ಬಾಕ್ಸ್‌ನಲ್ಲಿ 5 ಸ್ಫೋಟಕಗಳು, ಗ್ಯಾಸ್ ಸಿಲಿಂಡರ್, ಬೈನಾಕ್ಯುಲರ್ ಮತ್ತಿತರ ವಸ್ತುಗಳು ಪತ್ತೆಯಾಗಿವೆ.

ಪಾಕಿಸ್ತಾನಕ್ಕೆ ಚೀನಾ ಬಲ

ಪಾಕಿಸ್ತಾನದಲ್ಲಿರುವ ಚೀನಾ ರಾಯಭಾರಿ ಜಿಯಾಂಗ್ ಜೈಡಾಂಗ್ ಪಾಕಿಸ್ತಾನ ಅಧ್ಯಕ್ಷ ಆಸಿಫ್ ಅಲಿ ಜರ್ದಾರಿ ಅವರನ್ನು ಭೇಟಿ ಮಾಡಿ ಭಾರತದೊಂದಿಗೆ ನಡೆಯುತ್ತಿರುವ ಪರಿಸ್ಥಿತಿಯ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿದ್ದು, 'ಯಾವುದೇ ಕ್ಷಣದಲ್ಲೂ ನಿಮ್ಮನ್ನು ಬಿಟ್ಟುಕೊಡುವುದಿಲ್ಲ' ಎಂದು ಪಾಕಿಸ್ತಾನಕ್ಕೆ ಚೀನಾ ಅ ಭಯ ನೀಡಿದೆ.

ಪಾಕ್: ಮತ್ತೆ ಕ್ಷಿಪಣಿ ಪರೀಕ್ಷೆ

ಭಾರತದ ಜತೆ ಉದ್ವಿಗ್ನ ಪರಿಸ್ಥಿತಿ ಇರುವಾಗಲೇ ಪಾಕಿಸ್ತಾನವು 120 ಕಿ.ಮೀ. ದೂರ ಕ್ರಮಿಸುವ ಸಾಮರ್ಥ್ಯ ಇರುವ 'ಫತೇಹ್' ಸರಣಿಯ ನೆಲ ಕ್ಷಿಪಣಿಯ ತರಬೇತಿ ಉಡಾವಣೆಯನ್ನು ಸೋಮವಾರ ಯಶಸ್ವಿಯಾಗಿ ನೆರವೇರಿಸಿದೆ. 26 ಮಂದಿ ಸಾವಿಗೆ ಕಾರಣವಾದ ಪಹಲ್ಗಾಮ್ ದಾಳಿಯ ಬಳಿಕ ಉಭಯ ರಾಷ್ಟ್ರಗಳು ಸಮರಾಭ್ಯಾಸ ನಡೆಸುತ್ತಿವೆ.

ಉಗ್ರರಿಗೆ ಆಸರೆ ಕಾಶ್ಮೀರಿ ಖತಂ

ಉಗ್ರರಿಗೆ ಊಟ-ಆಶ್ರಯ ನೀಡಿ ನೆರವು ನೀಡಿದ್ದ ಇಮ್ತಿಯಾಜ್ ಅಹ್ಮದ್ ಮಾಗ್ರೆ (23) ಎಂಬಾತ ಭದ್ರತಾ ಪಡೆಗಳಿಂದ ತಪ್ಪಿಸಿಕೊಳ್ಳಲು ಹೋಗಿ, ನದಿಗೆ ಹಾರಿ ಮುಳುಗಿ ಸಾವನ್ನಪ್ಪಿದ್ದಾನೆ. ಇಮ್ತಿಯಾಜ್‌ನನ್ನು ಭಯೋತ್ಪಾದಕರು ಅಡಗಿದ್ದ ಸ್ಥಳಕ್ಕೆ ಕೊಂಡೊಯ್ಯುತ್ತಿದ್ದಾಗ, ತಪ್ಪಿಸಿಕೊಳ್ಳಲು ಯತ್ನಿಸಿ, ನದಿಗೆ ಹಾರಿದ್ದಾನೆ. ಈಜಲಾಗದೆ ಮೃತಪಟ್ಟಿದ್ದಾನೆ.

ನಾಗಮೋಹನ್ ದಾಸ್ ನೇತೃತ್ವದ ಆಯೋಗದಿಂದ ಸಮೀಕ್ಷೆ ಆರಂಭ
ಒಳಮೀಸಲು ಸಮೀಕ್ಷೆಗೆ 100 ಕೋಟಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಭಾರಿ ವಿವಾದ ಸೃಷ್ಟಿಸಿದ್ದ, ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನ ಪ್ರಮುಖ ಘೋಷಣೆಗಳಲ್ಲಿ ಒಂದಾಗಿದ್ದ ಒಳಮೀಸಲು ಜಾರಿಗೆ ಸಂಬಂಧಿಸಿದ ಸಮೀಕ್ಷೆಗೆ ಸೋಮವಾರದಿಂದ ಅಧಿಕೃತ ಚಾಲನೆ ಸಿಕ್ಕಿದ್ದು, ಮುಂದಿನ 18 ದಿನ ವಿವಿಧ ಹಂತಗಳಲ್ಲಿ ಪರಿಶಿಷ್ಟ ಜಾತಿಯಲ್ಲಿರುವ ಒಳ ಮೀಸಲಿಗೆ ಸಂಬಂಧಿಸಿದಂತೆ ಸಮೀಕ್ಷೆ ನಡೆಯಲಿದೆ.

ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಆಯೋಗ ಒಳ ಮೀಸಲಿಗೆ ಸಂಬಂಧಿಸಿದ ಸಮೀಕ್ಷೆಯನ್ನು 58 ಸಾವಿರ ಶಿಕ್ಷಕರ ಸಹಾಯದೊಂದಿಗೆ ಆರಂಭಿಸಿದ್ದು, ಇದೀಗ ಈ ಸಮೀಕ್ಷೆಗೆ ಬರೋಬ್ಬರಿ ನೂರು ಕೋಟಿ ರು. ಅಗತ್ಯವಿದೆ ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಹೇಳಿದ್ದಾರೆ. ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಒಟ್ಟು 101 ಜಾತಿಗಳಿವೆ. ಈ ಪೈಕಿ ಆದಿ ಕರ್ನಾಟಕ, ಆದಿ ದ್ರಾವಿಡ ಮತ್ತು ಆದಿ ಆಂಧ್ರ ಉಪ ಜಾತಿಗಳು ಯಾವ ಜಾತಿಗೆ ಸೇರಿವೆ ಎಂಬ ಗೊಂದಲವನ್ನೂ ಇತ್ಯರ್ಥಪಡಿಸಬೇಕಾಗಿದೆ. ದಾಖಲೆ, ಪುರಾವೆ, ಅಂತರ್ ಹಿಂದುಳಿದಿರುವಿಕೆ ಇನ್ನಿತರ ಮಾಹಿತಿ ಸಂಗ್ರಹಿಸಿ ವೈಜ್ಞಾನಿಕ ಮತ್ತು ತರ್ಕಬದ್ಧವಾಗಿ ಎಸ್‌ಸಿ ಮೀಸಲು ವರ್ಗೀಕರಣ ನಡೆಸುವ ಜವಾಬ್ದಾರಿಯಿದೆ.

ಹಂತ 1	ಮೇ 5ರಿಂದ 17	ಮನೆ ಮನೆಗೆ ಹೋಗಿ ದತ್ತಾಂಶ ಸಂಗ್ರಹ
ಹಂತ 2	ಮೇ 19ರಿಂದ 21	ವಿಶೇಷ ಶಿಬಿರಗಳ ಮೂಲಕ ಮಾಹಿತಿ ಸಂಗ್ರಹ
ಹಂತ 3	ಮೇ 19ರಿಂದ 23	ಆನ್‌ಲೈನ್ ಮೂಲಕ ಸ್ವಯಂ ಘೋಷಣೆಗೆ ಅವಕಾಶ

ಹೇಗಿರಲಿದೆ ಸಮೀಕ್ಷಾ ಕಾರ್ಯ?

ಸಮೀಕ್ಷೆ ವೇಳೆ ಕುಟುಂಬದ ಯಾರಾದರೂ ಒಬ್ಬರು ಗಣತಿದಾರರಿಗೆ ಆಧಾರ್ ಕಾರ್ಡ್ ಅಥವಾ ಕುಟುಂಬದ ಪಡಿತರ ಚೀಟಿಯನ್ನು ತೋರಿಸಬೇಕು. ಅಂತರಜಾತಿ ವಿವಾಹವಾದ ಪ್ರಕರಣಗಳಲ್ಲಿ ಹೆಂಡತಿ ಅಥವಾ ಸೊಸೆಗೆ ಜಾತಿ ಬೇರೆಯಿದ್ದರೆ, → 4

ನಾವು ನಮ್ಮ ಚುನಾವಣಾ ಪ್ರಣಾಳಿಕೆಯಲ್ಲೂ ವರದಿ ಜಾರಿ ಬಗ್ಗೆ ಘೋಷಣೆ ಮಾಡಿದ್ದೆವು. ಒಳಮೀಸಲಾತಿ ಪರವಾಗಿ ಸುಪ್ರೀಂ ಕೋರ್ಟ್ ಕೂಡ ಹೇಳಿದೆ. ಸಮುದಾಯದ ಸಂಘಟನೆಗಳು, ಮುಖಂಡರಿಗೂ ನಾವು ಒಳಮೀಸಲಾತಿ ಬಗ್ಗೆ ಭರವಸೆ ನೀಡಿದ್ದೆವು. ಆದ್ದರಿಂದ ದತ್ತಾಂಶ ಸಂಗ್ರಹ ಸಮೀಕ್ಷೆಯಲ್ಲಿ ಪೂರ್ಣವಾಗಿ ತೊಡಗಿಸಿಕೊಂಡು ಮಾಹಿತಿ ಕೊಡಿ. ಎಲ್ಲ ಸಂಘಟನೆಗಳೂ ಇದಕ್ಕೆ ಸಹಕರಿಸಿ.
– **ಸಿದ್ದರಾಮಯ್ಯ**, ಮುಖ್ಯಮಂತ್ರಿ

ಮಾಜಿ ಮುಖ್ಯಮಂತ್ರಿ ಕೆ.ಸಿ.ರೆಡ್ಡಿ ಅವರ ಜನ್ಮದಿನದ ಅಂಗವಾಗಿ ಅವರ ಪ್ರತಿಮೆ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದರು.

ಸೀಲ್ ಇಲ್ಲದ ಪ್ರಶ್ನೆಪತ್ರಿಕೆ ಬಂಡಲ್, ಪರೀಕ್ಷಾರ್ಥಿಗಳ ಆರೋಪ, ಆಯೋಗಕ್ಕೆ ದೂರು
ಕೆಎಎಸ್ ಪ್ರಶ್ನೆಪತ್ರಿಕೆ ಮತ್ತೆ ಸೋರಿಕೆ?

ಬೆಂಗಳೂರು: ಸದಾ ಒಂದಿಲ್ಲೊಂದು ವಿವಾದಗಳಿಂದಲೇ ಸುದ್ದಿಯಾಗುವ ಕೆಪಿಎಸ್‌ಸಿ, ಹಲವು ಗೊಂದಲಗಳ ನಡುವೆ ನಡೆಸಿದ ಕೆಎಎಸ್ ಮುಖ್ಯಪರೀಕ್ಷೆಯ ಪ್ರಶ್ನೆಪತ್ರಿಕೆಯೂ ಎರಡು ದಿನಗಳ ಮೊದಲೇ ಸೋರಿಕೆಯಾಗಿದೆ ಎನ್ನುವ ಗಂಭೀರ ಆರೋಪ ಕೇಳಿಬಂದಿದೆ.

ಮೈಸೂರು ರಸ್ತೆಯ ಬಿಬಿಎಂಪಿ ಪಿಯು ಕಾಲೇಜುನಲ್ಲಿ ನಡೆದ ಈ ಘಟನೆಯಿಂದ ಪರೀಕ್ಷಾ ನಿಯಮಾವಳಿಗಳ ಉಲ್ಲಂಘನೆಯಾಗಿದೆ. ಕೆಎಎಸ್ ಮುಖ್ಯ ಪರೀಕ್ಷೆಯ ಎರಡನೇ ದಿನದ ಪ್ರಬಂಧ ಮಾದರಿ ಪರೀಕ್ಷೆಯ ಸಂದರ್ಭದಲ್ಲಿ, ಪ್ರಶ್ನೆ ಪತ್ರಿಕೆ ಬಂಡಲ್‌ನ ಸೀಲ್ ಮೊದಲೇ ತೆರೆದ ಸ್ಥಿತಿಯಲ್ಲಿ ಕಂಡುಬಂದಿದೆ. → 4

ಪ್ರತಿಕ್ರಿಯೆ ನೀಡದ ಕೆಪಿಎಸ್‌ಸಿ

ಅಭ್ಯರ್ಥಿಗಳು ಘಟನೆಯ ಬಗ್ಗೆ ಬಿಬಿಎಂಪಿ ಪಿಯು ಕಾಲೇಜಿನ ಪ್ರಾಂಶುಪಾಲರಿಗೆ ಪ್ರಾಥಮಿಕ ದೂರು ಸಲ್ಲಿಸಿದ್ದಾರೆ. ಜತೆಗೆ, ಕೆಪಿಎಸ್‌ಸಿಗೆ ಪತ್ರ ಬರೆದು, ಈ ವಿಷಯದ ತನಿಖೆಗೆ ಒತ್ತಾಯಿಸಿದ್ದಾರೆ. ಕೆಪಿಎಸ್‌ಸಿ ಈ ಆರೋಪಗಳ ಕುರಿತು ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ. ಅಭ್ಯರ್ಥಿಗಳ ಒತ್ತಾಯದ ಮೇರೆಗೆ ತನಿಖೆ ನಡೆಯುವ ಸಾಧ್ಯತೆಯಿದೆ. ಪರೀಕ್ಷೆಯ ವಿಶ್ವಾಸಾರ್ಹತೆ ಕಾಪಾಡಲು ಕೆಪಿಎಸ್‌ಸಿ ಕ್ರಮಕೈಗೊಳ್ಳಬೇಕು ಎಂದು ಅಭ್ಯರ್ಥಿಗಳು ಆಗ್ರಹಿಸಿದ್ದಾರೆ.

ವಕ್ಫ್ ವಿಚಾರಣೆ ಮುಂದೂಡಿಕೆ

ದೆಹಲಿ: ವಿವಾದಾತ್ಮಕ ವಕ್ಫ್(ತಿದ್ದುಪಡಿ) ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಗಳ ಬ್ಯಾಚ್ ಅನ್ನು ಮೇ 15ರಂದು ಭಾರತದ ನಿಯೋಜಿತ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ವಿಚಾರಣೆ ನಡೆಸಲಿದ್ದಾರೆ ಎಂದು ಸುಪ್ರೀಂಕೋರ್ಟ್ ಸೋಮವಾರ ಹೇಳಿದೆ.

ಮೇ 13ರಂದು ನಿವೃತ್ತರಾಗಲಿರುವ ಹಾಲಿ ಸಿಜೆಐ ಸಂಜೀವ್ ಖನ್ನಾ ಅವರು, ಕಾನೂನಿನ ಕೆಲವು ಅಂಶಗಳಿಗೆ ಸ್ಪಷ್ಟೀಕರಣದ ಅಗತ್ಯವಿರುವುದರಿಂದ ಈ ವಿಷಯದ ಕುರಿತು ತೀರ್ಪು ಅಥವಾ ಮಧ್ಯಂತರ ಆದೇಶವನ್ನು ಕಾಯ್ದಿರಿಸಲು ಬಯಸುವುದಿಲ್ಲ ಎಂದು ತಿಳಿಸಿದರು. ಮೇ 15ರಿಂದ ಗವಾಯಿ ನೇತೃತ್ವದ ಪೀಠ ವಿಚಾರಣೆ ಮುಂದುವರಿಸಲಿದೆ.

ಸುಹಾಸ್ ಶೆಟ್ಟಿ ಹತ್ಯೆಗೆ ವಿದೇಶದಿಂದ ಹಫ್ತಾ?

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ತೀವ್ರ ವಾಕ್ಸಮರಕ್ಕೆ ಕಾರಣವಾಗಿರುವ ಸುಹಾಸ್ ಶೆಟ್ಟಿ ಹತ್ಯೆಗೆ ವಿದೇಶದಿಂದ ಬಂದ ಹಣದ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಕೊಲೆ ಪ್ರಕರಣದಲ್ಲಿ ಈಗಾಗಲೇ ಬಂಧಿತರಾಗಿರುವ 8 ಆರೋಪಿಗಳ ವಿವಿಧ ಬ್ಯಾಂಕ್ ಖಾತೆಗಳ ಪರಿಶೀಲನೆ ನಡೆದಿದೆ. ಕೊಲೆಯಾಗಿರುವ ಫಾಝಿಲ್ ಸಹೋದರ ಆದಿಲ್ ಆರೋಪಿಗಳಿಗೆ 5 ಲಕ್ಷ ರು. ಸುಪಾರಿ ಕೊಟ್ಟಿರುವುದಲ್ಲದೇ ವಿವಿಧ ಮೂಲಗಳಿಂದ ಆರೋಪಿಗಳಿಗೆ ಹಣ ಬಂದಿರುವ ಶಂಕೆ ಇದೆ.

ಜನಿವಾರ ತೆಗೆಸಿದ್ದ ಇಬ್ಬರು ಬಂಧನ

ಕಲಬುರಗಿ: ನೀಟ್ ಬರೆಯಲು ಬಂದಿದ್ದ ವಿದ್ಯಾರ್ಥಿಗೆ ಜನಿವಾರ ತೆಗೆಯುವಂತೆ ಒತ್ತಾಯಿಸಿದ ಆರೋಪದ ಮೇಲೆ ಶರಣಗೌಡ ಮತ್ತು ಗಣೇಶ್ ಎಂಬ ಪರೀಕ್ಷಾ ಕೇಂದ್ರದ ಸಿಬ್ಬಂದಿಯನ್ನು ಪೊಲೀಸರು ಸೋಮವಾರ ಬಂಧಿಸಿದ್ದಾರೆ. ವಿದ್ಯಾರ್ಥಿ ಶ್ರೀಪಾದ್ ಪಾಟೀಲ್ ನೀಡಿದ ದೂರಿನ ಆಧಾರದ ಮೇಲೆ ಕಲಬುರಗಿಯ ಸ್ಟೇಷನ್ ಬಜಾರ್ ಪೊಲೀಸರು ಭಾರತೀಯ ನ್ಯಾಯ ಸಂಹಿತಾ ಕಾಯ್ದೆಯ ಸೆಕ್ಷನ್ 298ರ ಅಡಿಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಬಂಧಿತರು ಖಾಸಗಿ ಏಜೆನ್ಸಿಯಲ್ಲಿ ಕೆಲಸ ಮಾಡುತ್ತಿದ್ದು, ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಕಲಬುರಗಿ ಪೊಲೀಸ್ ಆಯುಕ್ತ ಎಸ್.ಡಿ.ಶರಣಪ್ಪ ತಿಳಿಸಿದ್ದಾರೆ.

ಉಬರ್: ಆರ್‌ಸಿಬಿ ಅರ್ಜಿ ವಜಾ

ದೆಹಲಿ: ಐಪಿಎಲ್‌ನ ಸನ್‌ರೈಸರ್ಸ್ ಹೈದರಾಬಾದ್ ತಂಡದ ಸ್ಫೋಟಕ ಬ್ಯಾಟರ್ ಟ್ರಾವಿಸ್ ಹೆಡ್ ಅವರನ್ನೊಳಗೊಂಡ ಉಬರ್ ಮೋಟೋದ ಯೂಟ್ಯೂಬ್ ಜಾಹೀರಾತಿಗೆ ಮಧ್ಯಂತರ ತಡೆ ಕೋರಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಸಲ್ಲಿಸಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ಸೋಮವಾರ ವಜಾಗೊಳಿಸಿದೆ. ನ್ಯಾಯಮೂರ್ತಿ ಸೌರಭ್ ಬ್ಯಾನರ್ಜಿ, ಆಕ್ಷೇಪಾರ್ಹ ಜಾಹೀರಾತು ಕ್ರಿಕೆಟ್‌ಗೆ ಸಂಬಂಧಿಸಿದೆ. ಈ ಹಂತದಲ್ಲಿ ಜಾಹೀರಾತು ಸಮಸ್ಯಾತ್ಮಕ ಅಥವಾ ಕಾನೂನುಬಾಹಿರ ಎನ್ನಲಾಗುವುದಿಲ್ಲ. ಹೀಗಾಗಿ ಅದರಲ್ಲಿ ಹಸ್ತಕ್ಷೇಪ ಸಾಧ್ಯವಿಲ್ಲ. ಆದ್ದರಿಂದ, ಅರ್ಜಿಯನ್ನು ವಜಾಗೊಳಿಸಲಾಗಿದೆ ಎಂದು ನ್ಯಾಯಾಲಯ ಹೇಳಿದೆ.

ರೈತರ ಪಂಪ್‌ಸೆಟ್‌ಗೆ ಹಗಲಲ್ಲೇ ಕರೆಂಟ್

ಹಾವೇರಿ: ಕುಸುಮ್ ಯೋಜನೆ ಮೂಲಕ ಪ್ರತಿ ತಾಲೂಕಿನಲ್ಲಿ 20 ಮೆ.ವ್ಯಾ ಸಾಮರ್ಥ್ಯದ ಸೋಲಾರ್ ವಿದ್ಯುತ್ ಘಟಕ ಸ್ಥಾಪನೆ ಮಾಡಿ ಇದರಿಂದ ಹಗಲು ಹೊತ್ತಿನಲ್ಲಿಯೇ ರೈತರ ಪಂಪ್ ಸೆಟ್‌ಗಳಿಗೆ ವಿದ್ಯುತ್ ನೀಡಲು ಸರಕಾರ ತೀರ್ಮಾನ ಮಾಡಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು. ಮಾಜಿ ಸಿಎಂ ಬಂಗಾರಪ್ಪ ಅವರ ಅವಧಿಯಲ್ಲಿ ರೈತರ ಪಂಪ್ ಸೆಟ್ ಗೆ ಉಚಿತ ವಿದ್ಯುತ್ ನೀಡಲಾಯಿತು. 2013 ರ ಕಾಂಗ್ರೆಸ್ ಸರಕಾರದ ವೇಳೆ ನಾನು ಇಂಧನ ಸಚಿವನಾಗಿದ್ದಾಗ ರೈತರ ಪಂಪ್ ಸೆಟ್‌ಗಳಿಗೆ ನೀಡುವ ತ್ರೀ ಫೇಸ್ ವಿದ್ಯುತ್ ಪೂರೈಕೆಯನ್ನು 6 ಗಂಟೆಯಿಂದ 7 ಗಂಟೆಗೆ ಹೆಚ್ಚಳ ಮಾಡಲಾಯಿತು ಎಂದು ಹೇಳಿದರು.

ಕ್ಷಮೆ ಕೇಳಲು ಚಲನಚಿತ್ರ ವಾಣಿಜ್ಯ ಮಂಡಳಿ ಪಟ್ಟು | ಗಾಯಕನ ವಿರುದ್ಧ ಎಫ್‌ಐಆರ್ ದಾಖಲು
ಸೋನು ನಿಗಮ್‌ಗೆ ಕನ್ನಡ ಚಿತ್ರರಂಗ ಬಹಿಷ್ಕಾರ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಕನ್ನಡ ಹಾಡುಗಳನ್ನು ಹೇಳುವಂತೆ ಕೇಳಿದ ಕನ್ನಡಿಗರನ್ನು ಪೆಹಲ್ಗಾಮ್ ಉಗ್ರರಿಗೆ ಹೋಲಿಕೆ ಮಾಡಿ ದುರ್ವರ್ತನೆ ತೋರಿಸಿದ ಗಾಯಕ ಸೋನು ನಿಗಮ್ ವಿರುದ್ಧ ಕನ್ನಡ ಚಿತ್ರರಂಗದಿಂದ ಅಸಹಕಾರ ನಿರ್ಣಯ ಕೈಗೊಳ್ಳಲಾಗಿದೆ. ಕನ್ನಡ ಚಿತ್ರರಂಗದಿಂದ ಜೀವನ ಕಟ್ಟಿಕೊಂಡ ಹಿಂದಿ ಗಾಯಕ ಸೋನು ನಿಗಮ್ ಕಾಲೇಜೊಂದರ ಕಾರ್ಯಕ್ರಮಕ್ಕೆ ಬಂದು ಕನ್ನಡದ ಹಾಡುಗಳನ್ನು ಹೇಳುವಂತೆ ಕೇಳಿದ ಕನ್ನಡಿಗರನ್ನು ಪೆಹಲ್ಗಾಮ್ ಉಗ್ರರಿಗೆ ಹೋಲಿಕೆ ಮಾಡಿ ಕುಚೇಷ್ಟೆ ಮೆರೆದಿದ್ದರು. ಇದರ ಬಳಿಕ ಕನ್ನಡಪರ ಸಂಘಟನೆಗಳು ಕ್ಷಮೆ ಕೋರುವಂತೆ ಆಗ್ರಹಿಸಿದ ನಂತರ, ಕ್ಷಮೆ ಕೇಳದೇ ತನ್ನ ಹೇಳಿಕೆಗೆ ಸ್ಪಷ್ಟನೆ ಕೊಡುವ ಜತೆಗೆ ಮತ್ತೊಮ್ಮೆ ಕನ್ನಡಿಗರನ್ನು ಪುಂಡರು ಎಂದು ಚಿತ್ರಿಸಿ ವಿಡಿಯೋ ಹರಿಬಿಟ್ಟಿದ್ದರು. → 4

ನಾರಾಯಣ ಗೌಡ ನೇತೃತ್ವದಲ್ಲಿ ಕರವೇ ಪ್ರತಿಭಟನೆ.

ಬಂಧನಕ್ಕೆ ಒತ್ತಾಯ

ಕಾಶ್ಮೀರದಲ್ಲಿ ಇತ್ತೀಚಿಗೆ ನಡೆದ ಭಯೋತ್ಪಾದನಾ ದಾಳಿಗೆ ಸಂಬಂಧ ಕಲ್ಪಿಸಿ ಕನ್ನಡ ಮತ್ತು ಕನ್ನಡಗರಿಗೆ ಅವಮಾನ ಮಾಡಿರುವ ಗಾಯಕ ಸೋನು ನಿಗಮ್‌ನನ್ನು ಬಂಧಿಸಿ ಕಾನೂನು ಪ್ರಕಾರ ಶಿಕ್ಷೆ ವಿಧಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ನಾರಾಯಣಗೌಡ ರಾಜ್ಯ ಸರಕಾರವನ್ನು ಒತ್ತಾಯಿಸಿದ್ದಾರೆ.

ಸೋನು ಕ್ಷಮೆ



ಕ್ಷಮೆ ಯಾಚಿಸಲು ನಿರಾಕರಿಸಿದ್ದ ಗಾಯಕ ಸೋನು ನಿಗಮ್, ಬಹಿಷ್ಕಾರದ ಸುದ್ದಿ ತಿಳಿಯುತ್ತಲೇ ಕ್ಷಮೆ ಯಾಚಿಸಿದ್ದಾರೆ. 'Sorry Karnataka', ನಿಮ್ಮ ಮೇಲಿನ ನನ್ನ ಪ್ರೀತಿ ಅಹಂಗಿಂತ ದೊಡ್ಡದು. ಯಾವಾಗಲೂ ನಿಮ್ಮನ್ನು ಪ್ರೀತಿಸುವೆ ಎಂದು ಇನ್ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಗೋವಾಕ್ಕೆ ಹೆದರಿದ ಪ್ರಧಾನಿ

ಹುಬ್ಬಳ್ಳಿ: ಗೋವಾ ರಾಜ್ಯಕ್ಕೆ ಹೆದರಿಕೊಂಡು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮಹದಾಯಿ ಯೋಜನೆಗೆ ಅನುಮತಿ ಕೊಡಿಸುತ್ತಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಅವರು ಭಾನುವಾರ ಗಂಭೀರ ಆರೋಪ ಮಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಹ್ಲಾದ್ ಜೋಶಿ ಮೊದಲು ಮಹದಾಯಿ ಬಗ್ಗೆ ಮಾತಾಡಲಿ. ಮಹದಾಯಿ ಯೋಜನೆಗೆ ಎನ್ವಿರಾನ್ಮೆಂಟ್ ಕ್ಲಿಯರೆನ್ಸ್ ಯಾಕೆ ಕೊಡಿಸುತ್ತಿಲ್ಲಾ? ಗೋವಾಕ್ಕೆ ಹೆದರಿಕೊಂಡು ಮೋದಿ ಅವರು ಅನುಮತಿ ಕೊಡಿಸುತ್ತಿಲ್ಲ. ಪ್ರಲ್ಹಾದ್ ಜೋಶಿ ಆ ಬಗ್ಗೆ ಪ್ರಧಾನಿ ಮೋದಿ ಮುಂದೆ ಮಾತಾಡುತ್ತಿಲ್ಲ. ನಾವು ಅನೇಕ ಸಲ ಕೇಂದ್ರಕ್ಕೆ ಹೋಗಿ ಮನವಿ ಮಾಡಿದ್ದೇವೆ. ಆದರೂ ಪ್ರಯೋಜನವಾಗಿಲ್ಲ ಎಂದು ಹೇಳಿದರು. ಆಧಾರರಹಿತ ಆರೋಪಗಳನ್ನು ಮಾಡುವ ಬದಲು ಕೇಂದ್ರ ಸಚಿವ ಸಂಪುಟದ ಹಿರಿಯ ಸದಸ್ಯರಾಗಿ ಜೋಶಿ ಅವರು ದೀರ್ಘಕಾಲದಿಂದ ಬಾಕಿ ಇರುವ ಯೋಜನೆಗೆ ಅಗತ್ಯವಾದ ಅನುಮೋದನೆಗಳನ್ನು ಪಡೆಯಲು ತಮ್ಮ ಪ್ರಭಾವವನ್ನು ಬಳಸಬೇಕು. ಮಹದಾಯಿ ಯೋಜನೆ ಕುರಿತು ಕೇಂದ್ರದ ಮೇಲೆ ಒತ್ತಡ ಹೇರಬೇಕು ಎಂದು ತಿಳಿಸಿದರು.

ಸೊಂಪಾದ ಪುಟಗಳು

ಶಾಂತಿಯ ತೋಟಕ್ಕೆ ಒಲ್ಲೆಕೆಯೇ ತೊಡಕು
ಅಶ್ವತ್ಥಕಟ್ಟೆ
ರಂಜಿತ್ ಎಚ್. ಅಶ್ವತ್ಥ

ಕನ್ನಡ ಉಳಿಸುವುದು, ಬೆಳೆಸುವುದು ನಮ್ಮ ಕೈಲಿದೆ!
ವಿಶ್ವರಂಗ
ರಂಗಸ್ವಾಮಿ ಮೂಕನಹಳ್ಳಿ

ದಾರಿದೀಪೋಕ್ತಿ

ಯಾರೂ ಸಹ ಯಾವತ್ತೂ ಬ್ಯುಸಿಯಾಗಿರುವುದಿಲ್ಲ. ನೀವು ಯಾವಾಗ ಕೇಳಿದರೂ ಅವರು ಬ್ಯುಸಿ ಎಂದು ಹೇಳಿದರೆ ಅವರಿಗೆ ನಿಮ್ಮನ್ನು ಭೇಟಿಯಾಗುವ ಮನಸ್ಸು ಇಲ್ಲ ಎಂದರ್ಥ. ನಿಮ್ಮನ್ನು ಭೇಟಿ ಮಾಡಲು ಬಯಸಿದವರು ಸಮಯ ಇಲ್ಲ ಎನ್ನುವ ಕಾರಣ ನೀಡುವುದಿಲ್ಲ.

ವಕ್ರತುಂಡೋಕ್ತಿ

ಎಲ್ಲಿ ತನಕ ಏನೂ ಆಗುವುದಿಲ್ಲವೋ, ಅಲ್ಲಿ ತನಕ ವಿಮಾನ ಪ್ರಯಾಣ ಅತ್ಯಂತ ಸುರಕ್ಷಿತ.

ರೌಡಿಶೀಟರ್ ಕೊಲೆ

ಮೈಸೂರು: ತಾಲೂಕಿನ ವರುಣಾ ಗ್ರಾಮದ ಬಳಿಯ ಹೋಟೆಲ್ ಮುಂಭಾಗ ಭಾನುವಾರ ತಡರಾತ್ರಿ ರೌಡಿಶೀಟರ್‌ನನ್ನು ಮಚ್ಚಿನಿಂದ ಹಲ್ಲೆ ಮಾಡಿ ದುಷ್ಕರ್ಮಿಗಳು ಕೊಲೆ ಮಾಡಿದ್ದಾರೆ. ನಗರದ ಕ್ಯಾತಮಾರನಹಳ್ಳಿ ನಿವಾಸಿ ಕಾರ್ತಿಕ್ (33) ಕೊಲೆಯಾದ ವ್ಯಕ್ತಿ. ಹಳೆ ವೈಷಮ್ಯದಿಂದ ಕೊಲೆ ನಡೆದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ವರುಣಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

ಫನ್‌ತರಂಗ
- ರಘುಪತಿ ಶೃಂಗೇರಿ -



ಸಮಾಚಾರ ಸಣ್ಣದಲ್ಲ

ಮರಕ್ಕೆ ಕಾರು ಡಿಕ್ಕಿ : ಮೂವರ ಸಾವು

ಚನ್ನಪಟ್ಟಣ: ಮರಕ್ಕೆ ಕಾರು ಡಿಕ್ಕಿ ಹೊಡೆದು ಮೂವರು ಸಾವಿಗೀಡಾಗಿರುವ ಘಟನೆ ತಾಲೂಕಿನ ಅಮ್ಮಳ್ಳಿ ದೊಡ್ಡಿ ಗ್ರಾಮದ ಬಳಿ ನಡೆದಿದೆ. ಬೆಂಗಳೂರಿನ ಕಾಮಾಕ್ಷಿಪಾಳ್ಯ ನಿವಾಸಿಗಳಾದ ಮಧು, ದೀಪು, ಅಭಿ ಮೃತ ದುರ್ದೈವಿಗಳು. ಕಾರಿನಲ್ಲಿದ್ದ ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಸ್ವಿಫ್ಟ್ ಕಾರಿನಲ್ಲಿ ಕಬ್ಬಾಳಿಗೆ ತೆರಳಿದ್ದ ಇವರು ವಾಪಸ್ ಬರುವ ಸಂದರ್ಭದಲ್ಲಿ ಅಮ್ಮಳ್ಳಿ ದೊಡ್ಡಿ ಬಳಿ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿ ಮರಕ್ಕೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅಕ್ಕೂರು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಆಕಸ್ಮಿಕ ಬಾವಿಗೆ ಬಿದ್ದು ರೈತ ಸಾವು

ಚಿಕ್ಕಬಳ್ಳಾಪುರ: ತಾಲೂಕಿನ ಅಗಲಗುರ್ಕಿ ಗ್ರಾಮದ ಕೆ. ಮುನಿಕೃಷ್ಣಪ್ಪ (70) ಎಂಬ ಹಿರಿಯ ರೈತರೊಬ್ಬರು ತಮ್ಮ ತೋಟದ ಇರುವ ತೆರೆದ ಬಾವಿಗೆ ಆಕಸ್ಮಿಕವಾಗಿ ಕಾಲುಜಾರಿ ಬಿದ್ದ ಪರಿಣಾಮ ಮೃತಪಟ್ಟಿದ್ದಾರೆ. ಭಾನುವಾರ ಬೆಳಗ್ಗೆ ತೋಟದ ಬಳಿ ಹುಡುಕಿದಾಗ ಬಾವಿಯಲ್ಲಿ ಆತನ ಚಪ್ಪಲಿ ಕಾಣಿಸಿಕೊಂಡಿತು. ತಕ್ಷಣವೇ ಕುಟುಂಬಸ್ಥರು ಪೊಲೀಸರಿಗೆ ಹಾಗೂ ಅಗ್ನಿಶಾಮಕ ಸಿಬ್ಬಂದಿ ಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ಮೃತದೇಹವನ್ನು ಜಿಲ್ಲಾಸ್ಪತ್ರೆ ಶವಾಗಾರಕ್ಕೆ ಸಾಗಿಸಿ ಮರಣೋತ್ತರ ಪರೀಕ್ಷೆಗೆ ಒಪ್ಪಿಸಿದರು. ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆಸಿದ್ದಾರೆ.

ಟಿ.ಬಿ.ಶೇಖರ್‌ಗೆ ಅಭಿನಂದನೆ ನಾಳೆ

ತುಮಕೂರು: ಸಾಮಾಜಿಕ, ಧಾರ್ಮಿಕ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ಸೇವೆ ಸಲ್ಲಿಸುತ್ತಿರುವ ಶಬರಿಮಲೆ ಅಯ್ಯಪ್ಪ ಸೇವಾ ಸಮಾಜಂನ ರಾಷ್ಟ್ರೀಯ ಅಧ್ಯಕ್ಷರೂ ಆಗಿರುವ ನಗರದ ಟಿ.ಬಿ.ಶೇಖರ್ ಅವರ ಸೇವೆಯನ್ನು ಗೌರವಿಸಿ ಅಭಿನಂದನಾ ಸಮಿತಿಯು ಮೇ 7ರಂದು ನಗರದಲ್ಲಿ ನಾಗರೀಕ ಸನ್ಮಾನ ಕಾರ್ಯಕ್ರಮ ಹಮ್ಮಿಕೊಂಡಿದೆ. ಡಾ.ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಅಂದು ಸಂಜೆ 4 ಗಂಟೆಗೆ ನಡೆಯುವ ಸಮಾರಂಭದಲ್ಲಿ ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ, ಅಟವಿ ಕ್ಷೇತ್ರದ ಶ್ರೀ ಅಟವಿ ಶಿವಲಿಂಗ ಸ್ವಾಮೀಜಿ, ಹಿರೇಮಠದ ಡಾ.ಶಿವಾನಂದ ಶಿವಾಚಾರ್ಯ ಶ್ರೀ ಸಾನಿಧ್ಯ ವಹಿಸುವರು. ಅಭಿನಂದನಾ ಸಮಿತಿ ಅಧ್ಯಕ್ಷ ಆರ್.ಎಲ್.ರಮೇಶ್‌ಬಾಬು ಅಧ್ಯಕ್ಷತೆ ವಹಿಸುವರು.ಗೃಹ ಸಚಿವ ಡಾ.ಜಿ.ಪರಮೇಶ್ವರ್ ಕಾರ್ಯಕ್ರಮ ಉದ್ಘಾಟಿಸಿದರೆ ಸಹಕಾರ ಸಚಿವ ಕೆ.ಎನ್.ರಾಜಣ್ಣ ಟಿ.ಬಿ.ಶೇಖರ್ ಅವರನ್ನು ಅಭಿನಂದಿಸುವರು. ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಸಿ.ಸೋಮಶೇಖರ್ ಅಭಿನಂದನಾ ನುಡಿ ನುಡಿಯುವರು. ಮೀಜೋರಾಂನ ಮಾಜಿ ರಾಜ್ಯಪಾಲ ಕುಮನಂ ರಾಜಶೇಖರ್ ಜೀ, ಶಾಸಕರಾದ ಜಿ.ಬಿ.ಜ್ಯೋತಿಗಣೇಶ್, ಬಿ.ಸುರೇಶ್‌ಗೌಡ, ಮಾಜಿ ಸಚಿವ ಸೊಗಡು ಶಿವಣ್ಣ ಭಾಗವಹಿಸುವರು.

ಕಾಡೆಮ್ಮೆ ದಾಳಿ: ರೈತ ಸಾವು

ಸಕಲೇಶಪುರ: ತಾಲೂಕಿನ ಕಾಡಾನೆ ಸಮಸ್ಯೆ ಬಿಗಡಾಯಿಸಿ, ಆಗ್ಗಿಂದಾಗ್ಗೆ ಸಾವು-ನೋವು ಘಟಿಸುತ್ತಲೇ ಇವೆ. ಇದೀಗ ಕಾಡೆಮ್ಮೆ ಕಾಟದ ಆತಂಕ ಮನೆ ಮಾಡಿದೆ. ಇದೇ ಮೊದಲು ಎಂಬಂತೆ ಕಾಡೆಮ್ಮೆ ದಾಳಿಗೆ ರೈತ ರೊಬ್ಬರು ಬಲಿಯಾಗಿದ್ದಾರೆ. ತಾಲೂಕಿನ ಕಲ್ಲಹಳ್ಳಿ ಗ್ರಾಮದ ತಿಮ್ಮಪ್ಪ (60) ಮೃತ ದುರ್ದೈವಿ. ಇಂದು ಬೆಳಗ್ಗೆ ಎಂದಿನಂತೆ ಜಮೀನಿನ ಬಳಿಗೆ ತಿಮ್ಮಪ್ಪ ತೆರಳುತ್ತಿದ್ದ ವೇಳೆ, ಈ ವೇಳೆ ಏಕಾಏಕಿ ಕಾಡೆಮ್ಮೆ ದಾಳಿ ಮಾಡಿದೆ. ಕಾಡೆಮ್ಮೆ ಬಲವಾಗಿ ಗುದ್ದಿದ್ದರಿಂದ ರೈತರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನೆ ನಂತರ ಅರಣ್ಯ ಇಲಾಖೆ ವಿರುದ್ಧ ಸ್ಥಳೀಯರು ತೀವ್ರ ಆಕ್ರೋಶ ಹೊರ ಹಾಕಿದರು. ಮಲೆನಾಡು ಭಾಗದಲ್ಲಿ ವನ್ಯ ಜೀವಿಗಳಿಂದ ಒಂದಲ್ಲ ಒಂದು ರೀತಿಯ ಸಾವು ಸಂಭವಿಸುತ್ತಲೇ ಇದ್ದು, ಪರಿಹಾರ ಯಾವಾಗ, ಅದನ್ನು ಸೂಚಿಸುವವರೆಗೂ ಶವ ಮೇಲೆತ್ತಲು ಬಿಡುವುದಿಲ್ಲ ಎಂದು ಸಿಟ್ಟು ಹೊರ ಹಾಕಿದರು. ಕೂಡಲೇ ಸ್ಥಳಕ್ಕೆ ಅರಣ್ಯ ಅಧಿಕಾರಿಗಳು, ಪೊಲೀಸರು ದೌಡಾಯಿಸಿದರು. ಒಟ್ಟಿನಲ್ಲಿ ಜಿಲ್ಲೆಯಲ್ಲಿ ವನ್ಯಜೀವಿ ಮಾನವ ಸಂಘರ್ಷ ಮುಂದುವರಿದಿರುವುದು ಆತಂಕವನ್ನು ಇಮ್ಮಡಿಗೊಳಿಸಿದೆ.

ನಾಳೆ ಶೃಂಗಸಭೆ

ತುಮಕೂರು: ನಗರದ ತುಮಕೂರು ವಿವಿಯ ಆವರಣದಲ್ಲಿ ಮೇ 7ರಂದು ಶೃಂಗಸಭೆ ಹಮ್ಮಿಕೊಳ್ಳಲಾಗಿದೆ ಎಂದು ಹಾಲಪ್ಪ ಪ್ರತಿಷ್ಠಾನದ ಅಧ್ಯಕ್ಷ ಮುರುಳೀಧರ್ ಹಾಲಪ್ಪ ತಿಳಿಸಿದ್ದಾರೆ.

ಹಾಲಪ್ಪ ಪ್ರತಿಷ್ಠಾನದ ವತಿಯಿಂದ 'ನಮ್ಮ ಕನಸು, ನಮ್ಮ ತುಮಕೂರು' ಎಂಬ ಘೋಷವಾಕ್ಯದೊಂದಿಗೆ ಮೂಲ ಸೌಕರ್ಯ , ಕೃಷಿ, ಆರೋಗ್ಯ, ಶಿಕ್ಷಣ, ಕ್ರೀಡೆ, ಮಹಿಳಾ ಮತ್ತು ಯುವ ಸಬಲೀಕರಣದ ಅಭಿವೃದ್ಧಿಗಾಗಿ ಹಲವು ಸಂಸ್ಥೆಗಳೊಂದಿಗೆ ನಡೆಯಲಿದೆ ಎಂದು ತಿಳಿಸಿದ್ದಾರೆ.

{ ಬಿ.ವೈ.ವಿಜಯೇಂದ್ರ } ಬಿಜೆಪಿ ರಾಜ್ಯಾಧ್ಯಕ್ಷ

ಕಾಂಗ್ರೆಸ್ ಸರಕಾರ ತನ್ನ ನೈತಿಕ ಜವಾಬ್ದಾರಿ ಮರೆತು ವರ್ತಿಸುತ್ತಿದೆ. ಕಾನೂನು ಸುವ್ಯವಸ್ಥೆ ಹತೋಟಿಗೆ ತರಲು ಯಾವುದೇ ಕಾನೂನು ಕ್ರಮಕ್ಕೆ ಮುಂದಾಗುತ್ತಿಲ್ಲ. ರಾಜ್ಯದಲ್ಲಿ ಗೃಹ ಇಲಾಖೆ ಸಂಪೂರ್ಣ ನಿಷ್ಕ್ರಿಯವಾಗುವಂತೆ ಕಾಣದ ಪ್ರಭಾವಿ ಕೈ ಗಳು ಕೆಲಸ ಮಾಡುತ್ತಿವೆ. ಇದು ಸುಹಾಸ್ ಶೆಟ್ಟಿ ಕೊಲೆ ಪ್ರಕರಣಗಳಿಂದ ಸ್ಪಷ್ಟವಾಗುತ್ತಿದೆ.



ಒಳಮೀಸಲು ಜಾತಿಗಣತಿ ಸಮೀಕ್ಷೆಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಚಾಲನೆ

ಪ್ರತಿ ಮನೆ ಮಾಹಿತಿ ಕಲೆ ಹಾಕಿ

ತುಮಕೂರು: ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲು ನೀಡಲು ನ್ಯಾ.ಡಾ.ಎಚ್.ಎನ್. ನಾಗಮೋಹನ್ ದಾಸ್ ಏಕ ಸದಸ್ಯ ವಿಚಾರಣಾ ಆಯೋಗದ ಶಿಫಾರಸ್ಸಿನಂತೆ ಜಿಲ್ಲೆಯಲ್ಲಿ ಮೇ 5 ರಿಂದ 17ರವರೆಗೆ ನಡೆಯುವ ಸಮಗ್ರ ಸಮೀಕ್ಷಾ ಕಾರ್ಯದಲ್ಲಿ ಪ್ರತೀ ಮನೆಗೆ ಭೇಟಿ ನೀಡಿ ನೈಜ ಮಾಹಿತಿ ಸಂಗ್ರಹಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಗಣತಿದಾರರಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಶಿಕ್ಷಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಗರದ ಕೋತಿ ತೋಪು ವೃತ್ತದ ಬಳಿ ಸೋಮವಾರ ಸಮೀಕ್ಷೆ-2025ಕ್ಕೆ ಚಾಲನೆ ನೀಡಿ ಮಾತನಾಡಿದರು. ಪರಿಶಿಷ್ಟ ಜಾತಿಗಳ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಸ್ಥಿತಿಗತಿಗಳ ವಾಸ್ತವಾಂಶ ಅರಿಯಲು ಈ ಸಮೀಕ್ಷೆ ನಡೆಸಲಾಗುತ್ತಿದೆ. ದೇಶದಲ್ಲಿಯೇ ಪ್ರಥಮ ಬಾರಿಗೆ ಹಮ್ಮಿಕೊಂಡಿರುವ ಜಾತಿ ಸಮೀಕ್ಷೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಈಗಾಗಲೇ ಚಾಲನೆ ನೀಡಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯ ನಗರ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿಯ ಉಪಜಾತಿಗಳ ಸಮೀಕ್ಷೆ ನಡೆಸಲು 3,000 ಶಿಕ್ಷಕರನ್ನು ಗಣತಿದಾರರನ್ನಾಗಿ ನಿಯೋಜಿಸಲಾಗಿದೆ. ಸಮೀಕ್ಷೆಯು 3 ಹಂತದಲ್ಲಿ ನಡೆಯಲಿದ್ದು, ಮೊದಲ ಹಂತದಲ್ಲಿ ಗಣತಿದಾರರು ಮೇ 5 ರಿಂದ 17ರವರೆಗೆ ಮನೆ-ಮನೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು.

2ನೇ ಹಂತದಲ್ಲಿ ಮೇ 19 ರಿಂದ 21ರವರೆಗೆ ಆಯಾ ಮತಗಟ್ಟೆಗಳಲ್ಲಿ ಸಮೀಕ್ಷೆ ನಡೆಸಲಾಗುವುದು.

ಪ್ರವಾಸದಲ್ಲಿ ರುವವರು, ವಿವಿಧ ಕಾರಣಗಳಿಂದ ಮನೆಯಿಂದ ಹೊರಗಿ ರುವವರು ಮತಗಟ್ಟೆಗಳಿಗೆ ಭೇಟಿ ನೀಡಿ ತಮ್ಮ ಜಾತಿಯ ವಿವರಗಳನ್ನು ದಾಖಲಿಸಬಹುದು ಎಂದು ತಿಳಿಸಿದರು.

3ನೇ ಹಂತದಲ್ಲಿ ಉಪಜಾತಿ ವಿವರವನ್ನು ಆನ್‌ಲೈನ್ ಮೂಲಕ ಸ್ವಯಂ ಘೋಷಿಸಿಕೊಳ್ಳಲು ಮೇ 19 ರಿಂದ 23ರವರೆಗೆ ಕಾಲಾವಕಾಶ ನೀಡಲಾಗುವುದು. ಸ್ವಗ್ರಾಮಕ್ಕೆ ಭೇಟಿ ನೀಡಲು ಸಾಧ್ಯವಾಗದೇ ಇರುವವರು ಮಾಹಿತಿ ನೀಡುವ ಮೂಲಕ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಗಣತಿದಾರರು ಮನೆ-ಮನೆಗೆ ಭೇಟಿ ನೀಡಿದಾಗ ತಮ್ಮ ಆಧಾರ್ ಮತ್ತು ಪಡಿತರ ಚೀಟಿ ಹಾಜರುಪಡಿಸಿ ಜಾತಿಯ ಬಗ್ಗೆ ನಿಖರ ಮಾಹಿತಿ ನೀಡಿ ಸಹಕರಿಸಬೇಕು. ಯಾವುದೇ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅಗತ್ಯವಿರುವುದಿಲ್ಲ. ಇದರಿಂದ ಸರಕಾರದ ಸೌಲಭ್ಯಗಳಿಂದ ಯಾರೂ ವಂಚಿತರಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಮುಖಂಡ ವೈ.ಕೆ. ಬಾಲಕೃಷ್ಣಪ್ಪ ಮಾತನಾಡಿ, ಪರಿಶಿಷ್ಟ ಜಾತಿಯ ಯಾವುದೇ ಕುಟುಂಬ ಹೊರಗುಳಿಯದಂತೆ ಸಮೀಕ್ಷೆ ನಡೆಸಬೇಕು. ಸಮೀಕ್ಷಾ ಕಾರ್ಯವನ್ನು ಯಶಸ್ವಿಯಾಗಿ ನಡೆಸುವಲ್ಲಿ ಸಮುದಾಯದಿಂದ ಜಿಲ್ಲಾಡಳಿತಕ್ಕೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಮತ್ತೊಬ್ಬ ಮುಖಂಡ ದೊರೈರಾಜು ಮಾತನಾಡಿ, ಸುಮಾರು 30 ವರ್ಷಗಳ ಹೋರಾಟದಿಂದ ಸರಕಾರ ಈ ಸಮೀಕ್ಷೆ ನಡೆಸಲು ಮುಂದಾಗಿದೆ. ಗಣತಿದಾರರು ಬಂದಾಗ ಪ್ರಶ್ನಾವಳಿಗಳಿಗೆ ನೈಜ ಉತ್ತರವನ್ನು ನೀಡಬೇಕು ಎಂದು ತಿಳಿಸಿದರು. ಉಪವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ಪಾಲಿಕೆ ಉಪ ಆಯುಕ್ತ ಗಿರೀಶ್, ತಹಶೀಲ್ದಾರ್ ರಾಜೇಶ್ವರಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೃಷ್ಣಪ್ಪ ಉಪಸ್ಥಿತರಿದ್ದರು.

ಎಸ್ಸಿ ಜಾತಿಗಣತಿ ಸಮೀಕ್ಷೆಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಚಾಲನೆ ನೀಡಿದರು.

ಉಪ ಜಾತಿಗಳ ನಿಖರ ಮಾಹಿತಿ ನೀಡಿ

ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು ಮಾತನಾಡಿ, ಪರಿಶಿಷ್ಟ ಜಾತಿಯಲ್ಲಿ 101 ಉಪಜಾತಿಗಳಿದ್ದು, ಗಣತಿದಾರರು ಸಮೀಕ್ಷೆ ನಡೆಸಲು ಮನೆ-ಮನೆಗೆ ಭೇಟಿ ನೀಡಿದಾಗ ಉಪ ಜಾತಿಗಳ ನಿಖರ ಮಾಹಿತಿಯನ್ನು ನೀಡುವ ಮೂಲಕ ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಲು ಸಹಕರಿಸಬೇಕೆಂದು ಮನವಿ ಮಾಡಿದರು.

60 ಅರ್ಜಿಗಳು ಇತ್ಯರ್ಥ

ಉಪಲೋಕಾಯುಕ್ತರಿಂದ ಅಧಿಕಾರಿಗಳ ಸಭೆ

ಚಿಕ್ಕಬಳ್ಳಾಪುರ: ಉಪಲೋಕಾಯುಕ್ತ ಫಣೀಂದ್ರ ಅವರು ಸೋಮವಾರ ಜಿಲ್ಲಾಡಳಿತ ಭವನದಲ್ಲಿ ಸಾರ್ವಜನಿಕರು ಸಲ್ಲಿಸಿದ್ದ ದೂರುಗಳ ಸಂಬಂಧ ದೂರುದಾರರು ಮತ್ತು ಎದುರುದಾರರ ವಿಚಾರಣೆ ಒಂದೇ ದಿನ 60 ಅರ್ಜಿಗಳ ವಿಲೇವಾರಿ ಮಾಡಿ ಜನಸಾಮಾನ್ಯರಲ್ಲಿ ನ್ಯಾಯದಾನದ ಬಗ್ಗೆ ಭರವಸೆ ಮೂಡಿಸಿದರು.

ಮೊದಲಿಗೆ ಸಭೆಯನ್ನುದ್ದೇಶಿಸಿ ಮಾತನಾಡಿದ ಉಪ ಲೋಕಾಯುಕ್ತ ನ್ಯಾ.ಕೆ ಎನ್ ಪಣೀಂದ್ರ ಅವರು, ಸಾರ್ವಜನಿಕರಿಗೆ ಎಲ್ಲಿ, ಯಾರಿಗೆ ಅರ್ಜಿ ಸಲ್ಲಿಸಬೇಕು ಎಂಬ ಕಾನೂನು ತಿಳುವಳಿಕೆ ಇರುವುದಿಲ್ಲ. ಜನರಿಂದ ಅರ್ಜಿಗಳನ್ನು ಸ್ವೀಕರಿಸಿ, ಎಲ್ಲಿಗೆ ಹೋಗಬೇಕು ಎಂಬುದರ ಕುರಿತು ಉಚಿತ ಕಾನೂನು ಸಲಹೆ ಕೊಡಲು ನಾವು ಸಿದ್ಧ. 3 ಲಕ್ಷ ಆದಾಯ ಮಿತಿ ಇರುವವರು ಕೋರ್ಟ್ ಶುಲ್ಕ ಕಟ್ಟುವಂತಿಲ್ಲ ಎಂದು ಹೇಳಿದರು.

ನಮ್ಮ ಬಳಿ ಎಷ್ಟೇ ದಿನ ಪ್ರಕರಣ ಇಟ್ಟುಕೊಂಡರು ಕೆಲ ಪ್ರಕರಣಗಳು ಬಗೆಹರಿಯುವುದಿಲ್ಲ. ಪ್ರತಿ ದಿನ 250-300 ಪ್ರಕರಣಗಳು ದಾಖಲಾಗುತ್ತವೆ. ನಮ್ಮಲ್ಲಿರುವುದು ಕೇವಲ 40 ಜನ ಸಿಬ್ಬಂದಿ ಮಾತ್ರ. ಅರ್ಜಿಗಳು ನನ್ನ ಬಳಿ ಬರುವಷ್ಟರಲ್ಲಿ ತಿಂಗಳಾದರೂ ಅಚ್ಚರಿಯಿಲ್ಲ. ಆದ್ದರಿಂದ, ಅಧಿಕಾರಿಗಳು ಜನರೊಂದಿಗೆ ಅನುಚಿತವಾಗಿ ವರ್ತಿಸಬಾರದು. ಪ್ರಕರಣ ನಿಮ್ಮ ವ್ಯಾಪ್ತಿಗೆ ಬರದೇ ಇದ್ದಲ್ಲಿ ಎಲ್ಲಿಗೆ ಹೋಗಬೇಕು ಎಂಬ ಕುರಿತು ಹೇಳಿ ಕಳಿಸಬೇಕು ಎಂದು ಸಲಹೆ ನೀಡಿದರು.

ದೂರುದಾರರೊಬ್ಬರು ಮಾತನಾಡಿ, ನಮ್ಮ ಖಾತೆ ದುರಸ್ತಿ ಆಗಬೇಕು. 3 ತಿಂಗಳೊಳಗೆ ಖಾತೆ ಮಾಡಿಕೊಡುವಂತೆ ಹೈಕೋರ್ಟ್ ಆದೇಶ ಹೊರಡಿಸಿತ್ತು. ಆದರೆ, ಆದೇಶ ಬಂದು ಒಂದು ವರ್ಷವಾದರೂ ಖಾತೆ ಮಾಡಿಲ್ಲ ಎಂದು ಗೋಳಿಟ್ಟರು. ಇದಕ್ಕೆ ಕುಪಿತಗೊಂಡ ನ್ಯಾಯಮೂರ್ತಿಗಳು, ಒಂದು ಖಾತೆ ಮಾಡಲು ಎಷ್ಟು ವರ್ಷ ಬೇಕು ನಿಮಗೆ. ಯೋಗ್ಯತೆ ಇಲ್ಲ ಎಂದು ಬರೆದು ಕೊಡಿ. ನಾಚಿಕೆ ಆಗಲ್ವಾ.? ಇವರ ಮೇಲೆ ನ್ಯಾಯಂಗ ನಿಂದನೆ ಪ್ರಕರಣ ಹಾಕಿ ಎಂದು ತಹಸೀಲ್ದಾರ್ ಅನಿಲ್ ವಿರುದ್ಧ ಸಿಡಿಮಿಡಿಗೊಂಡರು. ಈವೇಳೆ ಸಮಜಾಯಿಷಿ ನೀಡಿದ ತಹಶೀಲ್ದಾರ್ , ಸ್ವಾಮಿ ಅದು 1.2.5 ರೀತಿ ಖಾತೆ ದುರಸ್ತಿ ಆಗಬೇಕಿದೆ.ಈಗ ತಂತ್ರಾಂಶ ಬೇರೆ ಬಂದಿದೆ ಎಂದು ತಮ್ಮ ಅಳಲನ್ನು ತೋಡಿಕೊಂಡರು. ಸಭೆಯಲ್ಲಿ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಜಿಪಂ ಸಿಇಒ ಪ್ರಕಾಶ್ ನಿಟ್ಟಾಲಿ, ಡಿಎಫ್ಒ ಗಿರೀಶ್, ಲೋಕಾಯುಕ್ತ ಎಸ್ಪಿ ಆಂಟೋನಿ ಜಾನ್ ಅಧಿಕಾರಿಗಳು ಹಾಗೂ ಸಾರ್ವಜನಿಕರು ಹಾಜರಿದ್ದರು.

ಉಪಲೋಕಾಯುಕ್ತ ಫಣೀದ್ರ ಅವರು ಜಿಲ್ಲಾಡಳಿತ ಭವನದಲ್ಲಿ ದೂರುದಾರರ, ಎದುರುದಾರರ ಸಭೆ ನಡೆಸಿದರು.

ಮಾದಿಗ ಎಂದೇ ನಮೂದಿಸಿರಿ

ಆಲನಹಳ್ಳಿ ಮಠದ ಶ್ರೀ ಡಾ.ಸಿದ್ದರಾಜು ಸ್ವಾಮೀಜಿ ಮಾತನಾಡಿದರು.

ತುಮಕೂರು: ಒಳ ಮೀಸಲಾತಿ ಸಂಬಂಧ ಸರ್ವೆ ಕಾರ್ಯ ಆರಂಭಿಸಲು ಮುಂದಾಗಿದೆ. ಸಮೀಕ್ಷಾ ಕಾರ್ಯ ಜಾತಿ ಕಾಲಂನಲ್ಲಿ ಮಾದಿಗ ಎಂದು ನಮೂದಿಸುವಂತೆ ಆಲನಹಳ್ಳಿ ಮಠದ ಶ್ರೀ ಡಾ.ಸಿದ್ದರಾಜು ಸ್ವಾಮೀಜಿ ಮನವಿ ನೀಡಿದರು.

ನಗರದಲ್ಲಿ ಸಮುದಾಯದ ವಿವಿಧ ಮುಖಂಡರು ಮತ್ತು ಆಸಕ್ತ ಹೋರಾಟಗಾರರೊಂದಿಗೆ ಸಭೆ ನಡೆಸಿದ ನಂತರ ಮಾತನಾಡಿ, ಮಾದಿಗ ಸಮುದಾಯ ಸರಕಾರದ ಸೌಲಭ್ಯ ಪಡೆಯಲು ಒಳ ಮೀಸಲಾತಿ ಸಾಕಷ್ಟು ಪ್ರಯೋಜನಕಾರಿ. ಆದ್ದರಿಂದ 61ನೇ ಕಾಲಂನಲ್ಲಿ ಮಾದಿಗ ಎಂದು ನಮೂದಿಸುವಂತೆ ಸಮುದಾಯದ ಜನರಲ್ಲಿ ಮನವಿ ಮಾಡಿದರು.

ಮುಖಂಡ ಬೆಳಗುಂಬ ವೆಂಕಟೇಶ್ ಮಾತನಾಡಿ, ಮಾದಿಗ ಬಂಧುಗಳು ಸ್ವಾಮೀಜಿ ತಿಳಿಸಿದಂತೆ ಜಾತಿ ಕಾಲಂ ನಲ್ಲಿ ಮಾದಿಗ ಎಂದು ನಮೂದಿಸುವ ಮೂಲಕ ಸರ್ವೆ ಕಾರ್ಯಕ್ಕೆ ಸಹಕಾರ ನೀಡಬೇಕಿದೆ ಎಂದು ಮನವಿ ಮಾಡಿದರು.

ಈ ವೇಳೆ ಮುಖಂಡರಾದ ನಂಜುಂಡಯ್ಯ ಯಲ್ಲಾಪುರ, ನರಸಿಂಹರಾಜು, ನಾಗರಾಜು, ಹರೀಶ್ ಬೈರಸಂದ್ರ, ಸುನಿಲ್, ನಾಗರಾಜು, ಕುಮಾರ್, ನಾಗರಾಜ್ ಇದ್ದರು.

ಗುಣಮಟ್ಟದ ಹಾಲು ಪೂರೈಸಿ

ಚಿಕ್ಕನಾಯಕನಹಳ್ಳಿ: ಹಾಲು ಉತ್ಪಾದಕರು ಗುಣಮಟ್ಟದ ಹಾಲನ್ನು ಡೇರಿಗಳಿಗೆ ಪೂರೈಸುವ ಮೂಲಕ ಹಾಲು ಉತ್ಪಾದನೆಯಲ್ಲಿ ನಮ್ಮ ತಾಲೂಕು ಉತ್ತಮ ಧೃಢತೆ ಕಾಯ್ದುಕೊಂಡಿದೆ. ಎಂದು ತುಮುಲ್ ನಿರ್ದೇಶಕ ಬುಳ್ಳೇನಹಳ್ಳಿ ಶಿವಪ್ರಕಾಶ್ ಸಂತಸ ವ್ಯಕ್ತಪಡಿಸಿದರು.

ನಗರದಲ್ಲಿನ ನಂದಿನಿ ಭವನದಲ್ಲಿ ಶುಕ್ರವಾರ ಹಾಲು ಸಂಗ್ರಹಿಸುವ ನಾಲ್ಕು ಸಂಘಗಳ ಕಟ್ಟಡ ನಿರ್ಮಾಣಕ್ಕೆ 10 ಲಕ್ಷ ಮತ್ತು ಮೃತಪಟ್ಟ ರಾಸುಗಳ ಮಾಲೀಕರಿಗೆ 6 ಲಕ್ಷ ಮೊತ್ತದ ವಿಮೆ ಚೆಕ್ ವಿತರಿಸಿ ಮಾತನಾಡಿದರು.

ಗುಣ ಮಟ್ಟದ ಹಾಲು ಒಕ್ಕೂಟದ ಅಭಿವೃದ್ದಿಗೆ ಹಾಗು ಸದೃಢತೆ ಕಾಪಾಡುತ್ತದೆ. ನಾನು ಒಬ್ಬ ರೈತನ ಮಗನಾಗಿದ್ದು ಅನ್ನದಾತರ ಜೀವನ, ಕಷ್ಟ, ಸುಖಗಳ ಬಗ್ಗೆ ಅರಿತಿದ್ದೇನೆ. ಆದ್ದರಿಂದ ತುಮುಲ್ ನಲ್ಲಿ ನನಗೆ ಸಿಕ್ಕಿರುವ ಅಧಿಕಾರವನ್ನು ಕಿಂಚಿತ್ತೂ ವ್ಯರ್ಥವಾಗದಂತೆ ಬಳಸಿಕೊಂಡು ಹೈನೋದ್ಯಮದಲ್ಲಿ ರೈತರ ಜೀವನ ಮಟ್ಟ ಸುಧಾರಣೆಗೆ ಆಗಬೇಕಾದ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಲು ಶ್ರಮಿಸುತ್ತಿದ್ದೇನೆ ಎಂದರು. ಒಕ್ಕೂಟದ ತಾಂತ್ರಿಕ ವಿಭಾಗದ ವ್ಯವಸ್ಥಾಪಕ ಚಂದ್ರಶೇಖರ್ ಕೇದನೂರಿ, ಮೇಲ್ವಿಚಾರಕರು ಹಾಜರಿದ್ದರು.

ನಗರದ ನಂದಿನಿ ಭವನದಲ್ಲಿ ರೈತರಿಗೆ ಸಹಾಯಧನದ ಚೆಕ್ ವಿತರಿಸಲಾಯಿತು.

ಸೃಜನಶೀಲತೆ ಕಲಿಸುವ ಶಿಬಿರ

ಕೋಲಾರದ ರತ್ನಮಾಲಾ ಮಹಿಳಾ ಮಂಡಳಿಯಿಂದ ನಡೆದ ಬೇಸಿಗೆ ಶಿಬಿರದ ಸಮಾರೋಪ.

ಕೋಲಾರ: ಬೇಸಿಗೆ ಶಿಬಿರಗಳು ಮಕ್ಕಳ ಪ್ರಗತಿಗೆ ಪೂರಕ ಆಗುವ ಜತೆಗೆ ಮೊಬೈಲ್,ಟಿವಿ ಗೀಳನ್ನು ಸ್ವಲ್ಪ ಮಟ್ಟಿಗೆ ಕಡಿಮೆ ಮಾಡುತ್ತದೆ ಎಂದು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಗೀತಾ ಹೇಳಿದರು.

ನಗರದ ಪಿಸಿ ಬಡಾವಣೆಯ ರತ್ನಮಾಲಾ ಮಹಿಳಾ ಮಂಡಳಿಯಿಂದ ಸ್ಕೌಟ್ಸ್ ಭವನದಲ್ಲಿ ನಡೆದ ಒಂದು ತಿಂಗಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದರು.

ಸಾಂಪ್ರದಾಯಿಕ ಶಿಕ್ಷಣವನ್ನು ವರ್ಷ ಪೂರಾ ಕಲಿಕೆ ಮಾಡುವ ಮಕ್ಕಳು ಬೇಸಿಗೆ ರಜೆಯಲ್ಲಾದರೂ ತಮ್ಮ ಅಭಿರುಚಿಗೆ ತಕ್ಕಂತೆ ಸಮಯ ಕಳೆಯುವ ಮೂಲಕ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಲು ಅನುವು ಮಾಡಿಕೊಡುವುದು ಶ್ಲಾಘನೀಯ ಎಂದರು. ಕನ್ನಡ-ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ ಮಾತನಾಡಿ, ಹೆಣ್ಣು ಮಕ್ಕಳು ಉದ್ಯೋಗ - ಹಣ ಗಳಿಕೆ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವಾಗ ರತ್ನಮಾಲಾ ಮಹಿಳಾ ಮಂಡಳಿ ಬೇಸಿಗೆ ಶಿಬಿರ ನಡೆಸಿ ಚಿಣ್ಣರಲ್ಲಿ ಸೃಜನಶೀಲ ಚಟುವಟಿಕೆ ಕಲಿಸುತ್ತಿರುವುದು ಮಾದರಿ ಎಂದರು. ಮಹಿಳಾ-ಮಕ್ಕಳ ಅಭಿವೃದ್ಧಿ ಇಲಾಖೆ ಅಧೀಕ್ಷಕಿ ಮಂಜುಳಾ ಮಾತನಾಡಿ, ಮಕ್ಕಳು ಶಿಬಿರದಲ್ಲಿ ಕಲಿತಿರುವ ಹವ್ಯಾಸಗಳನ್ನು ಮುನ್ನಡೆಸಿಕೊಂಡು ಹೋಗಬೇಕೆಂದರು. ಮಹಿಳಾ ಮಂಡಳಿ ಸಿಇಒ ರತ್ನಮಾಲಾ ಮಾತನಾಡಿ, ಈ ವರ್ಷ ನಿರೀಕ್ಷೆಗೂ ಮೀರಿದ ಸ್ಪಂದನೆ ಸಿಕ್ಕಿರುವುದು ಸ್ಫೂರ್ತಿ ಬಂದಿದೆ ಎಂದು ನುಡಿದರು.

ಸಚಿವ ರಾಜಣ್ಣ ರ 75ನೇ ಹುಟ್ಟು ಹಬ್ಬ ಮೇ 13ಕ್ಕೆ

'ಸಹಕಾರ ಸಾರ್ವಭೌಮ' ಅಭಿನಂದನಾ ಗ್ರಂಥ ಬಿಡುಗಡೆ

ತುಮಕೂರು: ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಅವರ 75ನೇ ಹುಟ್ಟು ಹಬ್ಬದ ಅಂಗವಾಗಿ ಅಮೃತ ಮಹೋತ್ಸವ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆ ಕಾರ್ಯಕ್ರಮ ಮೇ 13ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಕಾಂಗ್ರೆಸ್ ಮುಖಂಡ ಎನ್.ಗೋವಿಂದರಾಜು ತಿಳಿಸಿದರು.

ನಗರದ ಕನ್ನಡ ಭವನದಲ್ಲಿ ಕೆ.ಎನ್.ಆರ್.ಅಭಿನಂದನಾ ಗ್ರಂಥ ಬಿಡುಗಡೆ ಸಮಿತಿಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಸಚಿವರಾದ ಕೆ.ಎನ್.ರಾಜಣ್ಣ ಅವರ ಐದು ದಶಕಗಳ ರಾಜಕೀಯ ಜೀವನವನ್ನು ಅವಲೋಕಿ ಸಿದರೆ ಜಿಲ್ಲೆಯ ರಾಜಕೀಯ, ಸಹಕಾರ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಯುವ ಪೀಳಿಗೆಗೆ ಪರಿಚಯಿಸುವ ಸಲುವಾಗಿ ಅವರ ಅಭಿಮಾನಿಗಳು ಅಮೃತ ಮಹೋತ್ಸವ ಹಾಗೂ ಅಭಿನಂದನಾ ಗ್ರಂಥ 'ಸಹಕಾರ ಸಾರ್ವಭೌಮ' ಅಭಿನಂದನಾ ಗ್ರಂಥ ಸಮರ್ಪಣೆಯನ್ನು ಹಮ್ಮಿಕೊಂಡಿದೆ ಎಂದರು. ಮಾಜಿ ಶಾಸಕ ಎಸ್.ಷಫಿ ಅಹಮದ್ ಮಾತನಾಡಿ, ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಎಲ್ಲಾ ವರ್ಗದ ಜನರಿಗೆ ಬೇಕಾದ ವ್ಯಕ್ತಿ, ಹಾಗಾಗಿ ನಗರದ 35 ವಾರ್ಡುಗಳಲ್ಲಿ ಜನರನ್ನು ಸಮಾರಂಭಕ್ಕೆ ಕರೆತರುವ ಕೆಲಸ ಮುಖಂಡರು ಮಾಡಬೇಕಾಗಿದೆ. ಕಾರ್ಯಕ್ರಮ ಹಬ್ಬದ ರೀತಿ ನಡೆಯಬೇಕು ಎಂದು ಪಕ್ಷದ ಕಾರ್ಯಕರ್ತರಿಗೆ ಸಲಹೆ ನೀಡಿದರು.

ಕಾಂಗ್ರೆಸ್ ಮುಖಂಡ ಇಕ್ಬಾಲ್ ಅಹಮದ್ ಮಾತನಾಡಿ, ಕಾರ್ಯಕ್ರಮ ಕಾಂಗ್ರೆಸ್ ಕಾರ್ಯಕರ್ತರಿಗೆ ಒಂದು ರೀತಿಯ ಪಕ್ಷ ಸಂಘಟನೆಯ ಜತೆಗೆ, ನಗರಪಾಲಿಕೆಯ ಚುನಾವಣಾ ತಾಲೀಮು ಎಂಬಂತಿದೆ.ಇಲ್ಲಿ ತಮ್ಮ ಶಕ್ತಿ ಏನು ಎಂಬುದನ್ನು ತೋರಿಸಬೇಕು. ಮುಖ್ಯಮಂತ್ರಿಗಳು,ಕೆಪಿಸಿಸಿ ಅಧ್ಯಕ್ಷರು,ಪಕ್ಷದ ಮುಖಂಡರು ಪಾಲ್ಗೊಳ್ಳುವುದರಿಂದ ತಾವು ಹೆಚ್ಚಿನ ಜವಾಬ್ದಾರಿ ವಹಿಸುವಂತೆ ಕರೆ ನೀಡಿದರು.

ಅಹಿಂದ ಮುಖಂಡ ವಿರೂಪಾಕ್ಷ ಡ್ಯಾಗೇರಹಳ್ಳಿ, ಕೊಟ್ಟ ಶಂಕರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರಗೌಡ ಮಾತನಾಡಿದರು.

ಮುಖಂಡರಾದ ನಯಾಜ್ ಅಹಮದ್ ,ಮಹಿಳಾ ಕಾಂಗ್ರೆಸ್‌ನ ಗೀತಾ ರುದ್ರೇಶ್ ,ಸೌಭಾಗ್ಯಮ್ಮ, ಶಿರಾದ ರವಿ,ಕೊರಟಗೆರೆ, ಶಿವಾಜಿ, ಮೈಲಾರಪ್ಪ, ನಗರ ಬ್ಲಾಕ್ ಕಾಂಗ್ರೆಸ್ ಮುಖಂಡರಾದ ಮಹೇಶ್, ಫಯಾಜ್ ,ಅಲ್ಪಸಂಖ್ಯಾತರ ಘಟಕದ ಸಂಜೀವಕುಮಾರ್ ,ಕೈದಾಳ ರಮೇಶ್,ಯುವ ಕಾಂಗ್ರೆಸ್ ಮೋಹನ್ ,ಎಂ.ವಿ.ರಾಘವೇಂದ್ರ ಸ್ವಾಮಿ ಇದ್ದರು.

ಕಾಂಗ್ರೆಸ್ ಮುಖಂಡ ಎನ್.ಗೋವಿಂದರಾಜು ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿದರು.

ಕಾರ್ಮಿಕ ದಿನ : ಕೂಲಿಗಳಿಗೆ ಸನ್ಮಾನ

ಚಿಕ್ಕಬಳ್ಳಾಪುರ: ತೋಟದಲ್ಲಿ ದುಡಿಯುವ ಕೃಷಿ ಕೂಲಿ ಕಾರ್ಮಿಕರ ಬೆವರಿನ ಋಣ ನಮ್ಮ ಮೇಲಿದೆ. ಕೂಲಿ ಬಿಟ್ಟರೆ ಬೇರೇನೂ ಅಪೇಕ್ಷೆ ಪಡದ ಕಾಯಕ ಜೀವಿಗಳನ್ನು ಸನ್ಮಾನಿಸುತ್ತಿರುವುದು ಅತ್ಯಂತ ಹೆಮ್ಮೆ ಎಂದು ಗ್ಯಾರಂಟಿ ಯೋಜನೆಗಳ ಸಮಿತಿ ಜಿಲ್ಲಾಧ್ಯಕ್ಷ ಯಲುವಹಳ್ಳಿ ರಮೇಶ್ ತಿಳಿಸಿದರು.

ಯಲುವಹಳ್ಳಿಯಲ್ಲಿರುವ ಎನ್.ರಮೇಶ್ ಅವರ ದ್ರಾಕ್ಷಿ ತೋಟದಲ್ಲಿ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ 30 ಮಂದಿ ಕೂಲಿಯಾಳುಗಳನ್ನು ಅಭಿನಂದಿಸಿ ಅವರು ಮಾತನಾಡಿದರು.

ವಿವಿಧ ಕ್ಷೇತ್ರಗಳಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಅಲ್ಲಲ್ಲಿ ಸನ್ಮಾನ ಗೌರವ ನಡೆಯುತ್ತದೆ. ಆದರೆ ಕೃಷಿ ಕ್ಷೇತ್ರದಲ್ಲಿ ದುಡಿಯುತ್ತಿರುವ ಕೃಷಿ ಕೂಲಿ ಕಾರ್ಮಿಕರಿಗೆ ಎಲ್ಲೂ ಸನ್ಮಾನ ನಡೆದಿಲ್ಲ. ಹಾಗಾಗಿ ಕೃಷಿ ಕೂಲಿ ಕಾರ್ಮಿಕರಿಗಾಗಿ ಸನ್ಮಾನ ಮಾಡಿದ್ದೇನೆಂದರು.

ಕೃಷಿ ಕಾರ್ಮಿಕರು ಮತ್ತು ದೇಶ ಕಾಯುವ ಯೋಧರು, ಪೌರ ಕಾರ್ಮಿಕರ ಸೇವೆಯನ್ನ ಎಂದಿಗೂ ಸಮಾಜ ಮರೆಯಬಾರದು. ಕೃಷಿ ಕಾರ್ಮಿಕರು ಬೆವರು ಸುರಿಸಿ ದುಡಿದ ಅನ್ನವನ್ನು ನಾವು ತಿನ್ನುತ್ತಿದ್ದೇವೆ. ಹಾಗಾಗಿ ಕೃಷಿ ಕಾರ್ಮಿಕರಿಗೆ ಕುಟುಂಬ ಸಮೇತ ದವಸ ಧಾನ್ಯ,ಸಹಿತ ಶಾಲು, ಹಾರ ತುರಾಯಿ ಹೊದಿಸಿ, ಸಿಹಿ ನೀಡಿ ಗೌರವಿಸಿದ್ದೇನೆ ಎಂದರು.

ಈ ವೇಳೆ ಕಾರ್ಮಿಕರು ಮಾತನಾಡಿ, ರಮೇಶಣ್ಣ ಕೂಲಿಗಳನ್ನು ಕೂಡ ಕುಟುಂಬದ ಸದಸ್ಯರಂತೆ ಕಾಣುತ್ತಾರೆ. ಕಳೆದ ಇಪ್ಪತ್ತು ವರ್ಷಗಳಿಂದ ಅವರ ತೋಟದಲ್ಲಿ ಕೆಲಸ ಮಾಡುತ್ತಿದ್ದೇವೆ. ನಮ್ಮ ಕಷ್ಟಗಳಿಗೆ ಯಾವತ್ತೂ ಇಲ್ಲ ಎಂದಿಲ್ಲ. ದೇವರು ರಮೇಶಣ್ಣ ಅವರ ಕುಟುಂಬಕ್ಕೆ ಆಯಸ್ಸು, ಆರೋಗ್ಯ, ಐಶ್ವರ್ಯ ನೀಡಲಿ ಎಂದು ಪ್ರಾರ್ಥಿಸುತ್ತೇವೆ ಎಂದರು. ಈ ವೇಳೆ ರಮೇಶ್ ಪುತ್ರ ಯಲುವಹಳ್ಳಿ ಜನಾರ್ದನ್ ಇದ್ದರು.

ಯಲುವಹಳ್ಳಿ ರಮೇಶ್ ಅವರ ದ್ರಾಕ್ಷಿ ತೋಟದಲ್ಲಿ 30 ಮಂದಿ ಕೂಲಿಯಾಳುಗಳನ್ನು ಸನ್ಮಾನಿಸಲಾಯಿತು.

ಮೋಟಾರ್ ರೀವೈಂಡಿಂಗ್ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ರುಡ್‌ಸೆಟ್ ಸಂಸ್ಥೆಯ ವತಿಯಿಂದ ಮೇ 19 ರಿಂದ 30 ದಿನಗಳ ಉಚಿತ ವಿದ್ಯುತ್ ಮೋಟಾರ್ ರೀವೈಂಡಿಂಗ್ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು, ರಾಜ್ಯದ ಗ್ರಾಮೀಣ ನಿರುದ್ಯೋಗಿ ಯುವಕರು ತರಬೇತಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಪ್ರದೇಶದ ಆಧಾರ್ ಕಾರ್ಡ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ವಸತಿಯುತವಾಗಿದ್ದು, ತರಬೇತಿ ಅವಧಿಯಲ್ಲಿ ಉಚಿತ ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ 9380162042, 9380220884, 9113880324ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಪನಗರ ಭೂಸ್ವಾಧೀನಕ್ಕೆ ರೈತರ ಸಹಮತ

ರಾಮನಗರ: ರಿಯಲ್ ಎಸ್ಟೇಟ್ ದಂಧೆ ನಡೆಸುವವರು ಬಿಡದಿ ಉಪನಗರ ಭೂಸ್ವಾಧೀನಕ್ಕೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ, ಭೂ ಸ್ವಾಧೀನಕ್ಕೆ ಬಹುತೇಕ ರೈತರ ಸಹಮತವಿದೆ ಎಂದು ದಲಿತ ಮತ್ತು ಹಿಂದುಳಿದ ರೈತರ ಹಿತರಕ್ಷಣಾ ವೇದಿಕೆ ಅಧ್ಯಕ್ಷ ಜಯಚಂದ್ರು ಹೇಳಿದರು.

ಮೇಡನಹಳ್ಳಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸರಕಾರ ದಲಿತರು, ಹಿಂದುಳಿದವರು ಹಾಗೂ ಸಣ್ಣ ರೈತರಿಗೆ ಅನ್ಯಾಯವಾಗದಂತೆ ಯೋಜನೆಗೆ ಭೂಮಿ ಕಳೆದುಕೊಳ್ಳುವ ರೈತರಿಗೆ ಪರಿಹಾರ ನೀಡಬೇಕು. ಮೇ.8 ರಂದು ಭೂಸ್ವಾಧೀನ ವಿರೋಧಿಸಿ ಹಮ್ಮಿಕೊಂಡಿರುವ ಹೋರಾಟಕ್ಕೆ ನಮ್ಮ ಬೆಂಬಲವಿಲ್ಲ. ದಲಿತರ ಭೂಮಿಗೂ ಇತರರ ಭೂಮಿಗೆ ಸಿಗುವಂತೆ ಸಮಾನ ಬೆಲೆ ಕೊಡಬೇಕು ಎಂದರು.

ಭೂಸ್ವಾಧೀನ ಬೇಡ ಎಂದಿರುವ ತಾಪಂ ಮಾಜಿ ಅಧ್ಯಕ್ಷ ಪ್ರಕಾಶ್ ಮತ್ತು ನಾಗರಾಜು ಎಂಬುವರು ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ ರಿಯಲ್‌ಎಸ್ಟೇಟ್ ವ್ಯವಹಾರ ನಡೆಸುತ್ತಿದ್ದು, ಕೆಲ ತಿಂಗಳ ಹಿಂದೆ 56 ಲಕ್ಷ ರೂ.ಗೆ ದಲಿತರ ಜಮೀನು ಖರೀದಿಮಾಡಿ ಕೆಲವೇ ದಿನದಲ್ಲಿ 95 ಲಕ್ಷ ರೂ.ಗಳಿಗೆ ಮಾರಾಟಮಾಡಿದ್ದಾರೆ. ಉಪನಗರ ನಿರ್ಮಾಣವಾದರೆ ಎಲ್ಲಿ ನಮ್ಮ ರಿಯಲ್‌ಎಸ್ಟೇಟ್ ಉದ್ಯಮಕ್ಕೆ ಕಡಿವಾಣ ಬೀಳುತ್ತದೆ ಎಂಬ ಆತಂಕದಿಂದ ಯೋಜನೆಯ ವಿರುದ್ಧ ರೈತರನ್ನು ಎತ್ತಿಕಟ್ಟುತ್ತಿದ್ದಾರೆ ಎಂದು ಆರೋಪಿಸಿದರು.

ಸಮಿತಿಯ ಕಾರ್ಯದರ್ಶಿ ಶೇಖರ್ ಮಾತನಾಡಿ, ಬಿಡದಿ ಉಪನಗರ ಯೋಜನೆಯನ್ನು ನಾವು ಸ್ವಾಗತಿಸುತ್ತೇವೆ. ಬಹುಪಾಲು ರೈತರ ಸಹಮತವಿದೆ. ಆದರೆ, ನ್ಯಾಯಯುತ ಪರಿಹಾರ ನೀಡಬೇಕು. ಸಣ್ಣ ಪ್ರಮಾಣದ ಭೂಮಿ ಕಳೆದುಕೊಳ್ಳುವ ರೈತರಿಗೆ ಪರಿಹಾರದ ಹಣದ ಜೊತೆಗೆ ಒಂದು ನಿವೇಶನ ನೀಡಬೇಕು. ದಲಿತರ ಭೂಮಿಗೆ ಸೂಕ್ತ ಪರಿಹಾರ ನೀಡಬೇಕು. ಸಾಗುವಳಿ ರೈತರಿಗೆ ಪೋಡಿ ಮಾಡಿಸಿ ಪರಿಹಾರ ನೀಡಬೇಕು, ಭೂಸ್ವಾಧೀನ ಪ್ರಕ್ರಿಯೆ ಬಳಿಕ ಅಗತ್ಯವಿರುವ ದಾಖಲೆಗಳನ್ನು ಪ್ರಾಧಿಕಾರದಿಂದಲೇ ಕೊಡಿಸಬೇಕು. ಎಂದು ಆಗ್ರಹಿಸಿದ ಅವರು, ಪ್ರತಿ ಎಕರೆಗೆ 2 ರಿಂದ 5 ಕೋಟಿ ರೂ. ವರೆಗೆ ಪರಿಹಾರ ನೀಡಬೇಕು ಎಂದರು.

ಸುದ್ದಿಗೋಷ್ಟಿಯಲ್ಲಿ ವೇದಿಕೆಯ ಪದಾಧಿಕಾರಿಗಳಾದ ದೇವರಾಜು, ಲೋಕೇಶ್,ಶ್ರೀಧರ್ ಉಪಸ್ಥಿತರಿದ್ದರು.

ಬಿಡದಿಯಲ್ಲಿ ದಲಿತ ಮತ್ತು ಹಿಂದುಳಿದ ರೈತರ ಹಿತರಕ್ಷಣಾ ವೇದಿಕೆ ವತಿಯಿಂದ ಸುದ್ದಿಗೋಷ್ಠಿ ನಡೆಸಲಾಯಿತು.

ಅಂಗನವಾಡಿ ನೌಕರರ ಮುಷ್ಕರ: ಮೇ 20ಕ್ಕೆ

ಹಾಸನ: ಅಂಗನವಾಡಿ ನೌಕರರು 50 ವರ್ಷಗಳಿಂದ ಅಡಿಯಲ್ಲಿ ದುಡಿಯುತ್ತಿದ್ದು, ನ್ಯಾಯಯೋಜನೆಯಡಿ ಕಾಯಂ ಮಾಡಬೇಕು ಎಂದು ಮಹಿಳಾ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು. ಕನಿಷ್ಠವೇತನ ಫಲಾನುಭವಿಗಳ ಘಟಕವೆಚ್ಚ ಹೆಚ್ಚಳ ಮಾಡಬೇಕೆಂಬ ಬೇಡಿಕೆಗಳನ್ನು ನಿರಂತರವಾಗಿ ಕೇಳಲಾಗುತ್ತಿದೆ. ದೇಶದ ಕಾರ್ಪೊರೇಟ್ ಬಂಡವಾಳಗಾರರಿಗೆ 15.32 ಲಕ್ಷ ಕೋಟಿ ಸಾಲ ಮನ್ನಾ ಮಾಡಿ 1.97 ಲಕ್ಷ ಕೋಟಿ ಸಬ್ಸಿಡಿಗಳನ್ನು ಉದಾರವಾಗಿ ಕೊಡುವ ಕೇಂದ್ರ ಸರ್ಕಾರ, ದೇಶದ ಭವಿಷ್ಯತ್ತನ್ನು ರೂಪಿಸುವವರಿಗೆ ಸಾಲನೀಡಲು ಮೀನಾಮೇಷ ಎಣಿಸುತ್ತದೆ. ಮುಷ್ಕರ ಮುಖಾಂತರ ಹೋರಾಟ ತೀವ್ರಗೊಳಿಸುವುದು, ಆದರೆ ಈಗ ದೇಶದ 29 ಕಾರ್ಮಿಕ ಕಾನೂನುಗಳನ್ನು 4 ಸಂಹಿತೆಗಳನ್ನಾಗಿ ಮಾಡುವ ಮುಖಾಂತರ ಸಂಘ ಕಟ್ಟುವ ಹಕ್ಕು ಮತ್ತು ಮುಷ್ಕರದ ಹಕ್ಕುಗಳಿಗೆ ಹಲವು ರೀತಿಯ ನಿರ್ಬಂಧಗಳನ್ನು ತರುವ ಮೂಲಕ ಸರ್ಕಾರ ಮತ್ತಷ್ಟು ಸಂಕಷ್ಟಗಳನ್ನು ತಂದೊಡ್ಡುತ್ತಿದೆ ಎಂದು ದೂರಿದರು.

ಸಮಾಚಾರ ಸಣ್ಣದಲ್ಲ

ಕಾರ್ಮಿಕ ವಿಭಾಗದ ಅಧ್ಯಕ್ಷರಾಗಿ ಆಯ್ಕೆ

ಚಿಕ್ಕನಾಯಕನಹಳ್ಳಿ: ತಾಲೂಕಿನ ಸಾಲ್ಕಟ್ಟೆ ತಾಂಡ್ಯ ನಿವಾಸಿ ಸುರೇಶನಾಯ್ಕ ಅವರು ಕಾಂಗ್ರೆಸ್ ಪಕ್ಷದ ಕಾರ್ಮಿಕ ವಿಭಾಗದ ತಾಲೂಕು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಪುಟ್ಟಸ್ವಾಮಿ ಗೌಡರ ಆದೇಶ ಹಾಗೂ ರಾಜ್ಯ ಉಪಾಧ್ಯಕ್ಷ ಡಾ. ಸೈಯದ್ ದಾದಾಪೀರ್ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ್‌ಗೌಡ ಮಾಜಿ ಶಾಸಕ ಕಿರಣ್‌ಕುಮಾರ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ್ ಶಿಫಾರಸ್ಸಿನ ಮೇರೆಗೆ ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದ ಅಧ್ಯಕ್ಷ ಅಬ್ದುಲ್ ರಹೀಂ ತಿಳಿಸಿದ್ದಾರೆ. ನೂತನವಾಗಿ ಆಯ್ಕೆಯಾದ ಸುರೇಶನಾಯ್ಕ ಅವರನ್ನು ಮಾಜಿ ಶಾಸಕ ಕಿರಣ್‌ಕುಮಾರ್ ಸನ್ಮಾನಿಸಿ, ಪಕ್ಷದ ಸಂಘಟನೆ ಜೊತೆಯಲ್ಲಿ ಕಾರ್ಮಿಕರ ಏಳಿಗೆಗಾಗಿ ದುಡಿಯುವ ಕೆಲಸದಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸಬೇಕು. ಪಕ್ಷದ ನಿಯಮಗಳಿಗೆ ಬದ್ದನಾಗಿ ಕೆಲಸ ಮಾಡಿ ಪಕ್ಷದ ಬಲವರ್ಧನೆಗೆ ಶ್ರಮಿಸುವುದರ ಜೊತೆಗೆ ರೈತರ ಪರ ಕೆಲಸ ಮಾಡುವಂತೆ ಕಿವಿ ಮಾತು ಹೇಳಿದರು. ಚಿ.ನಾ.ಹಳ್ಳಿ ಬ್ಲಾಕ್ ಅಧ್ಯಕ್ಷ ಚಂದ್ರಶೇಖರ್ ಹುಳಿಯಾರು ಬ್ಲಾಕ್ ಅಧ್ಯಕ್ಷ ಪಿ.ಟಿ.ಚಿಕ್ಕಣ್ಣ, ಭೂ ನ್ಯಾಯ ಮಂಡಳಿ ನಾಮಿನಿ ಸದಸ್ಯ ಅಗಸರಹಳ್ಳಿ ನರಸಿಂಹಮೂರ್ತಿ ಆರೋಗ್ಯ ರಕ್ಷಾ ಸಮಿತಿ ಸದಸ್ಯ ಮಹಮ್ಮದ್ ಜಾಕೀರ್, ಗ್ಯಾರಂಟಿ ಸಮಿತಿ ಸದಸ್ಯ ಚಿಕ್ಕತಿಮ್ಮಯ್ಯ ಇದ್ದರು.

ಪಿಯುಸಿ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ

ತುಮಕೂರು: ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಪಿಯು ಕಾಲೇಜು, ಮೊರಾರ್ಜಿ ವಸತಿ ಪಿಯು ಕಾಲೇಜು/ ಮೌಲಾನಾ ಆಜಾದ್ ಪಿಯು ಕಾಲೇಜು ಗಳಲ್ಲಿ ಪ್ರಥಮ ಪಿಯು ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಶೇ.25ರಷ್ಟು, ವಿಕಲಚೇತರಿಗೆ ಶೇ.4ರಷ್ಟು ಪ್ರವೇಶ ಮೀಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಜಾಲತಾಣದ ಮೂಲಕ ಮೇ 17ರೊಳಗಾಗಿ ಅರ್ಜಿ ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ್ ಭವನ, ಇಂದಿರಾ ಕಾಲೇಜು ಮುಂಭಾಗ, ಉಪ್ಪಾರಹಳ್ಳಿ, ತುಮಕೂರು ಅಥವಾ ದೂ. 0816-2273724 ಸಂಪರ್ಕಿಸಬಹುದು.

ಸಚಿವರು ಸಮುದಾಯ ಭೇಟಿ ಮಾಡಬೇಕಿತ್ತು

ಗುಬ್ಬಿ: ಮಂಗಳೂರು ಗಲಭೆ ಹಿನ್ನೆಲೆ ಭೇಟಿ ನೀಡಿದ ಗೃಹ ಮಂತ್ರಿ ಪರಮೇಶ್ವರ್ ಅವರು ಒಂದು ಸಮುದಾಯವನ್ನು ಮಾತ್ರ ಮಾತನಾಡಿಸಿದ್ದು ಸರಿಯಿಲ್ಲ. ಮತ್ತೊಂದು ಸಮುದಾಯ ಮೃತ ಶೆಟ್ಟಿ ಅವರ ಮನೆಗೂ ಭೇಟಿ ನೀಡಿದ್ದರೆ ಸಾಮಾಜಿಕ ನ್ಯಾಯ ಕಲ್ಪಿಸಿದಂತೆ ಆಗುತ್ತಿತ್ತು ಎಂದು ತುರುವೇಕೆರೆ ಶಾಸಕ ಎಂ.ಟಿ.ಕೃಷ್ಣಪ್ಪ ಅಭಿಪ್ರಾಯ ವ್ಯಕ್ತಪಡಿಸಿದರು. ತಾಲೂಕಿನ ಸಿ.ಎಸ್.ಪುರ ಹೋಬಳಿ ಹಿಂಡಿಸ್ಕೆರೆ ಗ್ರಾಪಂ ಆವರಣದಲ್ಲಿ ಆಯೋಜಿಸಿದ್ದ ಎನ್.ಆರ್.ಎಲ್.ಎಂ ಶೆಡ್ ಹಾಗೂ ಬೇಲೂರು ಅಂಗನವಾಡಿ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು ವೈಯಕ್ತಿಕ ದ್ವೇಷದ ಘಟನೆ ಆಗಿದ್ದರೂ ಒಂದು ಸಮುದಾಯ ಓಲೈಕೆಯ ಬಗ್ಗೆ ಮತ್ತೊಮ್ಮೆ ಗೃಹ ಸಚಿವರು ರುಜುವಾತು ಮಾಡಿದಂತಾದ ಈ ಭೇಟಿಯ ತಾರತಮ್ಯ ನೀತಿ ಒಪ್ಪಿಕೊಳ್ಳಲಾಗದು ಎಂದು ಪ್ರತಿಕ್ರಿಯಿಸಿದರು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಬರುವ ವಿದ್ಯಾರ್ಥಿಗಳ ಜನಿವಾರ ತೆಗಿಸು ವುದು, ಮಾಂಗಲ್ಯ ಸರ ತೆಗಿಸುವುದು ಸರಕಾರ ನಿಯಮಾ ವಳಿಯಲ್ಲಿ ಇದ್ದರೆ ಪಾಲಿಸಬೇಕಿದೆ. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷೆ ಶಶಿಕಲಾ ಕೆಂಪಣ್ಣ, ಉಪಾಧ್ಯಕ್ಷೆ ರೇಷ್ಮಾ, ಸದಸ್ಯರಾದ ಕೃಷ್ಣೇಗೌಡ, ಗುರು ಪ್ರಕಾಶ್, ಲೋಕೇಶ್, ಅನ್ನಪೂರ್ಣ, ಈರಣ್ಣ, ವೆಂಕಟೇಶ್, ಕವಿತಾ, ಮಮತಾ, ಪ್ರಕಾಶ್, ಸುಧಾರಾಣಿ, ಪ್ರೇಮಾ, ಗಂಗಾಧರಗೌಡ, ಸೀತಾರಾಮು ಸಿಂಗ್, ಭಾರತಿ, ನಾಗರಾಜು, ಪಿಡಿಒ ಶ್ರೀದೇವಿ ಬಳ್ಳಳ್ಳಿ, ಗುಮಾಸ್ತರಾದ ವಿಜಯಕುಮಾರಿ ಇತರರು ಇದ್ದರು.

1 ಕೋಟಿ ಮಾನವ ದಿನ ಸೃಜಿಸುವ ಗುರಿ

ನರೇಗಾ ಯೋಜನೆಯ ಪ್ರಗತಿ ಪರಿಶೀಲನಾ ಸಭೆ | ಜಿಪಂ ಸಿಇಒ ಜಿ.ಪ್ರಭು

ನರೇಗಾ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಜಿಪಂ ಸಿಇಒ ಜಿ.ಪ್ರಭು ಅವರು ಮಾತನಾಡಿದರು.

ತುಮಕೂರು: ಜಿಲ್ಲೆಯಲ್ಲಿ ಕಳೆದ ವರ್ಷದಂತೆ ಈ ವರ್ಷವೂ ಮಹಾತ್ಮಗಾಂಧಿ ನರೇಗಾ ಯೋಜನೆಯನ್ನು ಪರಿಣಾಮಕಾರಿ ಯಾಗಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ಗ್ರಾಮ ಪಂಚಾಯತಿಗಳಲ್ಲಿ 400 ರಿಂದ 500 ಜನ ರೈತರನ್ನು ಗುರುತಿಸಿ ಅವರಿಗೆ ವೈಯಕ್ತಿಕ ಕಾಮಗಾರಿಗಳನ್ನು ನೀಡುವ ಮೂಲಕ ಪ್ರಸಕ್ತ ಆರ್ಥಿಕ ವರ್ಷದಲ್ಲಿ 1 ಕೋಟಿ ಮಾನವ ದಿನಗಳನ್ನು ಸೃಜನೆ ಮಾಡುವ ಗುರಿಯನ್ನು ತಲುಪಬೇಕೆಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಜಿ. ಪ್ರಭು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ತಾಂತ್ರಿಕ ಸಿಬ್ಬಂದಿಗಳೊಂದಿಗೆ ನರೇಗಾ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಕಳೆದ ವರ್ಷ ಮಾನವ ದಿನಗಳ ಸೃಜನೆಯಲ್ಲಿ ಜಿಲ್ಲೆಯು ಮೊದಲ ಸ್ಥಾನ ಪಡೆದಿದೆ. ಈ ವರ್ಷವೂ ಮೊದಲ ಸ್ಥಾನವನ್ನು ಯಥಾರೀತಿ ಕಾಪಾಡಿಕೊಳ್ಳಬೇಕು ಎಂದು ನಿರ್ದೇಶಿಸಿದರು.

ಕಳೆದ ವರ್ಷ ಸುಮಾರು 122 ಕೋಟಿ ರು. ವೆಚ್ಚದಲ್ಲಿ ಕೈಗೊಂಡಿದ್ದ 3660 ಶಾಲಾಭಿವೃದ್ಧಿ ಕಾಮಗಾರಿಗಳು ಮುಕ್ತಾಯದ ಹಂತ ತಲುಪಿವೆ. ಪ್ರಸಕ್ತ ಆರ್ಥಿಕ ವರ್ಷದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳಾದ ಚರಂಡಿ, ರಸ್ತೆ, ಸ್ಮಶಾನ, ಕೆರೆಗಳ ಅಭಿವೃದ್ಧಿ; ನಾಲೆಗಳ ನಿರ್ಮಾಣ, ಗೋದಾಮು, ಸಂಜೀವಿನ ಭವನ, ಗ್ರಾಮ ಪಂಚಾಯಿತಿ ಕಟ್ಟಡ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸೂಚಿಸಿದರು.

> ಪ್ರಸಕ್ತ ಆರ್ಥಿಕ ವರ್ಷದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳಾದ ಚರಂಡಿ, ರಸ್ತೆ, ಸ್ಮಶಾನ, ಕೆರೆಗಳ ಅಭಿವೃದ್ಧಿ, ನಾಲೆಗಳ ನಿರ್ಮಾಣ, ಗೋದಾಮು, ಸಂಜೀವಿನ ಭವನ, ಗ್ರಾಮ ಪಂಚಾಯಿತಿ ಕಟ್ಟಡ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕು.
> -ಜಿ. ಪ್ರಭು, ಜಿಪಂ ಸಿಇಒ

ಸಭೆಯಲ್ಲಿ ಉಪ ಕಾರ್ಯದರ್ಶಿಗಳಾದ ಕೆ.ಪಿ. ಸಂಜೀವಪ್ಪ ಹಾಗೂ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಯೋಜನಾಧಿಕಾರಿ ಸಣ್ಣ ಮಸಿಯಪ್ಪ, ವಿವಿಧ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರುಗಳು(ಗ್ರಾ.ಉ) ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಸಾಧನೆಯ ಪ್ರತಿರೂಪ ಶ್ರೀಭಗೀರಥ

ಪಿರಿಯಾಪಟ್ಟಣ: ಪ್ರಯತ್ನ ಹಾಗೂ ಸಾಧನೆಯ ಪ್ರತಿರೂಪ ಭಗೀರಥ ಇವರ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು ಎಂದು ತಹಶೀಲ್ದಾರ್ ನಿಸರ್ಗ ಪ್ರಿಯಾ ತಿಳಿಸಿದರು.

ಪಟ್ಟಣದ ಬಿ.ಎಂ ರಸ್ತೆಯಲ್ಲಿರುವ ಭಗೀರಥ ವೃತ್ತದಲ್ಲಿ ತಾಲೂಕು ಆಡಳಿತ ಆಯೋಜಿಸಿದ್ದ ಭಗೀರಥ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಉಪ್ಪಾರ ಸಮುದಾಯ ಪೌರಾಣಿಕ ಹಾಗೂ ಐತಿಹಾಸಿಕ ಹಿನ್ನೆಲೆಯುಳ್ಳ ಈ ಸಮುದಾಯ ದೇಶದ ಉದ್ದಗಲಕ್ಕೂ ವ್ಯಾಪಿಸಿದ್ದು, ತಮ್ಮ ಮೂಲ ಪುರುಷ ಭಗೀರಥ ಮಹರ್ಷಿಯನ್ನು ಆರಾಧಿಸುತ್ತಾ ಬಂದಿದ್ದಾರೆ. ಸಮಾಜದಲ್ಲಿ ಇಂದಿಗೂ ಕಠಿಣ ಪರಿಶ್ರಮಕ್ಕೆ ಭಗೀರಥ ಯತ್ನ ಎಂದೇ ಉದಾಹರಣೆ ನೀಡಲಾಗುತ್ತದೆ. ಭಗೀರಥರು ಎಂದರೆ ಸಾಧನೆಯ ದ್ಯೋತಕವಾಗಿದ್ದು, ಸಾಕ್ಷತ್ ದೇವಗಂಗೆಯನ್ನು ಧರೆಗಿಳಿಸಿದ ಮಹಾಪುರುಷರು ಎಂದರು.

ಭಗೀರಥರ ವಂಶಜರಾದ ಉಪ್ಪಾರರು ದೇಶದ ಉದ್ದಗಲಕ್ಕೂ ವ್ಯಾಪಿಸಿ ವಿವಿಧ ಹೆಸರುಗಳಿಂದ ಇವರನ್ನು ಕರೆಯಲಾಗುತ್ತದೆ. ರಾಜ್ಯದಲ್ಲಿಯೂ ಈ ಜನರು ವ್ಯಾಪಕವಾಗಿ ನೆಲೆಸಿದ್ದಾರೆ. ಉಪ್ಪಾರರು ಶ್ರಮಜೀವಿ ಗಳಾಗಿದ್ದು ಇತ್ತೀಚೆಗೆ ಸಂಘಟನೆ ಜತೆಗೆ ಶೈಕ್ಷಣಿಕ ಕ್ಷೇತ್ರದಲ್ಲೂ ಸಾಕಷ್ಟು ಸಾಧನೆ ಮಾಡುತ್ತಿರುವುದು ಶ್ಲಾಘನೀಯ, ಪಿರಿಯಾಪಟ್ಟಣದಲ್ಲಿಯೂ ಈ ಸಮಾಜದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದು ಇವರಿಗೆ ಸಿಗಬೇಕಾದ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದರು.

ನವೋದಯ ಸೇವಾ ಸಂಸ್ಥೆ ಅಧ್ಯಕ್ಷ ನಾರಾಯಣ್ ಮಾತನಾಡಿ, ಭಗೀರಥ ಜಯಂತಿಯ ಈ ದಿನವನ್ನು ಗಾಂಗಾ ಸಪ್ತಮಿ, ಗಾಂಗಾರತಿಯ ಹಬ್ಬವಾಗಿ ದೇಶಾದ್ಯಂತ ವಿಜೃಂಭಣೆಯಿಂದ ಆಚರಣೆ ಮಾಡ ಲಾಗುತ್ತಿದೆ ಎಂದರು.

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಮೂರನೇ ಸ್ಥಾನ ಬಂದ ಉಪ್ಪಾರ ಸಮಾಜದ ವಿದ್ಯಾರ್ಥಿನಿ ಜೆ.ಪೂಜೀತಾರನ್ನು ಸನ್ಮಾನಿಸಿ ಗೌರವಿಸಲಾಯಿತು. ಕೆಪಿಸಿಸಿ ಸದಸ್ಯ ಅನಿಲ್ ಕುಮಾರ್, ಉಪ್ಪಾರ ನೌಕರರ ಸಂಘದ ಅಧ್ಯಕ್ಷ ಸೋಮಶೇಖರ್, ಪ್ರಧಾನ ಕಾರ್ಯದರ್ಶಿ ಪಿ.ಎನ್.ದೇವೇಗೌಡ, ಗೌರವಾಧ್ಯಕ್ಷ ಪಿ.ಎಲ್. ರಾಮಣ್ಣ, ಉಪಾಧ್ಯಕ್ಷರಾದ ಹೆಚ್.ಟಿ. ಗಣೇಶ್, ಬಿ.ವಿ.ಮಂಜುನಾಥ್, ಖಜಾಂಚಿ ಎನ್.ರವಿಂದ್ರ, ವಕೀಲರಾದ ಎಂ.ಜೆ ಸ್ವಾಮಿ, ಮಂಜು, ಬಿ.ಎನ್.ಹರೀಶ್, ಪುರಸಭಾ ಮಾಜಿ ಅಧ್ಯಕ್ಷ ಪಿ.ಡಿ.ತ್ರಿನೇಶ್, ಗ್ರಾಪಂ ಮಾಜಿ ಅಧ್ಯಕ್ಷ ಕಾಮರಾಜ್, ಅಯ್ಯರ್ ಗಿರಿ, ಕುಮಾರ್, ಮುಖಂಡರಾದ ಕೆ.ಎಂ.ಮಹೇಶ್, ಆಂಜನೇಯ, ರವಿ, ಎಂ.ಮಂಜು, ಮೈಲಾರಪ್ಪ, ವಿನೋದ್ ಕುಮಾರ್, ಶಿವರುದ್ರ, ಕೋಮಲಾಪುರ ಸಣ್ಣೇಗೌಡ, ಗಣೇಶ್ ಇದ್ದರು.

ಹಾಡಿ ಇರುಳಿಗ ಕುಟುಂಬಗಳಿಗೆ ಎಲ್‌ಇಡಿ ಬಲ್ಬ್

ಆರ್. ಕುಶಾಲ್ ರಾಜ್ ಜನ್ಮ ದಿನದ ಅಂಗವಾಗಿ ಹಾಡಿ ಕುಟುಂಬಗಳಿಗೆ ಎಲ್‌ಇಡಿ ಬಲ್ಬ್‌ಗಳ ವಿತರಣೆ.

ರಾಮನಗರ: ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಕಾರ್ಯದರ್ಶಿ ಎಸ್. ರುದ್ರೇಶ್ವರ ಹಾಗೂ ಶಿಕ್ಷಕಿ ಡಿ.ಆರ್. ನೀಲಾಂಬಿಕಾ ಅವರು ತಮ್ಮ ಮಗ ಆರ್. ಕುಶಾಲ್ ರಾಜ್ ಜನ್ಮ ದಿನದ ಅಂಗವಾಗಿ ರತ್ನಗಿರಿ ಹಾಡಿ ಇರುಳಿಗ ಕುಟುಂಬಗಳಿಗೆ ಎಲ್‌ಇಡಿ ಬಲ್ಬ್‌ಗಳನ್ನು ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಾಣಕಲ್ ನಟರಾಜ್ ಮಾತನಾಡಿ, ಜನರು ತಮ್ಮ ವೈಯಕ್ತಿಕ ಆಚರಣೆಗಳನ್ನು ಸಮಾಜಮುಖಿಯಾಗಿ ಆಚರಿಸಿಕೊಳ್ಳಬೇಕು. ಇದರಿಂದ ಸಮಾಜದ ಬಡವರಿಗೆ ಅನುಕೂಲವಾಗುತ್ತದೆ ಎಂದು ತಿಳಿಸಿದರು. ನೌಕರರ ಸಂಘದ ಜಿಲ್ಲಾಧ್ಯಕ್ಷ ಕೆ. ಸತೀಶ್ ಮಾತನಾಡಿ, ಯಾವುದೇ ಆಚರಣೆಗಳನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಸಮಾಜದಲ್ಲಿ ಹಲವು ಮಂದಿ ವಿದ್ಯಾರ್ಥಿಗಳಿಗೆ ದಾನಿಗಳ ನೆರವು ಬೇಕಾಗಿರುತ್ತದೆ. ಅವಶ್ಯಕವಿರುವ ನೆರವನ್ನು ನೀಡಿದರೆ ಅವರ ವಿದ್ಯಾಭ್ಯಾಸಕ್ಕೆ ನೆರವಾಗುತ್ತದೆ ಎಂದು ತಿಳಿಸಿದರು.

ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಕಾರ್ಯದರ್ಶಿ ಎಸ್. ರುದ್ರೇಶ್ವರ ಮಾತನಾಡಿ, ದೊಡ್ಡ ಮಟ್ಟದಲ್ಲೇ ಸಮಾಜ ಮುಖಿ ಕೆಲಸಗಳನ್ನು ಮಾಡಬೇಕೆಂದಿಲ್ಲ, ನಮ್ಮ ಸುತ್ತಮುತ್ತಲಿರುವ ನಿರ್ಲಕ್ಷಿತರಿಗೆ, ಅಸಹಾಯಕರಿಗೆ ಅವರಿಗೆ ಅವಶ್ಯವಿರುವ ನೆರವನ್ನು ತಮ್ಮ ಕೈಲಾದ ಪ್ರಮಾಣದಲ್ಲಿ ನೀಡಬೇಕು ಎಂದು ತಿಳಿಸಿದರು.

ಹೋಲಿ ಕ್ರೆಸೆಂಟ್ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಅಲ್ತಾಫ್ ಅಹಮದ್, ಗ್ರಾಪಂ ಸದಸ್ಯ ನಂದೀಶ್, ವನವಾಸಿ ಕಲ್ಯಾಣ ಸಮಿತಿಯ ಕಾರ್ಯದರ್ಶಿ ಎಸ್. ರಾಜು, ಗಾಯಕ ಶ್ರೀನಿವಾಸ್ ಇರುಳಿಗ, ಶಿಕ್ಷಕಿ ಡಿ.ಆರ್. ನೀಲಾಂಬಿಕಾ, ಜಿ. ಉಮಾಮಹೇಶ್ವರಿ ಇದ್ದರು.

ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

ತುಮಕೂರು: ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮದ್ ಮೇ 6 ಮತ್ತು 7ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ವಿವಿಧ ಸಭೆ ನಡೆಸಲಿದ್ದಾರೆ. ಮೇ 6ರಂದು ಬೆಳಿಗ್ಗೆ 11 ಗಂಟೆಗೆ ಅಂಗನವಾಡಿ ಕೇಂದ್ರ ಮತ್ತು ಕೊಳಚೆ ಪ್ರದೇಶಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸುವರು. ಸಂಜೆ 4 ಗಂಟೆಗೆ ಜಿಪಂ ಸಭಾಂಗಣದಲ್ಲಿ ಜಿಲ್ಲೆಯ ಅಲ್ಪಸಂಖ್ಯಾತರ ಪ್ರಮುಖರೊಂದಿಗೆ ಸಭೆ ನಡೆಸಿ ವಾಸ್ತವ್ಯ ಮಾಡಲಿದ್ದಾರೆ. ಮರುದಿನ ಮೇ 7ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದು, ಮಧ್ಯಾಹ್ನ 3 ಗಂಟೆಗೆ ಸ್ಥಳೀಯ ಅಲ್ಪಸಂಖ್ಯಾತ ಸಂಸ್ಥೆಗಳಿಗೆ ಭೇಟಿ ನೀಡಿ ನಂತರ ಬೆಂಗಳೂರಿಗೆ ತೆರಳುವರು.

20 ಕಾಡು ಹಂದಿಗಳ ರಕ್ಷಣೆ: ಒಬ್ಬನ ಬಂಧನ

ಬಾಗೇಪಲ್ಲಿ: ತಾಲೂಕಿನ ಪುಟ್ಟಪರ್ತಿ ಮತ್ತು ಗುಡಿಬಂಡೆ ತಾಲೂಕಿನ ಕಡೇಹಳ್ಳಿ ಗ್ರಾಮಗಳ ಸರಹದ್ದಿನಲ್ಲಿ ಕೆಲವು ವ್ಯಕ್ತಿಗಳು ಅಕ್ರಮವಾಗಿ ಕಾಡುಹಂದಿಗಳನ್ನು ಭೇಟೆಯಾಡಿ, ಸಾಗಾಟ ಮಾಡುತ್ತಿದ್ದಾರೆ ಎಂಬ ಮಾಹಿತಿ ಆಧರಿಸಿ ಅರಣ್ಯ ಇಲಾಖೆ ಸಿಬ್ಬಂದಿ ದಾಳಿ ನಡೆಸಿ ಬೊಲೆರೋ ವಾಹನ ಮತ್ತು ಆರೋಪಿ ನವೀನ್ ಎಂಬ ವ್ಯಕ್ತಿಯನ್ನು ಬಂಧಿಸಿದ್ದಾರೆ. ತಾಲೂಕಿನ ಪುಟ್ಟಪರ್ತಿ ಮತ್ತು ಗುಡಿಬಂಡೆ ತಾಲೂಕಿನ ಕಡೇಹಳ್ಳಿ ಗ್ರಾಮಗಳ ಸರಹದ್ದಿನಲ್ಲಿ ಕೆಲವು ವ್ಯಕ್ತಿಗಳು ಅಕ್ರಮವಾಗಿ ಕಾಡುಹಂದಿಗಳನ್ನು ಭೇಟೆಯಾಡಿ,ಸಾಗಾಟ ಮಾಡುತ್ತಿದ್ದಾರೆ ಎಂಬ ಖಚಿತ ಮಾಹಿತಿಯ ಮೇರೆಗೆ ಪಾತಪಾಳ್ಯ ಉಪ ವಲಯ ಅರಣ್ಯಾಧಿಕಾರಿಗಳು ಬೊಲೆರೋ ವಾಹನವನ್ನು ಹಿಂಬಾಲಿಸಿ ಕೊಂಡು ಹೋಗಿ ಹಿಡಿದಿರುತ್ತಾರೆ. ಈ ಬಗ್ಗೆ ಭಾನುವಾರ ಬಾಗೇಪಲ್ಲಿ ಅರಣ್ಯ ವಲಯಾಧಿಕಾರಿ ಜಿ. ವಾಸುದೇವ್ ಮೂರ್ತಿ ಮಾಹಿತಿ ನೀಡಿದ್ದಾರೆ. ಈ ದಾಳಿಯಲ್ಲಿ ನವೀನ್ ಎಂಬ ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ. ಇದೇ ವೇಳೆ 9 ಜೀವಂತ ಕಾಡುಹಂದಿ ಮತ್ತು 11 ಮೃತಪಟ್ಟ ಕಾಡು ಹಂದಿಗಳನ್ನು ವಶಕ್ಕೆ ಪಡೆಯಲಾಗಿದೆ. ಈ ಪ್ರಕರಣದ ಆರೋಪಿಯನ್ನು ನ್ಯಾಯಾಧೀಶರ ಮುಂದೆ ಹಾಜರು ಪಡಿಸಲಾಗುತ್ತದೆ. ನ್ಯಾಯಾಧೀಶರ ತೀರ್ಮಾನ, ಸೂಚನೆಗಳಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿ.ವಾಸುದೇವ್ ಮೂರ್ತಿ ತಿಳಿಸಿದರು.

ಹಂದಿಜೋಗಿ ಸಮುದಾಯದ ಕುಂದುಕೊರತೆ ಆಲಿಕೆ

ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ. ಪಲ್ಲವಿ ಅವರು ಹಂದಿಜೋಗಿ ಸಮುದಾಯದ ಮುಖಂಡರೊಂದಿಗೆ ಕುಂದುಕೊರತೆ ಸಭೆ ನಡೆಸಿದರು.

ಚಾಮರಾಜನಗರ: ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಪಲ್ಲವಿ ಅವರು ಬಿ. ಮಲ್ಲಯ್ಯನಪುರದಲ್ಲಿ ಹಂದಿಜೋಗಿ ಸಮುದಾಯ ಜನರಿಂದ ಕುಂದುಕೊರತೆ, ಸಮಸ್ಯೆಗಳನ್ನು ಆಲಿಸಿದರು.

ಚಾಮರಾಜನಗರ ತಾಲೂಕಿನ ಬಿ.ಮಲ್ಲಯ್ಯನ ಪುರ ಗ್ರಾಮದ ಬಳಿ ಇಂದು ಹಂದಿಜೋಗಿ ಸಮುದಾಯದ ಕುಟುಂಬಗಳು ವಾಸಿಸುವ ಸ್ಥಳ ವೀಕ್ಷಣೆ ಮಾಡಿದ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ. ಪಲ್ಲವಿ ಅವರು ಬಳಿಕ ಸಮುದಾಯದ ಮುಖಂಡರೊಂದಿಗೆ ಕುಂದುಕೊರತೆ ಸಭೆ ನಡೆಸಿದರು.

ಸಭೆಯಲ್ಲಿ ಹಂದಿಜೋಗಿ ಸಮುದಾಯದ ಮುಖಂಡರು ಮಾತನಾಡಿ ಮಲ್ಲಯ್ಯನಪುರದ ಹೊರಭಾಗದಲ್ಲಿ 15 ಹಂದಿಜೋಗಿ ಸಮುದಾಯದ ಕುಟುಂಬಗಳು ವಾಸಿಸುತ್ತಿದ್ದು, ಮಲಯ್ಯನಪುರದಿಂದ ಇಲ್ಲಿಗೆ ಸಂಪರ್ಕಿಸುವ ರಸ್ತೆ ತಂಬಾ ದುಸ್ಥಿತಿಯಲ್ಲಿದೆ. ಸುತ್ತಲಿನ ಗ್ರಾಮಗಳಿಗೆ, ಪಟ್ಟಣಗಳಿಗೆ ಒಡಾಡಲು ಸಮುದಾಯದ ಜನರು ಸರಿಯಾದ ರಸ್ತೆ ವ್ಯವಸ್ಥೆ ಇಲ್ಲ, ಸಮುದಾಯ ಮುಕ್ಕಡಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿದ್ದು, ಪಂಚಾಯಿತಿಯಿಂದ ಸರಕಾರದ ಸೌಲಭ್ಯಗಳು ಸಮರ್ಪಕವಾಗಿ ತಲುಪುತ್ತಿಲ್ಲ ಎಂದರು.

ಅಲ್ಲದೆ ಗ್ರಾಮಕ್ಕೆ ಸ್ಮಶಾನ ಭೂಮಿ ಒತ್ತುವರಿಯಾಗಿದೆ. ಜಿಲ್ಲಾಮಟ್ಟದ ಸಮುದಾಯ ಭವನದ ಅಗತ್ಯವಿದೆ. ಶೌಚಾಲಯಗಳ ಸಮಸ್ಯೆ ಇದೆ. ಮನೆಗಳ ಹಕ್ಕು ಪತ್ರಗಳನ್ನು ಕೊಡಿಸಿಕೊಡಬೇಕು. ಕೆಲ ಬಡ ಕುಟುಂಬಗಳಿಗೆ ನಿವೇಶನ ಅವಶ್ಯವಿದೆ, ಗ್ರಾಮದ ಹೆಸರಿನ ನಾಮಫಲಕ ಹಾಕಬೇಕು ಎಂಬುದು ಸೇರಿದಂತೆ ಹಲವಾರು ಸಮಸ್ಯೆಗಳನ್ನು ನಿಗಮದ ಅಧ್ಯಕ್ಷರ ಗಮನಕ್ಕೆ ಗಮನಕ್ಕೆ ತಂದರು.

ಸಮಸ್ಯೆಗಳನ್ನು ಆಲಿಸಿ ಮಾತನಾಡಿದ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ. ಪಲ್ಲವಿ ಅವರು ಯಾವುದೇ ಸರಕಾರಿ ಕಾರ್ಯಕ್ರಮಗಳನ್ನು ಪ್ರಾಮಾಣಿಕವಾಗಿ ಜಾರಿ ಮಾಡುವುದು, ಸೌಲಭ್ಯಗಳನ್ನು ನಿಗದಿತ ಕಾಲಮಿತಿಯಲ್ಲಿ ಸಮುದಾಯದ ಜನರಿಗೆ ತಲುಪಿಸುವುದು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳ ಅದ್ಯ ಕರ್ತವ್ಯವಾಗಿದೆ. ಆಯಾ ಗ್ರಾಮ ಪಂಚಾಯಿತಿ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅಲೆಮಾರಿ ಸಮುದಾಯಗಳ ಸಮುದಾಯಗಳ ಅಭಿವೃದ್ಧಿಗೆ ಬದ್ದರಾಗಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮುಕ್ಕಡಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರಾದ ಶಿವಣ್ಣನಾಯ್ಕ, ಚಾಮರಾಜನಗರ ತಾಲೂಕು ತಹಸೀಲ್ದಾರ್ ಗಿರಿಜ, ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಕಂಠೇರಾಜೇ ಅರಸ್, ತಾಲೂಕು ಸಮಾಜ ಕಲ್ಯಾಣಾಧಿಕಾರಿ ನಂಜುಂಡೇಗೌಡ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶೃತಿ, ಕಾರ್ಯದರ್ಶಿ ಪ್ರಕಾಶ್, ಮುಖಂಡರಾದ ರಾಜೇಂದ್ರಕುಮಾರ್, ಶಿವಕುಮಾರ್, ಇತರರು ಇದೇ ವೇಳೆ ಇದ್ದರು.

ಎಸ್ಸಿ ಸಮೀಕ್ಷೆಗೆ ಮಾದಿಗ ಎಂದೇ ನಮೂದಿಸಿ

ಜನ ಜಾಗೃತಿ ಸಭೆಯಲ್ಲಿ ಪಾಲನಹಳ್ಳಿ ಮಠದ ಸಿದ್ದರಾಜು ಸ್ವಾಮೀಜಿ ಅವರು ಮಾತನಾಡಿದರು.

ನೆಲಮಂಗಲ : ಮೇ 5 ರಿಂದ 17ರವರೆಗೆ ಮನೆ ಮನೆಗೆ ಭೇಟಿ ನೀಡಿ ನಡೆಸಲಿರುವ ಒಳಮೀಸಲಾತಿ ಸಮೀಕ್ಷೆ ಸಂದರ್ಭದಲ್ಲಿ ಪರಿಶಿಷ್ಟ ಜಾತಿಯಲ್ಲಿ ಬರುವ ಎಲ್ಲರೂ ಮಾದಿಗರು ಎಂದು ಬರೆಯಿಸಬೇಕು ಎಂದು ಪಾಲನಹಳ್ಳಿ ಮಠದ ಸಿದ್ದರಾಜು ಸ್ವಾಮೀಜಿ ಹೇಳಿದರು.

ಸೋಲೂರು ಹೋಬಳಿ ಪಾಲನಹಳ್ಳಿ ಮಠದಲ್ಲಿ ದಲಿತ ಸಂಘರ್ಷ ಸಮಿತಿ ವತಿಯಿಂದ ನಡೆದ ಜನ ಜಾಗೃತಿ ಸಭೆಯಲ್ಲಿ ಮಾತನಾಡಿದರು. ಸಾಮಾಜಿಕವಾಗಿ ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಮಾದಿಗ ಸಮುದಾಯ ಸಾಕಷ್ಟು ಅವಕಾಶ ವಂಚಿತವಾಗಿದೆ. ಇದನ್ನು ಸರಿಪಡಿಸಲು ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಿ ಒಳಮೀಸಲಾತಿ ಕಲ್ಪಿಸಲು ಸರಕಾರ ಮುಂದಾಗಿದೆ. ಹಿಂದೆ ಮಾಡಿರುವ ತಪ್ಪುಗಳನ್ನು ಈಗಲೂ ಮಾಡದೇ ತಮ್ಮ ಮಾದಿಗ ಜಾತಿಯನ್ನು ನಿಖರವಾಗಿ ಬರೆಸಬೇಕು. ಇದರಿಂದ ಮಾದಿಗ ಸಮುದಾಯಕ್ಕೆ ದೊರೆಯಬೇಕಿರುವ ಸವಲತ್ತು, ರಾಜಕೀಯ ಪ್ರಾತಿನಿಧ್ಯ ಪಡೆಯಲು ಸಹಕಾರಿ ಆಗಲಿದೆ ಎಂದರು.

ರಾಜ್ಯ ಬಿಜೆಪಿ ವಕ್ತಾರ ವೆಂಕಟೇಶ್ ದೊಡ್ಡೇರಿ ಮಾ ತನಾಡಿ, ಅಧಿಕಾರಿಗಳು.ಶಿಕ್ಷಕರು ಮನೆ ಮನೆಗೆ ಭೇಟಿ ಕೊಟ್ಟು ಸಮೀಕ್ಷೆ ನಡೆಸುತ್ತಾರೆ. ರಾಜಕೀಯವಾಗಿ ಶೈಕ್ಷಣಿಕವಾಗಿ ಹಿಂದುಳಿದಿರುವ ಮಾದಿಗರು ಸಮೀಕ್ಷೆ ವೇಳೆ ಮಾದಿಗ ಎಂದೇ ಬರೆಯಿಸಬೇಕು. 35 ಲಕ್ಷಕ್ಕೂ ಹೆಚ್ಚು ಜನಸಂಖ್ಯೆ ಮಾದಿಗ ಸಮುದಾಯ ಹೊಂದಿದೆ ಎಂದರು. ಸಂಘಟನಾ ಸಂಚಾಲಕ ವೆಂಕಟೇಶ್, ಸಂಚಾಲಕ ಬರಧಿ, ಮುಖಂಡರಾದ ವೀರಣ್ಣ, ಮಾಗಡಿ ಪುರಸಭಾ ಸದಸ್ಯ ರಂಗಹನುಮಯ್ಯ, ಮಾಡಬಾಳ್ ಜಯರಾಮ್, ರವಿಕುಮಾರ್, ಕನಕೇನಹಳ್ಳಿ ಕೃಷ್ಣಪ್ಪ, ಶಿವಶಂಕರ್, ಬಸವರಾಜು ಇದ್ದರು.

ವಾಹನ ದಾಖಲೆ ಸಲ್ಲಿಕೆ 15 ದಿನಗಳ ಗಡುವು

ತುಮಕೂರು: ತಿಪಟೂರು ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವಾರಸುದಾರರಿಲ್ಲದೆ ನಿಲ್ಲಿಸಿರುವ ಬೈಕು, ಕಾರು, ಒಟ್ಟು 11 ವಾಹನಗಳನ್ನು ವಶಪಡಿಸಿಕೊಂಡಿದ್ದು, ವಾಹನ ಮಾಲೀಕರು ಅಗತ್ಯ ದಾಖಲೆಗಳನ್ನು ಸಲ್ಲಿಸಿ ಹಿಂಪಡೆ ಯಲು 15 ದಿನಗಳ ಗಡುವು ನೀಡಲಾಗಿದೆ. ತಿಪಟೂರು ಜೆ.ಎಂ.ಎಫ್.ಸಿ. ನ್ಯಾಯಾಲಯಕ್ಕೆ ಸಲ್ಲಿಸಿ ವಾಹನಗಳನ್ನು ಪಡೆಯಬಹುದು. ಇಲ್ಲವಾದಲ್ಲಿ ಮುಂದಿನ ಕ್ರಮಕ್ಕಾಗಿ ನ್ಯಾಯಾಲಯಕ್ಕೆ ಹಾಜರುಪಡಿ ಸಲಾಗುವುದು ಎಂದು ಪೊಲೀಸ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಸಮಾಚಾರ ಸಣ್ಣದಲ್ಲ

ಆಕ್ಷೇಪಾರ್ಹ ಪೋಸ್ಟ್: ದೂರು ದಾಖಲು

ಮಂಗಳೂರು: ಸುಹಾಸ್ ಶೆಟ್ಟಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕರ ಬಗ್ಗೆ ಆಕ್ಷೇಪಾರ್ಹ ಪೋಸ್ಟ್ ಮಾಡಿರುವ ಶಾಸಕ ಹರೀಶ್ ಪೂಂಜಾ, ಬಿಜೆಪಿ ಕಾರ್ಯಕರ್ತ ವಿಕಾಸ್.ಪಿ ವಿರುದ್ಧ ಜಿಲ್ಲಾ ಕಾಂಗ್ರೆಸ್ ಪೊಲೀಸ್ ಕಮಿಷನರ್‌ಗೆ ಸೋಮವಾರ ದೂರು ನೀಡಿದೆ. ದ.ಕ.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಪರವಾಗಿ ಎನ್.ಎಸ್.ಯು.ಐ ಜಿಲ್ಲಾಧ್ಯಕ್ಷ ಸುಹಾನ್ ಆಳ್ವ ಪೊಲೀಸ್ ಕಮಿಷನರ್ ಅನುಪಮ್ ಅಗರ್ವಾಲ್‌ಗೆ ದೂರು ನೀಡಿದರು. ''ಶಾಸಕ ಹರೀಶ್ ಪೂಂಜಾ, ಬಿಜೆಪಿ ಕಾರ್ಯಕರ್ತ ವಿಕಾಸ್.ಪಿ ಎಂಬವರು ಸುಹಾಸ್ ಶೆಟ್ಟಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣದಲ್ಲಿ ಕಾಂಗ್ರೆಸ್ ನಾಯಕರ ವಿರುದ್ಧ ಸುಳ್ಳು ಸುದ್ದಿ ಹಬ್ಬಿಸಿದ್ದಾರೆ. ಸಮಾಜದಲ್ಲಿ ಶಾಂತಿ ಭಂಗ ಉಂಟು ಮಾಡುವ ಉದ್ದೇಶದಿಂದ ಕೋಮು ಗಲಭೆಗೆ ಪ್ರಚೋದನೆಗೆ ನೀಡಿದ್ದಾರೆ. ಈ ಬಗ್ಗೆ ಗಂಭೀರವಾಗಿ ಪರಿಗಣಿಸಿ ಇಬ್ಬರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು'' ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ.ಹರೀಶ್ ಕುಮಾರ್ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ವಿರಾಮ
ಪ್ರತಿ ಭಾನುವಾರ

ಶೆಟ್ಟಿ ಪ್ರಕರಣ: ವಿದೇಶಿ ಹಣ ಬಳಕೆ?

ರೌಡಿಶೀಟರ್ ಆಗಿದ್ದ ಕಾರಣ ಅದೇ ಕಾಯಿದೆಯಲ್ಲಿ ಪ್ರಕರಣ ದಾಖಲಾಗಿದೆ: ಪರಂ

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ತೀವ್ರ ವಾಕ್ಸಮರಕ್ಕೆ ಕಾರಣವಾಗಿರುವ ಸುಹಾಸ್ ಶೆಟ್ಟಿ ಹತ್ಯೆಗೆ ವಿದೇಶದಿಂದ ಬಂಡವಾಳ ಬಂದಿರುವ ಅನುಮಾನ ಶುರುವಾಗಿದ್ದು, ಪೊಲೀಸರು ಈ ನಿಟ್ಟಿನಲ್ಲಿ ತನಿಖೆ ಆರಂಭಿಸಿದ್ದಾರೆ.

ಕೊಲೆ ಪ್ರಕರಣದಲ್ಲಿ ಈಗಾಗಲೇ ಬಂಧಿತರಾಗಿರುವ ಎಂಟು ಆರೋಪಿಗಳ ವಿವಿಧ ಬ್ಯಾಂಕ್ ಖಾತೆಗಳ ಪರಿಶೀಲನೆಗೆ ಮುಂದಾಗಿರುವ ಪೊಲೀಸರು, ಸುಹಾಸ್ ಶೆಟ್ಟಿ ಹತ್ಯೆ ಹಿಂದೆ ಅನೇಕ ಕಾಣದ ಕೈಗಳ ಕೈವಾಡ ಶಂಕೆ



ಹಿನ್ನೆಲೆಯಲ್ಲಿ ಹಣ ಸಹಾಯ ಮಾಡಿರುವ ಅನುಮಾನ ವ್ಯಕ್ತವಾಗಿವೆ. ಕೊಲೆಯಾಗಿರುವ ಫಾಝಿಲ್ ಸಹೋದರ ಆದಿಲ್ ಆರೋಪಿಗಳಿಗೆ 5 ಲಕ್ಷ ರು. ಸುಪಾರಿ ಕೊಟ್ಟಿರುವುದಲ್ಲದೇ ವಿವಿಧ ಮೂಲಗಳಿಂದ ಆರೋಪಿಗಳಿಗೆ ಹಣ ಬಂದಿರುವ ಶಂಕೆ ವ್ಯಕ್ತವಾಗಿದೆ.

ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆಗೆ ಆರೋಪಿಗಳು ಮೂರು ತಿಂಗಳ ಹಿಂದೆಯೇ ಸ್ಕೆಚ್ ಹಾಕಿದ್ದರು ಎಂಬುವುದನ್ನು ಪೊಲೀಸರು ಪತ್ತೆಹಚ್ಚಿದ್ದು, ಕಳೆದ ಜನವರಿಯಲ್ಲಿ ಸ್ವಾನ್ ತಂಡಕ್ಕೆ ಆದಿಲ್ ಮೂರು ಲಕ್ಷ ಹಣ ಕೊಟ್ಟಿದ್ದ. ಆದ್ದರಿಂದ ಆ ಹಣದಿಂದ ಒಂದು ಪಿಕಪ್ ವಾಹನ ಮತ್ತು ಶಿಫ್ಟ್ ಕಾರನ್ನು ಬಾಡಿಗೆಗೆ ಹಂತಕರು ಪಡೆದುಕೊಂಡು ಆ ವಾಹನಗಳಿಂದಲೇ ಸುಹಾಸ್ ಶೆಟ್ಟಿ ಕೊಲೆ ಮಾಡಲು ಸಂಚು ರೂಪಿಸಿದ್ದ ಬಗ್ಗೆ ವಿವರಗಳು ಲಭ್ಯವಾಗಿವೆ.

ಎಲ್ಲ ಆಯಾಮದಲ್ಲಿಯೂ ತನಿಖೆ: ಇನ್ನು ಕೊಲೆ ಸುಪಾರಿಗೆ ವಿದೇಶದಿಂದ ಹಣ ಬಂದಿರುವ ವಿಷಯಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ. ಪರಮೇಶ್ವರ, ಸುಹಾಸ್ ಹತ್ಯೆ ಸುಪಾರಿಗೆ ವಿದೇಶದಿಂದ ಹಣ ನೀಡಿದ್ದರು ಎಂಬ ಆರೋಪವು ಪ್ರಕರಣದ ತನಿಖೆ ಸಂಪೂರ್ಣವಾದ ಬಳಿಕ ಸತ್ಯಾಂಶ ಗೊತ್ತಾಗಲಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಒಬ್ಬೊಬ್ಬರು ಒಂದೊಂದು ಹೇಳಿಕೆ ನೀಡುತ್ತಿದ್ದಾರೆ.

ಜನಪ್ರತಿನಿಧಿಗಳಿಗೆ ರಕ್ಷಣೆ ಇಲ್ಲ: ಬಿ.ವೈ. ವಿಜಯೇಂದ್ರ

ಕರಾವಳಿ ಪ್ರದೇಶದಲ್ಲಿ ಜನಪ್ರತಿನಿಧಿಗಳಿಗೇ ರಕ್ಷಣೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಪೊಲೀಸರ ನಡೆ, ಸರಕಾರದ ಧೋರಣೆ ಇದೇ ರೀತಿ ಮುಂದುವರೆದರೆ ಬಿಜೆಪಿಯ ಜನಪರವಾದ ಹೋರಾಟ ಮತ್ತಷ್ಟು ತೀವ್ರ ಸ್ವರೂಪ ಪಡೆಯಲಿದೆ ಎಂದು ಸರಕಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಎಚ್ಚರಿಕೆ ಕೊಟ್ಟಿದ್ದಾರೆ. ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಅವರು ತೆಕ್ಕಾರು ಗೋಪಾಲಕೃಷ್ಣ ದೇವಸ್ಥಾನ ಹಾಗೂ ಬ್ರಹ್ಮಕಲಶೋತ್ಸವದ ಕುರಿತು ಭಾವುಕವಾಗಿ ಮಾತನಾಡಿರುವುದನ್ನೇ ಆಧರಿಸಿ ನೀಡಲಾಗಿರುವ ದೂರಿಗೆ ಎಫ್‌ಐಆರ್ ದಾಖಲಿಸಲಾಗಿದೆ. ಈ ಮೂಲಕ ಸರಕಾರ ಯಾರ ಪರವಿದೆ ಎನ್ನುವುದು ಸ್ಪಷ್ಟವಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರೌಡಿಶೀಟರ್ ಅಂತ ಹೇಳಿ ಕೆಟಗೆರಿಯಲ್ಲಿ ಪೊಲೀಸ್ ಠಾಣೆಯಲ್ಲಿ ರಿಜಿಸ್ಟರ್ ಆಗಿದ್ದರೆ ಕರೆಯಬಹುದಲ್ಲವೇ? ಆತ ಯಾವ ಪಕ್ಷದಲ್ಲಿದ್ದರೂ, ರೌಡಿಶೀಟರ್ ಸಂಬಂಧಪಟ್ಟ ಸೆಕ್ಷನ್ ಇದ್ದರೆ ಅಂತವರನ್ನು ಯಾರು ಬೇಕಾದರು ಕರೆಯಬಹುದು. ಕಾನೂನು ಕರೆಯುತ್ತದೆ ಎಂದಾದರೆ, ನಾವು, ನೀವು ಕರೆಯುವುದರಲ್ಲಿ ತಪ್ಪೇನು?

- ಡಾ.ಜಿ. ಪರಮೇಶ್ವರ ಗೃಹ ಸಚಿವ

ತನಿಖೆಯ ಬಳಿಕ ಎಲ್ಲವೂ ಹೊರಬರಲಿದೆ. ಕೊಲೆಗೆ ಯಾರು ಸುಪಾರಿ ಕೊಟ್ಟಿದ್ದರು. ಕೊಟ್ಟಿಲ್ಲವೇ? ಒಂದು ವೇಳೆ ಕೊಟ್ಟಿದ್ದರೆ, ಎಷ್ಟು ಹಣ ನೀಡಿದ್ದರು ಎಂಬುದು ಗೊತ್ತಾಗಲಿದೆ. ತನಿಖೆಗೂ ಮೊದಲು ಊಹೆ ಮಾಡಲು ಬರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ದ್ವೇಷ ರಾಜಕಾರಣದ ಬಗ್ಗೆ ಮಾಹಿತಿ ಇಲ್ಲ: ಹರೀಶ್ ಪೂಜಾ ವಿರುದ್ಧ ದಾಖಲಾಗಿರುವ ಪ್ರಕರಣದ ಕುರಿತು ಬಿಜೆಪಿ ಆರೋಪಗಳಿಗೆ ಪ್ರತಿಕ್ರಿಯಿಸಿ, ದ್ವೇಷ ರಾಜಕಾರಣದ ಬಗ್ಗೆ ನನಗೆ ಹೆಚ್ಚು ಮಾಹಿತಿ ಇಲ್ಲ. ಶಾಸಕ ಹರೀಶ್ ಪೂಂಜಾ ಪ್ರಚೋಧನಾತ್ಮಕ ಹೇಳಿಕೆ ಕೊಟ್ಟಿದ್ದರೆ, ಆ ಹೇಳಿಕೆಯನ್ನು ಪೊಲೀಸರು ಕಾನೂನಾತ್ಮಕವಾಗಿ ಪರಿಶೀಲಿಸಿ ಸೆಕ್ಷನ್‌ಗಳನ್ನು ಹಾಕಿರುತ್ತಾರೆ. ಸುಮ್ಮನೇ ಶಾಸಕರ ಮೇಲೆ ಎಫ್‌ಐಆರ್ ಹಾಕಲು ಬರುವುದಿಲ್ಲ. ಅವರ ಹೇಳಿಕೆಯಲ್ಲಿನ ಅಂಶಗಳು ಕಾನೂನಿಗೆ ವಿರುದ್ಧವಾಗಿದ್ದರೆ ಎಫ್‌ಐಆರ್‌ಗೂ ಮೊದಲು ಪರಿಶೀಲಿಸುತ್ತಾರೆ ಎಂದು ಡಾ.ಜಿ. ಪರಮೇಶ್ವರ ಸ್ಪಷ್ಟಪಡಿಸಿದರು.

ಕೆಎಎಸ್ ಪ್ರಶ್ನೆಪತ್ರಿಕೆ ಮತ್ತೆ ಸೋರಿಕೆ?

← ಮೊದಲಪುಟದಿಂದ

ಮೇಲ್ವಿಚಾರಕರು ಪರೀಕ್ಷಾ ಕೊಠಡಿಗೆ ತಂದ ಪ್ರಶ್ನೆ ಪತ್ರಿಕೆಯ ಒಳಗಿನ ಕವರ್ ಕೂಡ ಹರಿದಿತ್ತು ಎಂದು ಅಭ್ಯರ್ಥಿಗಳು ಆರೋಪಿಸಿದ್ದಾರೆ. ಈ ಘಟನೆ ಬಿಬಿಎಂಪಿ ಪಿಯು ಕಾಲೇಜಿನ ಕೊಠಡಿ ಸಂಖ್ಯೆ 04 ಮತ್ತು 06ರಲ್ಲಿ ನಡೆದಿದ್ದು, ಅಭ್ಯರ್ಥಿಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಲಖನೌ: ಭಾರತವನ್ನು 'ಹಿಂದೂ ರಾಷ್ಟ್ರ' ಎಂದು ಆದಷ್ಟು ಬೇಗ ಘೋಷಣೆ ಮಾಡಬೇಕು ಎಂದು ಕೇಂದ್ರ ಸರಕಾರವನ್ನು ಆಗ್ರಹಿಸುವ ನಿರ್ಣಯವನ್ನು ಉತ್ತರ ಪ್ರದೇಶದಲ್ಲಿ ನಡೆದ 'ಧರ್ಮ ಸಂಸತ್'ನಲ್ಲಿ ಕೈಗೊಳ್ಳಲಾಗಿದೆ.

ವಿಶ್ವ ಹಿಂದೂ ಪರಿಷತ್(ವಿಹಿಂಪ) ಲಖನೌನಲ್ಲಿ ಭಾನುವಾರ ಆಯೋಜಿಸಿದ್ದ ಧರ್ಮ ಸಂಸತ್‌ನಲ್ಲಿ, ಹಿಂದೂ ಸಮುದಾಯ, ಸನಾತನ ಧರ್ಮ, ಹಿಂದೂ ಮಂದಿರಗಳ ರಕ್ಷಣೆಗೆ ಸಂಬಂಧಿಸಿದಂತೆ ಒಟ್ಟು 7 ನಿರ್ಣಯಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದೆ. 'ಲವ್ ಜಿಹಾದ್'ನಿಂದ ಹಿಂದೂ ಯುವತಿಯರನ್ನು ರಕ್ಷಿಸಲು ಹಾಗೂ 'ಭೂಮಿ ಜಿಹಾದ್'ನಿಂದ ಹಿಂದೂಗಳ ಆಸ್ತಿ ರಕ್ಷಿಸಲು 'ಸನಾತನಿ ಸೇನಾ' ಆರಂಭಕ್ಕೆ ಧರ್ಮ ಸಂಸತ್‌ನಲ್ಲಿ ನಿರ್ಣಯ ಕೈಗೊಳ್ಳಲಾಗಿದೆ.

ಧರ್ಮ ಸಂಸತ್‌ನಲ್ಲಿ ಭಾಗಿಯಾಗಿದ್ದ ಸ್ವಾಮೀಜಿಗಳು 'ಲವ್ ಜಿಹಾದ್' ಮತ್ತು 'ಲ್ಯಾಂಡ್ ಜಿಹಾದ್'ನಿಂದ ಹಿಂದೂ ಸಮುದಾಯವನ್ನು ರಕ್ಷಿಸುವ ಸಲುವಾಗಿ 'ಸನಾತನಿ ಸೇನಾ'ದಂತಹ ಪ್ರಬಲ ಸಂಘಟನೆಯ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು. ಅಲ್ಲದೇ, ಸನಾತನಿ ಸೇನಾ ಮತ್ತು ಸನಾತನಿ ಕವಚ ರಚನೆ ಹಾಗೂ ಮುರ್ಷಿದಾಬಾದ್‌ನಲ್ಲಿ ಸಂತ್ರಸ್ತ ಹಿಂದೂ ಕುಟುಂಬಗಳ ರಕ್ಷಣೆಗಾಗಿ 'ಸನಾತನಿ ಹೆಲ್ಪ್‌ಲೈನ್' ಸ್ಥಾಪನೆ ಮಾಡಲು ನಿರ್ಧರಿಸಲಾಗಿದೆ ಎಂದು ಅಯೋಧ್ಯೆಯ ಹನುಮಗಢಿ ದೇಗುಲದ ಮಹಂತರಾದ ರಾಜುದಾಸ್ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.

ಮುಸ್ಲಿಮರೇ ಹೆಚ್ಚಾಗಿರುವ ಪ್ರದೇಶಗಳಲ್ಲಿ ಹಿಂದೂ ಸಮುದಾಯ ಮತ್ತು ದೇಗುಲಗಳ ಸಂರಕ್ಷಣೆ ದೃಷ್ಟಿಯಿಂದ 'ವಿಶ್ವ ಹಿಂದೂ ರಕ್ಷಾ ಪರಿಷತ್' ಕಚೇರಿಗಳನ್ನು ಆರಂಭಿಸಲು ನಿರ್ಧರಿಸಲಾಗಿದೆ. ಈ ಕಚೇರಿಗಳಿಗೆ 'ಸನಾತನ ಕವಚ್' ಎಂಬ ಹೆಸರಿಡಲಾಗುವುದು. ಈ ಕಚೇರಿ ಆ ಭಾಗದಲ್ಲಿನ ಹಿಂದೂಗಳ ಜೀವ-ಜೀವನ ರಕ್ಷಿಸಲು ಶ್ರಮಿಸಲಿದೆ. ಧಾರ್ಮಿಕ ಹಕ್ಕುಗಳ ರಕ್ಷಣೆಗೂ ಕೆಲಸ ಮಾಡಲಿದೆ ಎಂದು ಸುದ್ದಿಸಂಸ್ಥೆಗೆ ವಿವರಿಸಿದ್ದಾರೆ.

ಸನಾತನ ಧರ್ಮದ ರಕ್ಷಣೆ ಮತ್ತು ಸನಾತನ ಗೌರವ ಸಮ್ಮಾನವನ್ನು ಕಾಪಾಡಲು ಹೋರಾಡುವವರನ್ನು ಗುರುತಿಸಿ ಗೌರವಿಸುವ ಕಾರ್ಯ ನಡೆಯಬೇಕು ಎಂಬ ನಿರ್ಣಯವೂ ಸಭೆಯಲ್ಲಾಗಿದೆ ಎಂದರು.

ಅಯೋಧ್ಯೆ, ಕಾಶಿ, ಮಥುರಾ ಮತ್ತಿತರ ಧಾರ್ಮಿಕ ಕ್ಷೇತ್ರಗಳ ಧಾರ್ಮಿಕ ಮುಖಂಡರು, ಉತ್ತರ ಪ್ರದೇಶ ಉಪ ಮುಖ್ಯಮಂತ್ರಿ ಬ್ರಿಜೇಶ್ ಪಾಠಕ್ ಸೇರಿದಂತೆ ಹಲವು ಪ್ರಮುಖರು ಧರ್ಮ ಸಂಸತ್‌ನಲ್ಲಿ ಭಾಗಿಯಾಗಿದ್ದರು.

ಜೂನ್‌ನಲ್ಲಿ ಸನಾತನ ಯಾತ್ರೆ

ಪಶ್ಚಿಮ ಬಂಗಾಳದ ಮುರ್ಷಿದಾಬಾದ್‌ನಲ್ಲಿ ವಕ್ಫ್ ತಿದ್ದುಪಡಿ ಕಾಯಿದೆಗೆ ವಿರೋಧ ವ್ಯಕ್ತಪಡಿಸುವ ನೆಪದಲ್ಲಿ ಪ್ರತಿಭಟನೆ ಆರಂಭಿಸಿದ ಮುಸ್ಲಿಂ ಸಮುದಾಯ, ಜಿಲ್ಲೆಯ ವಿವಿಧ ಗ್ರಾಮ, ಪಟ್ಟಣಗಳಲ್ಲಿ ಹಿಂದೂ ಸಮುದಾಯದ ಮೇಲೆ ಮಾರಾಣಾಂತಿಕ ದಾಳಿ ನಡೆಸಿದೆ. 400 ಹಿಂದೂಗಳು ಜೀವಭಯದಲ್ಲಿ ಮನೆ ತೊರೆದು ಓಡಿ ಹೋಗುವಂತೆ ಮಾಡಲಾಗಿದೆ. ಈ ಹಿಂಸಾಚಾರವನ್ನು ಖಂಡಿಸಿ ದೇಶಾದ್ಯಂತ 'ಸನಾತನ ಯಾತ್ರೆ' ಕೈಗೊಳ್ಳಲೂ ಧರ್ಮ ಸಂಸತ್ ನಿರ್ಧರಿಸಿದೆ. ಜೂನ್‌ನಲ್ಲಿ ಮುರ್ಷಿದಾಬಾದ್‌ನಿಂದಲೇ ಯಾತ್ರೆ ಆರಂಭಗೊಳ್ಳಲಿದೆ ಎಂದು ವಿಹಿಂಪ ನಾಯಕರು ಹೇಳಿದ್ದಾರೆ.

ಮಸೀದಿಗಳು ಹೆಚ್ಚಿದಷ್ಟೂ ಜಿಹಾದಿ ವೃದ್ಧಿ: ತಸ್ಲಿಮಾ

ದೆಹಲಿ: ಯುರೋಪ್‌ನಲ್ಲಿ ಚರ್ಚುಗಳೆಲ್ಲವೂ ವಸ್ತು ಸಂಗ್ರಹಾಲಯಗಳಾಗಿ ಬದಲಾಗುತ್ತಿದ್ದರೆ, ಮುಸ್ಲಿಮರು ಎಲ್ಲೆಡೆ ಹೆಚ್ಚು ಮಸೀದಿಗಳನ್ನು ನಿರ್ಮಿಸುವಲ್ಲಿ ಮಗ್ನರಾಗಿದ್ದಾರೆ. ಈಗಾಗಲೇ ಲಕ್ಷಾಂತರ ಮಸೀದಿಗಳು ನಿರ್ಮಾಣವಾಗಿದ್ದು, ಅದೇ ಪ್ರಮಾಣದಲ್ಲಿ ಜಿಹಾದಿಗಳು ಸಿದ್ಧರಾಗುತ್ತಿದ್ದಾರೆ ಎಂದು ಬಾಂಗ್ಲಾದೇಶ ಮೂಲದ ಲೇಖಕಿ, ಭಾರತ ನಿವಾಸಿ ತಸ್ಲಿಮಾ ನಸ್ರೀನ್ ಹೇಳಿದ್ದಾರೆ.

ದೆಹಲಿ ಸಾಹಿತ್ಯ ಉತ್ಸವದಲ್ಲಿ ಸೋಮವಾರ ಮಾತನಾಡಿದ ಅವರು, ಮದರಸಾ ಇರಬಾರದು. ಮಕ್ಕಳು ಎಲ್ಲಾ ಪುಸ್ತಕಗಳನ್ನು ಓದುವಂತಾಗಬೇಕು ಎಂದರು.

ಕಳೆದ 1,400 ವರ್ಷಗಳಲ್ಲಿ ಇಸ್ಲಾಂ ವಿಕಸನಗೊಂಡಿಲ್ಲ. ಅದು ವಿಕಸನಗೊಳ್ಳುವವರೆಗೂ ಭಯೋತ್ಪಾದಕರನ್ನು ಬೆಳೆಸುತ್ತಲೇ ಇರುತ್ತದೆ. 2016ರ ಢಾಕಾ ದಾಳಿಯಲ್ಲಿ ಕಲ್ಮಾವನ್ನು ಪಠಿಸದ್ದಕ್ಕೆ ಜನರನ್ನು ಹತ್ಯೆ ಮಾಡಲಾಯಿತು. ನಮ್ಮ ನಂಬಿಕೆ ವಿವೇಚನೆ ಮತ್ತು ಮಾನವೀಯತೆಯನ್ನು ಮೀರಿದಾಗ ಹೀಗೆ ಆಗುತ್ತದೆ ಎಂದರು. 10 ವರ್ಷ ಅಮೆರಿಕದಲ್ಲಿದ್ದರೂ ಹೊರಗಿನವಳಂತೆ ಭಾಸವಾಗುತ್ತಿತ್ತು. ಕೋಲ್ಕತ್ತದಲ್ಲಿ ಮಾತ್ರ ಸ್ವಂತ ಮನೆಯಲ್ಲಿರುವ ಭಾವ. ಪಶ್ಚಿಮ ಬಂಗಾಳದಿಂದ ಹೊರಹಾಕಿದ ನಂತರ ದೆಹಲಿ ಮತ್ತೊಂದು ಮನೆಯಾಯಿತು. ಸ್ವಂತ ದೇಶ ಬಾಂಗ್ಲಾದಲ್ಲಿರದ ಆತ್ಮೀಯ ಭಾವವನ್ನು ಭಾರತ ನನಗೆ ನೀಡಿದೆ ಎಂದರು.

ರೇಬಿಸ್‌ಗೆ 7ರ ಬಾಲೆ ಬಲಿ

ತಿರುವನಂತಪುರ: ಕೇರಳ ರಾಜ್ಯದಲ್ಲಿ 7 ವರ್ಷದ ಬಾಲಕಿ ರೇಬಿಸ್‌ಗೆ ಬಲಿಯಾಗಿದ್ದಾಳೆ. ಇದರೊಂದಿಗೆ ಕಳೆದೊಂದು ತಿಂಗಳಲ್ಲಿ ರೇಬಿಸ್ ಪ್ರಕರಣದಲ್ಲಿ ಮಕ್ಕಳ ಸಾವಿನ ಸಂಖ್ಯೆ 3ಕ್ಕೇರಿದಂತಾಗಿದೆ. ಕೊಲ್ಲಂ ಜಿಲ್ಲೆಯ ಕುನ್ನಿಕೋಡ್ ನಿವಾಸಿಯಾದ 7 ವರ್ಷದ ಬಾಲಕಿ ನಿಯಾ ಫೈಸಲ್ ನಾಯಿ ಕಡಿತಕ್ಕೆ ಒಳಗಾಗಿದ್ದಳು. ಬಳಿಕ ಪೋಷಕರು ಆಸ್ಪತ್ರೆಗೆ ಕರೆದೊಯ್ದು ಲಸಿಕೆಯನ್ನೂ ಹಾಕಿಸಿದ್ದರು. ಹಾಗಿದ್ದೂ ಆಕೆಯಲ್ಲಿ ರೇಬಿಸ ಲಕ್ಷಣ ಕಂಡುಬಂದಿತು. ಬಳಿಕ ತಿರುವನಂತಪುರದಲ್ಲಿನ ಶ್ರೀ ಅವಿತ್ತೋಮ್ ಥಿರುನಾಲ್ ಸರಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಹಲವು ದಿನಗಳಿಂದ ವೆಂಟಿಲೇಟರ್‌ನಲ್ಲಿರಿಸಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ಸೋಮವಾರ ಅಸುನೀಗಿದಳು ಎಂದು ಕುಟುಂಬದವರು ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.

ಕೇಂದ್ರಕ್ಕೆ ಜಮಿಯತ್ ಮೌಲಾನಾ ಅರ್ಷದ್ ಮದನಿ ಪ್ರಶ್ನೆ
ಪಹಲ್ಗಾಮ್ ದಾಳಿಗೆ ಭದ್ರತಾ ವೈಫಲ್ಯ ಕಾರಣ ಎಂದು ಟೀಕೆ

ಸಿಂಧೂ ಒಪ್ಪಂದ ತಡೆಹಿಡಿದರೆ 5 ನದಿಗಳ ನೀರು ಎಲ್ಲಿ ಹರಿಸುವಿರಿ?

ದೆಹಲಿ: ಚೆನಾಬ್, ರಾವಿ, ಝೀಲಂ, ಬಿಯಾಸ್ ಮತ್ತು ಸಟ್ಲೆಜ್ ನದಿಗಳು ಸಾವಿರಾರು ವರ್ಷಗಳಿಂದ ಕಾಶ್ಮೀರ ಭಾಗದಿಂದ ಪಾಕಿಸ್ತಾನಕ್ಕೆ ಹರಿಯುತ್ತಿವೆ. ಅಲ್ಲಿ ಸಿಂಧೂ ನದಿ ಎಂದಾಗುತ್ತಿವೆ. ಈಗ ಒಮ್ಮೆಲೇ ಸಿಂಧೂ ನದಿ ನೀರು ಹಂಚಿಕೆ ಒಪ್ಪಂದವನ್ನು ತಡೆ ಹಿಡಿದರೆ ಆ ನದಿಗಳ ನೀರನ್ನೆಲ್ಲಾ ನೀವು ಎಲ್ಲಿಗೆ ತೆಗೆದುಕೊಂಡು ಹೋಗುವಿರಿ? ಎಂದು ಜಮಿಯತ್ ಮುಖ್ಯಸ್ಥ ಮೌಲಾನಾ ಅರ್ಷದ್ ಮದನಿ ಭಾರತ ಸರಕಾರವನ್ನು ಪ್ರಶ್ನೆ ಮಾಡಿದ್ದಾರೆ. ಇದು ಸುಲಭದ ಕೆಲಸವಲ್ಲ ಎಂದೂ ಹೇಳಿದ್ದಾರೆ.

ಜಮಿಯತ್(ಅರ್ಷದ್ ಮದನಿ ಬಣ) 2 ದಿನಗಳ ಕಾರ್ಯಕಾರಿ ಸಮಿತಿ ಸಭೆ ನಂತರ ಸುದ್ದಿಗೋಷ್ಠಿ ನಡೆಸಿದ ಮೌಲಾನಾ ಅರ್ಷದ್ ಮದನಿ, 'ನಾನು ಮುಸ್ಲಿಂ, ಇಡೀ ಜೀವನವನ್ನು ಈ ದೇಶದಲ್ಲಿ ಕಳೆದಿದ್ದೇನೆ. ಇಲ್ಲಿ ಈಗ ಪ್ರಚಾರವಾಗುತ್ತಿರುವ ಕೆಲ ವಿಷಯಗಳು ದೇಶಕ್ಕೆ ಸೂಕ್ತವಲ್ಲ ಎಂದು ನನಗೆ ತಿಳಿದಿದೆ ಎಂದಿದ್ದಾರೆ.

ಪಹಲ್ಗಾಮ್‌ನಲ್ಲಿ 26 ಅಮಾಯಕರ ಜೀವಬಲಿ ಪಡೆದ ಪಾಕ್ ಮೂಲದ ಉಗ್ರರ ದಾಳಿಯನ್ನು ಮೊದಲ ಬಾರಿಗೆ ಖಂಡಿಸಿರುವ ಮದನಿ, ಅಮಾಯಕರನ್ನು ಕೊಲ್ಲುವ ಉಗ್ರರು ಮನುಷ್ಯರೇ ಅಲ್ಲ ಎಂದು ಕಿಡಿಕಾರಿದ್ದಾರೆ. ಆದರೆ ಇಡೀ ಮುಸ್ಲಿಂ ಸಮುದಾಯವನ್ನು ಗುರಿಯಾಗಿಸಿ ಟೀಕಿಸುವುದು ಸರಿಯಲ್ಲ ಎಂದರು.

ಪಹಲ್ಗಾಮ್ ದಾಳಿಗೆ ಭದ್ರತಾ ವೈಫಲ್ಯವೇ ಕಾರಣ. 3,000ಕ್ಕೂ ಹೆಚ್ಚು ಸಂದರ್ಶಕರು ಸೇರಿದ್ದ ಪ್ರವಾಸಿತಾಣದಲ್ಲಿ ಸರಿಯಾದ ಭದ್ರತಾ ವ್ಯವಸ್ಥೆ ಇಲ್ಲದಿರುವುದು ವಿಚಿತ್ರವಾಗಿದೆ. ಸೇನಾಪಡೆ ಮತ್ತು ಬಿಎಸ್‌ಎಫ್ ಸೈನಿಕರು ಜಮ್ಮು-ಕಾಶ್ಮೀರದಲ್ಲಿ ಪ್ರತಿ ಹಂತದಲ್ಲೂ ನಿಂತಿರುತ್ತಾರೆ. ಹೀಗಿರುವಾಗ ಭಯೋತ್ಪಾದಕರು ಅಷ್ಟು ಸುಲಭವಾಗಿ ಪ್ರವಾಸಿ ತಾಣವನ್ನು ಹೇಗೆ ತಲುಪಿದರು? ದಾಳಿ ನಡೆದ 1 ಗಂಟೆ ನಂತರ ಪೊಲೀಸರು ಮತ್ತು ಸೇನಾ ಸಿಬ್ಬಂದಿ ಬಂದಿದ್ದಾರೆ. ಸರಕಾರ ಈ ಬಗ್ಗೆ ತನಿಖೆ ಮಾಡಿಸಬೇಕು ಎಂದು ಮದನಿ ಹೇಳಿದ್ದಾರೆ.

ದ್ವೇಷ ಭಾವ ಹೆಚ್ಚುತ್ತಿದೆ

ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾದವರ ಮನೆಗಳನ್ನು ಮಾತ್ರ ಕೆಡವಲಾಗಿದೆ ಎಂದು ಸರಕಾರಕ್ಕೆ ಪೂರ್ಣ ಖಚಿತವಿದ್ದರೆ ಆ ಕ್ರಮ ಸರಿ. ಕೇವಲ ಅನುಮಾನದ ಮೇಲೆ ಕ್ರಮ ಕೈಗೊಂಡಿದ್ದರೆ ತಪ್ಪು. ನಿಯಮ ಪ್ರೀತಿಯಿಂದ ಇರಬೇಕು, ದ್ವೇಷದಿಂದಲ್ಲ. ಸರಕಾರದ ನಡೆಯಿಂದ ದೇಶದಲ್ಲಿ ದ್ವೇಷ ಭಾವನೆ ಹೆಚ್ಚುತ್ತಿದೆ ಎಂದು ಮೌಲಾನಾ ಅರ್ಷದ್ ಮದನಿ ಆರೋಪಿಸಿದರು. ಯುದ್ಧ ಉತ್ತಮ ಪರಿಹಾರವಲ್ಲ. ಅದು ಪ್ರಮುಖ ಆರ್ಥಿಕ ಪರಿಣಾಮಗಳನ್ನು ಬೀರುತ್ತದೆ ಎಂದು ಪ್ರತಿಪಾದಿಸಿದರು.

5 ಕೆಜಿ ಸಾಮರ್ಥ್ಯದ ಐಇಡಿ, ವೈರ್‌ಲೆಸ್ ಸೆಟ್ ವಶ

ಉಗ್ರರ ಅಡಗುತಾಣ -ಶಸ್ತ್ರಾಸ್ತ್ರ ಪತ್ತೆ

ಮೇಂಧರ್: ಜಮ್ಮು-ಕಾಶ್ಮೀರದ ಪೂಂಚ್ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಭಾರತೀ ಸೇನಾ ಪಡೆಗಳು ಭಯೋತ್ಪಾದಕರ ಅಡಗುತಾಣಗಳನ್ನು ಪತ್ತೆ ಹಚ್ಚಿದ್ದು, 5 ಸುಧಾರಿತ ಸ್ಫೋಟಕ ಸಾಧನ (ಐಇಡಿ)ಗಳು ಮತ್ತು 2 ವೈರ್‌ಲೆಸ್ ರೇಡಿಯೊ ಸೆಟ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.

ಸ್ಟೀಲ್ ಬಕೆಟ್‌ನಲ್ಲಿ 2 ಹಾಗೂ ಟಿಫಿನ್ ಬಾಕ್ಸ್‌ಗಳಲ್ಲಿ 3 ಐಇಡಿಗಳನ್ನು ಇರಿಸಿರುವುದು ಕಂಡುಬಂದಿದೆ. ಅರ್ಧ ಕೆಜಿಯಿಂದ ಐದು ಕೆಜಿವರೆಗಿನ ಸಾಮರ್ಥ್ಯದ ಐಇಡಿಗಳನ್ನು ಸ್ಥಳದಲ್ಲೇ ನಾಶಪಡಿಸಲಾಗಿದೆ. 2 ವೈರ್‌ಲೆಸ್ ಸೆಟ್‌ಗಳು, ಯೂರಿಯ ಇರುವ 5 ಪ್ಯಾಕೆಟ್‌ಗಳು, 5 ಕೆಜಿ ಗ್ಯಾಸ್ ಸಿಲಿಂಡರ್ ಮತ್ತು ಪಾತ್ರೆಗಳು, ಬೈನಾಕ್ಯುಲರ್, 3 ಕ್ಯಾಪ್, 3 ಕಂಬಳಿ, ಪ್ಯಾಂಟ್‌ಗಳು ವಶವಾಗಿವೆ.

ಗಡಿ ಜಿಲ್ಲೆಯಲ್ಲಿ ವಿಧ್ವಂಸಕ ಕೃತ್ಯ ನಡೆಸುವ ಉಗ್ರರ ಸಂಚು ವಿಫಲಗೊಳಿಸಲಾಗಿದೆ. ಸುರಂಕೋಟ್‌ನ ಮರ್ಹೋಟೆ ಪ್ರದೇಶದ ಸುರಂತಲ್‌ನಲ್ಲಿ ಸೇನೆ ಮತ್ತು ಜಮ್ಮು-ಕಾಶ್ಮೀರ ಪೊಲೀಸರು ನಡೆಸಿದ ವಿಶೇಷ ಜಂಟಿ ಕಾರ್ಯಾಚರಣೆಯಲ್ಲಿ ಉಗ್ರರ ಅಡಗುತಾಣಗಳು ಪತ್ತೆಯಾಗಿವೆ ಎಂದು ಭದ್ರತಾ ಪಡೆ ಅಧಿಕಾರಿಗಳು ತಿಳಿಸಿದ್ದಾರೆ.

ಕಾಶ್ಮೀರಿ ದ್ವೇಷ ಸಲ್ಲ: ಹಿಮಾಂಶಿ ಟ್ರೋಲ್

ದೆಹಲಿ: ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮಡಿದ ನೌಕಾಪಡೆ ಅಧಿಕಾರಿ ಲೆಫ್ಟಿನೆಂಟ್ ವಿನಯ್ ನರ್ವಾಲ್ ಅವರ ಪತ್ನಿ ಹಿಮಾಂಶಿ ನರ್ವಾಲ್, 'ಪಹಲ್ಗಾಮ್ ಘಟನೆಗಾಗಿ ಕಾಶ್ಮೀರಿಗಳ ವಿರುದ್ಧ ದ್ವೇಷ ಸಲ್ಲ' ಹೇಳಿರುವುದಕ್ಕೆ ಹಿಮಾಂಶಿ ಅವರನ್ನು ಜಾಲತಾಣದಲ್ಲಿ ಟ್ರೋಲ್ ಮಾಡಲಾಗುತ್ತಿದೆ. ನೆಟ್ಟಿಗರ ಈ ನಡೆಯನ್ನು ಖಂಡಿಸಿರುವ ರಾಷ್ಟ್ರೀಯ ಮಹಿಳಾ ಆಯೋಗ(ಎನ್‌ಸಿಡಬ್ಲ್ಯು) ಹಿಮಾಂಶಿ ಅವರ ಬೆನ್ನಿಗೆ ನಿಂತಿದೆ. 'ಹಿಮಾಂಶಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅದಕ್ಕಾಗಿ ಅವರನ್ನು ಟೀಕಿಸುವುದು ಖಂಡನೀಯ ಮತ್ತು ಸ್ವೀಕಾರಾರ್ಹವಲ್ಲ, ಭಿನ್ನಾಭಿಪ್ರಾಯ ವ್ಯಕ್ತಪಡಿಸುವಾಗ ಸಭ್ಯತೆ ಮತ್ತು ಸಾಂವಿಧಾನಿಕ ಮಿತಿಯಲ್ಲಿರಬೇಕು. ರಾಷ್ಟ್ರೀಯ ಮಹಿಳಾ ಆಯೋಗವು ಪ್ರತಿಯೊಬ್ಬ ಮಹಿಳೆಯ ಗೌರವ ಮತ್ತು ಘನತೆಯನ್ನು ರಕ್ಷಿಸಲು ಬದ್ಧವಾಗಿದೆ' ಎಂದು ಮಹಿಳಾ ಆಯೋಗದ ಅಧ್ಯಕ್ಷೆ ವಿಜಯಾ ರಹತ್ಕರ್ 'ಎಕ್ಸ್' ಸಂದೇಶದಲ್ಲಿ ಹೇಳಿದ್ದಾರೆ.

ಸಮಾಚಾರ ಸಣ್ಣದಲ್ಲ

ಸ್ಕಾಲರ್‌ಶಿಪ್ ಪರೀಕ್ಷೆ: ಆದರ್ಶ ಶಾಲೆ ಸಾಧನೆ

ಮೈಸೂರು: ಎಂಟನೇ ತರಗತಿಯ ಪ್ರತಿಭಾವಂತ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ವಿದ್ಯಾರ್ಥಿ ವೇತನದ ಮೂಲಕ ಬೆಂಬಲ ನೀಡಿ ಪ್ರೇರೇಪಿಸುವ ಉದ್ದೇಶದಿಂದ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ ನಡೆಸುವ ನ್ಯಾಷನಲ್ ಮೀನ್ಸ್-ಕಮ್-ಮೆರಿಟ್ ಸ್ಕಾಲರ್‌ಶಿಪ್ (ಎನ್‌ಎಂಎಂಎಸ್)ಪರೀಕ್ಷೆಯಲ್ಲಿ ಹುಣಸೂರಿನ ಸರಕಾರಿ ಆದರ್ಶ ವಿದ್ಯಾಲಯದ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ತೋರಿದ್ದಾರೆ. ತಾಲೂಕಿನ 24 ವಿದ್ಯಾರ್ಥಿಗಳು ಆಯ್ಕೆಯಾಗಿದ್ದು, ಈ ಪೈಕಿ 20 ಮಂದಿ ಆದರ್ಶ ವಿದ್ಯಾಲಯದ ವಿದ್ಯಾರ್ಥಿಗಳು ಎಂಬುದು ವಿಶೇಷ. ಎಂ.ದೀಕ್ಷಿತಾ, ಎಚ್.ಜಿ.ಹಂಶಿತ್, ಎಸ್.ಇಂಚರ, ಜೀವಿತಾ, ಲೇಖನ, ಮೊಹಮ್ಮದ್ ಜಾವದ್, ರಿಶಿತಾ, ಎಚ್.ಪಿ.ಚೇತನ್ ಗೌಡ, ಎಚ್.ಎಸ್.ಚಿನ್ಮಯಿ, ಎಚ್.ನಮ್ರತಾ, ಎನ್.ಜಿ.ಪ್ರಜ್ಞಾ, ಎಂ.ಪ್ರಾರ್ಥನಾ, ಆರ್.ಎನ್.ಪುನೀತ್,ಡಿ.ಎಚ್.ರಮ್ಯಶ್ರೀ, ಸಂಕೇತ್, ಸಂತೋಷ್ ಜಂಗಮಶೆಟ್ಟಿ, ಎಸ್.ಎಸ್.ಸೌಜನ್ಯ, ಉಮ್ಮೆರ‍್ಯೈನ, ವಿಂದ್ಯಾ, ವಿನುಶ್ರೀ, ಸಿ.ಎಂ.ಯಕ್ಷಿತ್ ಆಯ್ಕೆಯಾದವರು. ವಿದ್ಯಾರ್ಥಿಗಳೂ ಉತ್ತಮವಾಗಿ ಪರೀಕ್ಷೆ ಬರೆಯುವ ಮೂಲಕ ಎನ್‌ಎಂಎಂಎಸ್ ವಿದ್ಯಾರ್ಥಿವೇತನಕ್ಕೆ ಆಯ್ಕೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ವಿದ್ಯಾಲಯದ ಮುಖ್ಯಶಿಕ್ಷಕ ಚಂದ್ರಕುಮಾರ್ ಹರ್ಷ ವ್ಯಕ್ತಪಡಿಸಿದ್ದಾರೆ.

ಎಸ್ಸಿ ಜಾತಿ ಗಣತಿಗೆ ಶಾಸಕರಿಂದ ಚಾಲನೆ

ಚಾಮರಾಜನಗರ: ರಾಜ್ಯ ಸರಕಾರ ಇಂದಿನಿಂದ ಆರಂಭಿಸಿರುವ ಒಳ ಮೀಸಲು ಜಾತಿ ಗಣತಿಗೆ ಎಂಎಸ್‌ಐಎಲ್ ಅಧ್ಯಕ್ಷರು, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು. ಮಾದಾಪುರ ಗ್ರಾಮದಲ್ಲಿ ಜಾತಿ ಗಣತಿ ಸಮೀಕ್ಷೆಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ಪರಿಶಿಷ್ಟ ಜಾತಿಗಳ ದತ್ತಾಂಶ ಸಂಗ್ರಹ ಸಮೀಕ್ಷೆ ಮೇ 5 ರಿಂದ 17ರವರೆಗೆ ನಡೆಯಲಿದೆ. ಮನೆ ಮನೆ ಭೇಟಿಗೆ ತೆರಳಲಿರುವ ಸಮೀಕ್ಷಾ ತಂಡ ಮೇ 19ರಿಂದ 21ರವರೆಗೆ ವಿಶೇಷ ಶಿಬಿರ ಹಮ್ಮಿಕೊಂಡು ಸಮೀಕ್ಷೆ ಅವಧಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿ ಸಂಗ್ರಹಿಸುತ್ತದೆ. ಗಣತಿದಾರರು ಸಮೀಕ್ಷೆಯನ್ನು ಸಮರ್ಪಕವಾಗಿ ಮಾಡಬೇಕು. ಸಮುದಾಯದವರು ಕಡ್ಡಾಯ ತಮ್ಮತಮ್ಮ ಜಾತಿಗಳನ್ನು ಸರಿಯಾಗಿ ಬರೆಸುವ ಮೂಲಕ ತಮಗೆ ಸಿಗುವ ಮೀಸಲಾತಿ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದರು. ತಹಸೀಲ್ದಾರ್ ಗಿರಿಜಾ, ತಾ.ಪಂ.ಇಒ ಶ್ರೀಕಂಠರಾಜೇ ಅರಸು, ತಾಲೂಕು ಸಮಾಜ ಇಲಾಖೆ ಸಹಾಯಕ ನಿರ್ದೇಶಕ ನಂಜುಂಡೇಗೌಡ ಇತರರು ಭಾಗವಹಿಸಿದ್ದರು.

ಬುದ್ಧನ ಚಿತ್ರ ಬಿಡಿಸುವ ಜಿಲ್ಲಾ ಮಟ್ಟದ ಸ್ಪರ್ಧೆ

ಮಂಡ್ಯ: ಭಾರತೀಯ ಬೌದ್ಧ ಮಹಾಸಭಾದ ವತಿಯಿಂದ ಬುದ್ಧ ಜಯಂತಿಗೆ ಮಕ್ಕಳಿಗಾಗಿ ಬುದ್ಧರ ಚಿತ್ರ ಬಿಡಿಸುವ ಜಿಲ್ಲಾ ಮಟ್ಟದ ಸ್ಪರ್ಧೆಯನ್ನು ಮೇ 10ರಂದು ಬೆಳಿಗ್ಗೆ 11ರಿಂದ 1ವರೆಗೆ ನಗರದ ಬಾಲಭವನದಲ್ಲಿ ಆಯೋಜಿಸಲಾಗಿದೆ ಎಂದು ಮಹಾಸಭಾದ ರಾಜ್ಯ ಉಪಾಧ್ಯಕ್ಷ ಎಂ.ಸಿ.ಶಿವರಾಜ್ ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 1ನೇ ತರಗತಿಯಿಂದ 4ನೇ ತರಗತಿ, 5ರಿಂದ 7ನೇ ತರಗತಿ, 8ರಿಂದ 10ನೇ ತರಗತಿ ಮೂರು ವಿಭಾಗಗಳಲ್ಲಿ ನಡೆಯಲಿದೆ. ಚಿತ್ರ ಬಿಡಸಲು ಡ್ರಾಯಿಂಗ್ ಹಾಳೆ ಒದಗಿಸಲಾಗುವುದು, ಇತರೆ ಪರಿಕರ ಮಕ್ಕಳೇ ತರತಕ್ಕದ್ದು ಎಂದು ಹೇಳಿದರು.ಮಾಹಿತಿಗಾಗಿ ಜಿಲ್ಲಾಧ್ಯಕ್ಷ ವೆಂಕಟೇಶ್- 9448755132 ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ಗೋಷ್ಠಿಯಲ್ಲಿ ಜಿಲ್ಲಾ ಉಪಾಧ್ಯಕ್ಷ ಅನಿಲ್‌ಕುಮಾರ್, ಟಿ.ಡಿ.ನಾಗರಾಜ್, ಎಸ್.ಪಿ.ನಾರಾಯಣಸ್ವಾಮಿ, ಗುರುಮೂರ್ತಿ ಇದ್ದರು.

ಉಚಿತ ಕಣ್ಣಿನ ತಪಾಸಣಾ ಶಿಬಿರ

ಮದ್ದೂರು: ಗ್ರಾಮೀಣ ಪ್ರದೇಶದ ಜನರಿಗೆ ಅನುಕೂಲವಾಗಲೆಂಬ ಉದ್ದೇಶದಿಂದ ಹೋಬಳಿ/ತಾಲೂಕು ಕೇಂದ್ರಗಳಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರಗಳನ್ನು ಆಯೋಜಿಸುತ್ತಿದ್ದು ಇದರ ಸದ್ಬಳಕೆಗೆ ಪ್ರತಿಯೊಬ್ಬರೂ ಮುಂದಾಗಬೇಕೆಂದು ಸುಮುಖ ನಿಧಿ ಲಿಮಿಟೆಡ್‌ನ ಅಧ್ಯಕ್ಷ ಕುಂದನಕುಪ್ಪೆ ಕುಮಾರ್ ತಿಳಿಸಿದರು.ಕೆಸ್ತೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದ ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ಸಂಘ ಸಂಸ್ಥೆಗಳು ತಮ್ಮ ಗ್ರಾಮಗಳಲ್ಲಿ ಆಯೋಜಿಸುವ ಇಂತಹ ಶಿಬಿರಗಳ ಸದುಪಯೋಗಕ್ಕೆ ಮುಂದಾಗಬೇಕೆಂದರು.ಕೆಸ್ತೂರು ಠಾಣೆ ಪಿ.ಎಸ್.ಐ. ನರೇಶ್‌ಕುಮಾರ್, ಸುಮುಖ ನಿಧಿ ಸೇವಾ ಟ್ರಸ್ಟ್‌ನ ನಿರ್ದೇಶಕ ಮಹೇಶ್, ಸಿದ್ದರಾಜು, ಸತೀಶ್, ಕೃಷ್ಣೇಗೌಡ, ಅಶೋಕ್, ರಾಜೇಂದ್ರ, ಭಾಗ್ಯಮ್ಮ, ಜಗದೀಶ್, ಪುಟ್ಟಸ್ವಾಮಿ, ವೈದ್ಯರಾದ ಮಾಳವಿಕ, ಹರೀಶ್ ಇದ್ದರು.

{ ನಳಿನ್‌ಕುಮಾರ್ ಕಟೀಲು } ಮಾಜಿ ಸಂಸದ

ಹಿಂದೂ ಸಮಾಜದ ಪರ ಇರುವ ಎಲ್ಲರ ಮೇಲೆ ದಾಳಿ ನಡೆಯುತ್ತಿದೆ. ಸಿದ್ದರಾಮಯ್ಯ, ಡಿಕೆಶಿ ವಿರುದ್ಧ ಬರೆದರೆ ಬಂಧಿಸುತ್ತಾರೆ. ಸಾಮಾಜಿಕ ಕಾರ್ಯಕರ್ತರ ವಿರುದ್ಧವೂ ಕೇಸ್ ದಾಖಲಿಸುತ್ತಾರೆ. ಆದರೆ ಗೃಹಸಚಿವ ಪರಮೇಶ್ವರ್ ಅವರಿಗೆ ಧಮ್ಕಿ ಹಾಕಿದ ಮುಸ್ಲಿಂ ಮುಖಂಡರನ್ನು ಬಂಧಿಸಲು ಸರಕಾರಕ್ಕೆ ತಾಕತ್ತಿಲ್ಲ.

ಕಾವೇರಿಯಿಂದ ರಾಮನಗರ ಜಿಲ್ಲೆಗೆ ನೀರು | ಡಿಸಿಎಂ ಡಿಕೆಶಿ ಭೂಮಿ ಪೂಜೆ

ಜಿಲ್ಲೆಗೆ ಶಾಶ್ವತ ಕುಡಿವ ನೀರು

ಮಳವಳ್ಳಿ: ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಬೆಳಕವಾಡಿ ಸಮೀಪದ ಸತ್ತೇಗಾಲದ ಕಾವೇರಿ ನದಿ ಅಣೆಕಟ್ಟಿನಿಂದ ರಾಮನಗರ ಜಿಲ್ಲೆಯ ನಾನಾ ಕಡೆಗೆ ಶಾಶ್ವತ ಕುಡಿಯುವ ನೀರು ಪೂರೈಕೆ ಯೋಜನೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೋಮವಾರ ಗುದ್ದಲಿ ಪೂಜೆ ನೆರವೇರಿಸಿದರು.

ಬಳಿಕ ಸ್ಥಳ ಪರೀಶಿಲನೆ ನಡೆಸಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳವಳ್ಳಿಯ ಸತ್ತೇಗಾಲದಿಂದ ರಾಮನಗರ ಜಿಲ್ಲೆಗೆ ನೀರು ತೆಗೆದುಕೊಂಡು ಹೋಗುವ ಕಾರ್ಯಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದೇನೆ. ಯೋಜನೆ ವಿಳಂಬವಾಗುತ್ತಿತ್ತು. ಅದಕ್ಕೆ ಖುದ್ದು ನಾನೇ ಆಗಮಿಸಿ, ಸ್ಥಳ ಪರಿಶೀಲನೆ ನಡೆಸಿದ್ದು, ಯೋಜನೆ ಶೀಘ್ರ ಆರಂಭವಾಗಲಿದೆ ಎಂದರು.

ನೀರು ಲಿಫ್ಟ್ ಮಾಡುವ ಜಾಗದಲ್ಲಿ ರೈತರ ಜಾಗದ ಸಮಸ್ಯೆ ಇತ್ತು ಅದು ಈಗ ಬಗೆ ಹರಿದಿದೆ. ರೈತರಿಗೆ ಸೂಕ್ತ ಪರಿಹಾರ ನೀಡಲು ಸೂಚನೆ ನೀಡಿದ್ದೇನೆ. ಸುಮಾರು 26 ಕಿಮೀ ಸ್ವಾಭಾವಿಕವಾಗಿ ನೀರು ಹರಿಯಲಿದೆ. ಸತ್ತೇಗಾಲದಿಂದ ಚನ್ನಪಟ್ಟಣದ ಇಗ್ಗಲೂರು ಡ್ಯಾಂವರೆಗೆ ಈ ನೀರನ್ನ ತೆಗೆದುಕೊಂಡು ಹೋಗಲಾಗುತ್ತದೆ. ಸುಮಾರು 12 ಕಿಮೀ ಟನಲ್ ಕೊರೆಯಲಾಗಿದೆ. ಟನಲ್ ಕೆಲಸ ಬಹುತೇಕ ಮುಗಿದಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಂಸದ ಡಿ.ಕೆ. ಸುರೇಶ್, ಶಾಸಕರಾದ ಸಿ.ಪಿ.ಯೋಗೇಶ್ವರ್, ಕೆ.ಎಂ.ಉದಯ್, ವಿಧಾನ ಪರಿಷತ್ ಸದಸ್ಯರಾದ ಎಸ್.ರವಿ, ಸುಧಾಮ್ ದಾಸ್, ಮಾಜಿ ಶಾಸಕ ಅಶ್ವಥ್, ಜಿಲ್ಲಾಧಿಕಾರಿ ಡಾ.ಕುಮಾರ ಉಪಸ್ಥಿತರಿದ್ದರು.

ಮಳವಳ್ಳಿ ತಾಲೂಕಿನ ಬೆಳಕವಾಡಿ ಸಮೀಪ ಶಾಶ್ವತ ಕುಡಿಯುವ ನೀರು ಪೂರೈಕೆ ಯೋಜನೆಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗುದ್ದಲಿ ಪೂಜೆ ನೆರವೇರಿಸಿದರು.

543 ಕೋಟಿ ವೆಚ್ಚದಲ್ಲಿ 3 ತಾಲೂಕುಗಳಿಗೆ ನೀರು

ಈ ಯೋಜನೆಯಿಂದ ಚನ್ನಪಟ್ಟಣ, ರಾಮನಗರ, ಮಾಗಡಿ ತಾಲೂಕುಗಳಿಗೆ ಕುಡಿಯುವ ನೀರು ಸಿಗಲಿದೆ. 543 ಕೋಟಿ ರೂ. ವೆಚ್ಚದಲ್ಲಿ ಯೋಜನೆ ಮಾಡಲಾಗಿದೆ. ಈ ಯೋಜನೆ ರಾಜ್ಯಕ್ಕೆ ಮಾದರಿಯಾಗಲಿದ್ದು, ಸುಮಾರು 3.3 ಟಿಎಂಸಿ ನೀರು ಕುಡಿ ಯುವ ಬಳಕೆಗೆ ಸಿಗಲಿದೆ. ಇಗ್ಗಲೂರು ಡ್ಯಾಂನಿಂದ ಮಂಚಿನಬೆಲೆ ಡ್ಯಾಂ, ಕಣ್ವ ಡ್ಯಾಂಗೆ ಈ ನೀರನ್ನ ಪಂಪ್ ಮಾಡಲಿದ್ದೇವೆ ಎಂದ ಅವರು, ಚನ್ನಪಟ್ಟಣ ಉಪಚುನಾವಣೆ ಸಮಯದಲ್ಲಿ ಸಿ.ಪಿ.ಯೋಗೇಶ್ವರ್ ಈ ಯೋಜನೆ ಬಗ್ಗೆ ಜನರಿಗೆ ಮಾತು ಕೊಟ್ಟಿದ್ದರು. ಆದಷ್ಟು ಬೇಗ ಈ ಕಾಮಗಾರಿ ಮುಗಿದು ಲೋಕಾರ್ಪಣೆಗೊಳ್ಳಲಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಮಕ್ಕಳ ಸೃಜನಶೀಲ ಪ್ರತಿಭೆ ಬೆಳಗುವ ಬೇಸಿಗೆ ಶಿಬಿರ

ಕೆ ಆರ್ ಪೇಟೆ: ಬೇಸಿಗೆ ಶಿಬಿರಗಳು ಮಕ್ಕಳಲ್ಲಿರುವ ಸುಪ್ತ ಪ್ರತಿಭೆಗಳು ಹೊರ ಹೊಮ್ಮಲು ನೆರವಾಗುತ್ತವೆ ಎಂದು ಬಳ್ಳೇಕೆರೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರವೀಣ್ ಅಭಿಪ್ರಾಯಪಟ್ಟರು.

ಅವರು ಬಳ್ಳೇಕೆರೆ ಗ್ರಾಮ ಪಂಚಾಯಿತಿ ಗ್ರಂಥಾಲಯ ಅರಿವು ಕೇಂದ್ರದ ಆವರಣದಲ್ಲಿ ಏರ್ಪಡಿಸಿದ್ದ ಬೇಸಿಗೆ ಶಿಬಿರವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.ಸಾಮಾನ್ಯವಾಗಿ ಹಿಂದಿನ ಕಾಲದಲ್ಲಿ ಮಕ್ಕಳು ಬೇಸಿಗೆ ರಜೆಯ ಸಮಯದಲ್ಲಿ ತಾತ,ಅಜ್ಜಿ ಮನೆಗೆ ಹೋಗಿ ಕಾಲ ಕಳೆಯುತ್ತಿದ್ದರು.

ಈ ಹಿಂದೆ ನಮಗೆ ಶಾಲೆಗೆ ಬೇಸಿಗೆ ರಜೆ ಬಂತೆಂದರೆ ಸಾಕು. ಅಜ್ಜಿ ತಾತನ ಮನೆಗೆ ಹೋಗಿ ಗ್ರಾಮದ ಹಬ್ಬ ರಂಗದ ಹಬ್ಬ, ಗೋಲಿ,ಆಟ,ಮರ ಕೋತಿ ಆಟ, ಬುಗುರಿ ಆಟ,ಲಗೋರಿ ಹೀಗೆ ಹತ್ತಾರು ಆಟಗಳನ್ನು ಆಡುವ ಮೂಲಕ ಬೇಸಿಗೆ ರಜೆಯನ್ನು ಕಳೆಯುತ್ತಿದ್ದವು.ಈಗ ಇವೆಲ್ಲವೂ ಕಣ್ಮರೆಯಾಗಿ ಮೊಬೈಲ್ ಗೇಮ್,ರಮ್ಮಿ ಈಗಿನ ಮಕ್ಕಳು ಜಾಗೃತಿ ಮೂಡಿಸಬೇಕು ಎಂದು ಶಿಬಿರದ ಮೇಲ್ವಿಚಾರಕರು, ಉಸ್ತುವಾರಿ ವಹಿಸಿರುವ ಶಿಕ್ಷಕರಿಗೆ ಸಲಹೆ ನೀಡಿದರು. ಶಿಬಿರದಲ್ಲಿ ಗಂಡುಮಕ್ಕಳು 27,ಹೆಣ್ಣು ಮಕ್ಕಳು18 ಒಟ್ಟು 45 ಮಕ್ಕಳು ಸಂತೋಷದಿಂದ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಪ್ರೌಢಶಾಲಾ ಮುಖ್ಯ ಶಿಕ್ಷಕರಾದ ಬಿ ಆರ್ ವೆಂಕಟೇಶ್, ಗ್ರಾಮ ಪಂಚಾಯತಿ ಸದಸ್ಯ ಚಂದ್ರೇಗೌಡ, ಪ್ರದೀಪ್, ಗ್ರಂಥಾಲಯದ ಮೇಲ್ವಿಚಾರಕಿ ಪುಷ್ಪಾಪ್ರಭಾಕರ್ ಉಪಸ್ಥಿತರಿದ್ದರು.

ಅವಿಭಕ್ತ ಕುಟುಂಬಗಳು ಕಣ್ಮರೆಯಾಗುತ್ತಿವೆ ..!

ಇತ್ತೀಚಿನ ದಿನಗಳಲ್ಲಿ ಮಕ್ಕಳಿಗೆ ಸಂಬಂಧಗಳ ಬಗ್ಗೆ ಅರಿವು ಮೂಡಿಸುವ ಕೆಲಸಗಳು ಕ್ಷೀಣಿಸುತ್ತಿವೆ. ಈಗಿನ ಕಾಲದ ಮಕ್ಕಳಿಗೆ ಅಜ್ಜಿ ತಾತ, ಮಾವ, ಅತ್ತೆ, ಚಿಕ್ಕಮ್ಮ ಚಿಕ್ಕಮ್ಮ, ದೊಡ್ಡಮ್ಮ, ದೊಡ್ಡಪ್ಪ ಹೀಗೆ ಹಲವು ಸಂಬಂಧಗಳು ಗೊತ್ತಿರುವುದಿಲ್ಲ. ಕಾರಣ ಇತ್ತೀಚೆಗೆ ಸಾಮಾನ್ಯವಾಗಿ ಒಂದು ಅಥವಾ ಎರಡು ಮಕ್ಕಳಿಗೆ ಜನ್ಮ ನೀಡುತ್ತಿರುವುದು ಒಂದು ಕಾರಣ, ಇನ್ನೊಂದು ಅವಿಭಕ್ತ ಕುಟುಂಬ ಕಣ್ಮರೆಯಾಗುತ್ತಿರುವುದು ಕಾರಣ ಎಂದು ಪಿಡಿಒ ಪ್ರವೀಣ್ ವಿವರಿಸಿದರು.

ವಿದೇಶಗಳಲ್ಲಿ ಭಾರತ ವಿಜೃಂಭಿಸಲು ಸಂಸ್ಕೃತಿ ಕಾರಣ

ಮಡಿಕೇರಿಯಲ್ಲಿ ಚಂದ್ರಶೇಖರರಾವ್ ಸ್ಮಾರಕ ಟ್ರಸ್ಟ್‌ನಿಂದ ಕನ್ನಡ ಹಬ್ಬ ಆಚರಣೆ

ಮಡಿಕೇರಿ: ಸಾಹಿತ್ಯ ಮತ್ತು ಸಂಸ್ಕೃತಿ ಒಂದೇ ನಾಣ್ಯದ ಎರಡು ಮುಖಗಳು ಎಂದು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಜಿಲ್ಲಾಧ್ಯಕ್ಷ ಟಿ ಪಿ ರಮೇಶ್ ಹೇಳಿದ್ದಾರೆ.

ನಗರದ ರೆಡ್ ಬ್ರಿಕ್ಸ್ ಸಭಾಂಗಣದಲ್ಲಿ ನಡೆದ ಸಮರ್ಥ ಕನ್ನಡಿಗರು ಕೊಡಗು ಮತ್ತು ದಿ.ಚಂದ್ರಶೇಖರ ರಾವ್ ಮೆಮೋರಿಯಲ್ ಟ್ರಸ್ಟ್ ಜಂಟಿಯಾಗಿ ಆಯೋಜಿಸಿದ ಕನ್ನಡ ಹಬ್ಬ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವದ ನಾನಾ ದೇಶಗಳಲ್ಲಿ ಭಾರತ ವಿಜೃಂಭಿಸಲು ಪ್ರಮುಖ ಕಾರಣವೇ ನಮ್ಮ ಸಂಸ್ಕೃತಿ. ಸಂಸ್ಕೃತಿಯ ವಿಕಾಸದಲ್ಲಿ ಭಾಷೆ ಬಹು ದೊಡ್ಡ ಹೆಜ್ಜೆ. ನಮ್ಮ ಭಾಷೆ ಸಂಸ್ಕೃತಿ ಬೆಳೆಯಲು ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದೂ ಅವರು ಹೇಳಿದರು.

ಎರಡು ಕೃತಿಗಳನ್ನು ಲೋಕಾರ್ಪಣೆ ಮಾಡಿದ ಮಡಿಕೇರಿ ಆಕಾಶವಾಣಿ ಹಿರಿಯ ಉದ್ಘೋಷಕ ಸುಬ್ರಾಯ ಸಂಪಾಜೆ ಮಾತನಾಡಿ, ಕೊಡಗು ಮತ್ತು ಮುಂಬಯಿ ನಡುವಿನ ಬಾಂಧವ್ಯ ಬಹಳ ಹಳೆಯದು. ಅದಕ್ಕೆ ಕನ್ನಡದ ಮೊದಲ ಗ್ರಂಥ ಕವಿರಾಜಮಾರ್ಗದಲ್ಲೇ ಆಧಾರ ಇದೆ. ದೇಶಸೇವೆ, ಸೈನಿಕ ಸೇವೆಯ ಜೊತೆಗೆ ಸಾಹಿತ್ಯ ರಂಗದಲ್ಲೂ ಕೊಡಗು ಉತ್ತಮ ಸಾಧನೆ ತೋರುತ್ತಿದೆ ಎಂದೂ ಶ್ಲಾಘಿಸಿದರು. ಹಿರಿಯ ಲೇಖಕ ಕಿಗ್ಗಾಲು ಗಿರೀಶ್ ಅವರ ಕೆಲವು ರಚನೆಗಳನ್ನು ಸುಬ್ರಾಯ ಸಂಪಾಜೆ ಗಮಕ ರೂಪದಲ್ಲಿ ಹಾಡಿದರು.

ಕೊಡಗು ಪತ್ರಕರ್ತರ ಸಂಘದ ಅಧ್ಯಕ್ಷ ಅನಿಲ್ ಎಚ್.ಟಿ ಮಾತನಾಡಿ, ಕನ್ನಡಿಗರು ದೇಶದ ಯಾವುದೇ ಭಾಗದಲ್ಲಿದ್ದರೂ ಕನ್ನಡ ಭಾಷೆಗೆ ಅವರೆಲ್ಲರ ಬಾಂಧವ್ಯ ಬೆಸೆಯುವ ಶಕ್ತಿಯಿದೆ. ಭಾಷೆ ಎಂಬುದು ಭಾವನೆಗಳನ್ನು ಬೆಸೆಯುವ ಕೊಂಡಿಯಂ ತಿದೆ. ಮುಂಬೈನ ಕನ್ನಡ ಪರ ಸಂಸ್ಥೆಯೊಂದು ದೂರದ ಮಡಿಕೇರಿಯಲ್ಲಿ ಕನ್ನಡ ಹಬ್ಬಕ್ಕೆ ಸಹಯೋಗ ನೀಡಿರುವುದೇ ಈ ಬೆಸುಗೆಗೆ ಸಾಕ್ಷಿಯಾಗಿದೆ ಎಂದು ಶ್ಲಾಘಿಸಿದರು. ಮೂಲತಃ ಮಡಿಕೇರಿಯವರಾದ ಶ್ರೀದೇವಿ ಸಿ. ರಾವ್ ಅವರು ತನ್ನ ಪತಿ ದಿ.ಚಂದ್ರಶೇಖರ ರಾವ್ ಹೆಸರಲ್ಲಿ ಟ್ರಸ್ಟ್ ಪ್ರಾರಂಭಿಸಿ ಆ ಮೂಲಕ ಮುಂಬೈನಲ್ಲಿ ಸಾಹಿತ್ಯಾಸಕ್ತರೊಂ ದಿಗೆ ನಾನಾ ಕನ್ನಡ ಪರ ಕಾರ್ಯಕ್ರಮ ನಡೆಸುವುದು ಕೊಡಗಿಗೇ ಹೆಮ್ಮೆ ಎಂದೂ ಅನಿಲ್ ಹೇಳಿದರು.

ಮುಂಬೈ ಸಾಹಿತಿ ಗೋಪಾಲ ತ್ರಾಸಿ ಮಾತನಾಡಿ, ತಮ್ಮ ನುಡಿ ತೇರು ಕೃತಿ ಕೊಡಗಿನ ನೆಲದಲ್ಲಿ ಲೋಕಾರ್ಪಣೆಗೊಳ್ಳುತ್ತಿರುವ ಬಗ್ಗೆ ಸಂತೋಷವಾಗುತ್ತಿದೆ ಎಂದರು.

ಟ್ರಸ್ಟ್‌ನ ಮುಖ್ಯಸ್ಥೆ ಶ್ರೀದೇವಿ ಸಿ.ರಾವ್ ಮಾತನಾಡಿ, ಕನ್ನಡ ಸಾಹಿತ್ಯ ಸೇವೆಗೆ ತಮ್ಮ ಕೈಲಾದ ಸೇವೆಯನ್ನು ತನ್ನ ದಿವಂಗತ ಪತಿ ಚಂದ್ರಶೇಖರ ರಾವ್ ಸ್ಮರಣಾರ್ಥ ಕೈಗೊಳ್ಳುವುದಾಗಿ ಹೇಳಿದರು. ಹರಟೆ ಕೃತಿಯ ಬಗ್ಗೆ ಲೇಖಕಿ ಡಾ. ಕುಸುಮ ಮಾತನಾಡಿದರು.

ಮಡಿಕೇರಿಯ ಮುನೀರ್ ಅಹಮ್ಮದ್ ಅವರಿಗೆ ಸಮರ್ಥ ಕನ್ನಡಿಗರು ಸಂಸ್ಥೆ ವಾಗ್ಭೂಷಣ ಪುರಸ್ಕಾರ ನೀಡಿ ಗೌರವಿಸಲಾಯಿತು. ಸಮಾಜ ಸೇವೆಗಾಗಿ ಪುಷ್ಪಾ ಕೃಷ್ಣಾನಂದ ಶೇಟ್ ಅವರಿಗೆ ಸಮಾಜ ಸೇವಾ ರತ್ನ , ಸಾಹಿತ್ಯ ಮತ್ತು ರಂಗಭೂಮಿ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿದ ಗೋಪಾಲ ತ್ರಾಸಿಯವರಿಗೆ ಕನ್ನಡ ಕಲಾ ರತ್ನ , ಶಿಕ್ಷಣ ಮತ್ತು ಸಮಾಜಸೇವೆಗಾಗಿ ಶ್ರೀದೇವಿ ಸಿ ರಾವ್ ಅವರಿಗೆ ಸಮಾಜ ಸೇವಾ ರತ್ನ, ಸಾಹಿತ್ಯ ಕ್ಷೇತ್ರದ ಸಾಧನೆಗಾಗಿ ಡಾ. ಕುಸುಮಾ ಅವರಿಗೆ ಕನ್ನಡ ರತ್ನ , ಚಿತ್ರಕಲೆಯಲ್ಲಿ ಸಾತ್ವಿಕ್ ಅಣ್ವೇಕರ್‌ಗೆ 'ಉದಯ ರವಿ' ಪುರಸ್ಕಾರ ನೀಡಲಾಯಿತು. ಚಂದ್ರಶೇಖರ ರಾವ್ ಮೆಮೋರಿಯಲ್ ಟ್ರಸ್ಟ್ ವತಿಯಿಂದ ಬಡಮಕ್ಕಳಿಗೆ ವಿದ್ಯಾರ್ಥಿವೇತನ ವಿತರಿಸಲಾಯಿತು.

ಮುಂಬೈ ಸಾಹಿತಿ ಗೋಪಾಲ ತ್ರಾಸಿ ಅವರ ನುಡಿ ತೇರು ಕೃತಿ ಬಿಡುಗಡೆ ಕಾರ್ಯಕ್ರಮ ನಡೆಯಿತು.

ರೈತರಿಗೆ ಸವಲತ್ತು ಒದಗಿಸಿ

ಮೈಸೂರು: ಮೈಸೂರು ಜಿಲ್ಲೆಯಲ್ಲಿ ರೈತರಿಗೆ ಎಲ್ಲಾ ರೀತಿಯಲ್ಲೂ ಸರಕಾರದ ವತಿಯಿಂದ ನೀಡಲಾಗುವ ಎಲ್ಲಾ ಸೌಲಭ್ಯಗಳನ್ನು ಅವರಿಗೆ ಮತ್ತು ಅವರ ಕುಟುಂಬದವರಿಗೆ ಕಡ್ಡಾಯವಾಗಿ ಒದಗಿಸುವಂತೆ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

ಜಿಲ್ಲೆಯ ರೈತರ ಆತ್ಮಹತ್ಯೆ ಪ್ರಕರಣಗಳಿಗೆ ಸಂಬಂಧಿಸಿ ನೀಡುವ ಪರಿಹಾರಗಳ ಮೇಲ್ವಿಚಾರಣೆ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ರೈತರಿಗೆ ಮತ್ತು ಅವರ ಕುಟುಂಬದವರಿಗೆ ಯಾವುದೇ ರೀತಿ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ರೈತರ ಮಕ್ಕಳಿಗೆ ಶಿಕ್ಷಣ ಒದಗಿಸುವಲ್ಲಿ ಸಹಕಾರ ನೀಡಬೇಕು. ಅಲ್ಲದೆ ಆಕಸ್ಮಿಕ ಬಣವೆ ನಷ್ಟ, ಹಾವು ಕಡಿತದ ಪ್ರಕರಣಗಳು ಇತ್ಯಾದಿ ಪ್ರಕರಣಗಳಲ್ಲಿಯೂ ರೈತರಿಗೆ ಸಹಾಯ ನೀಡಬೇಕು. ಯಾವುದೇ ಕಾರಣಕ್ಕೂ ವಿಳಂಬ ಮಾಡಬಾರದೆಂದು ಸೂಕ್ತ ನಿರ್ದೇಶನ ನೀಡಿದರು.

ಮೈಸೂರು ಜಿಲ್ಲೆಯನ್ನು ಮಾದರಿ ಜಿಲ್ಲೆಯಾಗಿಸಲು ಎಲ್ಲ ಅಧಿಕಾರಿಗಳು ಶ್ರಮಿಸಬೇಕೆಂದು ತಿಳಿಸಿದರು. ಸಭೆಯಲ್ಲಿ ಕೃಷಿ, ಪೊಲೀಸ್, ಕಂದಾಯ, ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಮೇಲ್ವಿಚಾರಣೆ ಸಭೆಯಲ್ಲಿ ಮಾತನಾಡಿದರು.



ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಮಾತನಾಡಿದರು.

ಸಮಾನ ಮನಸ್ಥಿತಿ ಅಗತ್ಯ

ಶೀ ಬಿಳಿಗಿರಿ ರಂಗನಾಥಸ್ವಾಮಿ ಟ್ರಸ್ಟ್ ಉದ್ಘಾಟನೆ ನಡೆಯಿತು.

ಚಾಮರಾಜನಗರ: ಸನಾತನ ಪರಂಪರೆ ನಮ್ಮದಾಗಿಸಿಕೊಳ್ಳಬೇಕು. ಒಗ್ಗೂಡಿದರೆ ಎಲ್ಲ ಕೆಲಸಗಳು ಯಶಸ್ವಿಯಾಗುತ್ತದೆ. ಸಮಾನ ಮನಸ್ಥಿತಿ ಇದ್ದಾಗ ಯಾವುದೇ ಸಂಘ, ಸಂಸ್ಥೆ, ಟ್ರಸ್ಟ್ ಯಶಸ್ವಿಯಾಗುತ್ತದೆ ಎಂದು ಶ್ರೀ ರಾಮಶೇಷ ಪಾಠಶಾಲೆಯ ಪ್ರಾಂಶುಪಾಲ ಪದೀಪ್ ಕುಮಾರ್ ದೀಕ್ಷಿತ್ ಹೇಳಿದರು.

ನಗರದ ಖಾಸಗಿ ಬಸ್ ನಿಲ್ದಾಣದ ಎಲ್‌ಐಸಿ ಕಚೇರಿ ರಸ್ತೆಯಲ್ಲಿರುವ ಮಳಿಗೆಯಲ್ಲಿ ನಡೆದ ಶೀ ಬಿಳಿಗಿರಿ ರಂಗನಾಥಸ್ವಾಮಿ ಟ್ರಸ್ಟ್ ಉದ್ಘಾಟನಾ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ. ಉದ್ಘಾಟಿಸಿ ಮಾತನಾಡಿ, ಬಿಳಿಗಿರಿ ರಂಗನಾಥಸ್ವಾಮಿ ಟ್ರಸ್ಟ್ ನಿರಂತರವಾಗಿ ಸೇವಾ ಕಾರ್ಯ ಮಾಡುವಂತಾಗಲಿ ಎಂದರು. ನಗರಸಭೆ ಸಮುದಾಯ ಅಧಿಕಾರಿ ವೆಂಕಟನಾಯಕ ಮಾತನಾಡಿ, ರಂಗನಾಥಸ್ವಾಮಿ ಟ್ರಸ್ಟ್‌ಗೆ ನಗರಸಭೆ ವತಿಯಿಂದ ಸಿಗವ ಎಲ್ಲ ರೀತಿ ಸೌಕರ್ಯಗಳನ್ನು ಕೊಡಿಸುವುದಾಗಿ ತಿಳಿಸಿದರು. ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಆರ್.ಸುಂದರ್ ಮಾತನಾಡಿ, ಪ್ರತಿವರ್ಷ ವೂ ಬಿಳಿಗಿರಿರಂಗನ ಬೆಟ್ಟದಲ್ಲಿ ಬಿಳಿಗಿರಿರಂಗ ಸ್ವಾಮಿಗೆ ವಿಶೇಷಪೂಜೆ ಹರಿಸೇವೆ ಮಾಡವ ಜೊತೆಗೆ ನಾಯಕ ಸಮುದಾಯದ ಪ್ರತಿಭಾ ವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ತರಬೇತಿ ನೀಡಲು ಈ ಟ್ರಸ್ಟ್ ಸ್ಥಾಪಿಸಲಾಗಿದೆ ಎಂದರು. ಕೆಇಬಿ ನಿವೃತ್ತ ಹಿರಿಯ ಸಹಾಯಕ ನಾರಾಯಣಸ್ವಾಮಿ, ನಗರಸಭಾ ಮಾಜಿ ಸದಸ್ಯ ರಾಜೇಶ್ ನಾಯಕ, ಟ್ರಸ್ಟ್ ನಟರಾ ಜು ಮಾತನಾಡಿ ದರು. ಮುಖಂಡರಾದ ಬಂಗಾರನಾಯಕ, ಲೋಕೇಶ್, ನಟರಾಜು, ಗೋವಿಂದರಾಜ, ವೆಂಕಟೇಶ್ ನಾಯಕ, ಬಿಳಿಗಿರಿ, ಜಯಕುಮಾರ್, ಸುರೇಶ್, ರಾಘು, ಶಿವರಾಮ್, ರಾಧಾ, ದೀಪವೆಂಕಟೇಶ್ ಇದ್ದರು.

ಲೆದರ್ ಬಾಲ್ ಕ್ರಿಕೆಟ್: ಬಿಳಿಗಿರಿ ಕ್ಲಬ್ ಚಾಂಪಿಯನ್

ಮಡಿಕೇರಿ: ಕೊಡಗು ಗೌಡ ಯುವ ವೇದಿಕೆ ವತಿಯಿಂದ ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಗೌಡ ಜನಾಂಗದ ನಡುವಿನ 3ನೇ ಆವೃತ್ತಿಯ ಟಿ-20 ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿ (ಜಿಪಿಎಸ್) ಬಿಳಿಗಿರಿ ಪ್ಲಾಂಟರ್ಸ್ ಕ್ಲಬ್ ಚಾಂಪಿಯನ್ ಪಟ್ಟ ಅಲಂಕರಿಸಿದರೆ, ದಿ ಎಲೈಟ್ ಕ್ರಿಕೆಟ್ ಕ್ಲಬ್ ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದೆ.

ಪಂದ್ಯಾವಳಿಯಲ್ಲಿ 10 ಫ್ರಾಂಚೈಸಿ ತಂಡಗಳು ಭಾಗವಹಿಸಿದ್ದವು. ಈ ಪೈಕಿ ಬಿಳಿಗಿರಿ ಪ್ಲಾಂಟರ್ಸ್ ಕ್ಲಬ್ ಹಾಗೂ ದಿ ಎಲೈಟ್ ಕ್ಲಬ್ ಫೈನಲ್ ಪಂದ್ಯಾವಳಿಗೆ ಪ್ರವೇಶ ಪಡೆಯುವಲ್ಲಿ ಯಶಸ್ವಿಯಾಯಿತು.

ಅಂತಿಮ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ದಿ ಎಲೈಟ್ ಕ್ರಿಕೆಟ್ ಕ್ಲಬ್ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 142 ರನ್ ಕಲೆ ಹಾಕಿತು. ಆಟಗಾರ ಅಂಜನ್ 56 ಎಸೆತಗಳಲ್ಲಿ ಆಕರ್ಷಕ ಅರ್ಧ ಶತಕ ಸಿಡಿಸಿದರು. ಈ ಗುರಿಯನ್ನು ಬೆನ್ನತ್ತಿದ್ದ ಪ್ಲಾಂಟರ್ಸ್ ಕ್ಲಬ್ 17 ಓವರ್‌ಗೆ 4 ವಿಕೆಟ್‌ಗಳನ್ನು ಕಳೆದುಕೊಂಡು ಅಗತ್ಯ 143 ರನ್ ಕಲೆ ಹಾಕಿ ಚಾಂಪಿಯನ್ ಪಟ್ಟ ಮುಡಿಗೇರಿಸಿಕೊಂಡಿತು. ಪ್ಲಾಂಟರ್ಸ್ ಕ್ಲಬ್ ಪರ ಲೋಕೇಶ್ 21 ಬಾಲ್‌ಗಳಲ್ಲಿ 47 ರನ್ ಬಾರಿಸಿ ತಂಡದ ಗೆಲುವಿಗೆ ಪ್ರಮುಖ ಪಾತ್ರ ವಹಿಸಿದರು.

ಮಹಿಳಾ ಕ್ರಿಕೆಟ್: ಕೊಡಗು ಗೌಡ ಯುವ ವೇದಿಕೆ ಸಹಯೋಗದಲ್ಲಿ ಕೊಡಗು ಹಾಗೂ ದಕ್ಷಿಣ ಕನ್ನಡ ಒಕ್ಕಲಿಗ ಗೌಡ ಮಹಿಳಾ ಒಕ್ಕೂಟದ ವತಿಯಿಂದ ನಡೆದ ಗೌಡ ಮಹಿಳಾ ಕ್ರಿಕೆಟ್‌ನಲ್ಲಿ ದಿ ಎಲೈಟ್ ಕ್ರಿಕೆಟ್ ಕ್ಲಬ್ ಚಾಂಪಿಯನ್ ಆಗಿ ಹೊರಹೊಮ್ಮಿತು. ದಿ ಎಲೈಟ್ ಕ್ರಿಕೆಟ್ ಕ್ಲಬ್ ಹಾಗೂ ಈಗಲ್ಸ್ ರೈಡರ್ಸ್ ತಂಡಗಳು ಟ್ರೋಫಿಗಾಗಿ ಸೆಣಸಾಡಿದವು.

ಸಭಾ ಕಾರ್ಯಕ್ರಮದಲ್ಲಿ ಗಣ್ಯರು ಪಾಲ್ಗೊಂಡು ವಿಜೇತರಿಗೆ ಬಹುಮಾನ ವಿತರಿಸಿದರು. ವಿಧಾನಸಭಾ ಮಾಜಿ ಅಧ್ಯಕ್ಷ ಕೆ.ಜಿ.ಬೋಪಯ್ಯ ಮಾತನಾಡಿ, ಕೊಡಗು ಕ್ರೀಡಾಪಟುಗಳ ತವರೂರಾಗಿದ್ದು, ಇದಕ್ಕೆ ಪೂರಕವಾಗಿ ಕ್ರೀಡಾಕೂಟಗಳು ನಡೆಯುತ್ತಿರುವುದು ಇದಕ್ಕೆ ಸಾಕ್ಷಿ ಎಂದರು. ಅಂಧರ ಕ್ರಿಕೆಟ್ ತಂಡದ ಮಾಜಿ ನಾಯಕ ಪದ್ಮಶ್ರೀ ಶೇಖರ್ ನಾಯಕ್ ಮಾತನಾಡಿ, ಕ್ರೀಡೆ ದೇಶವನ್ನು ಒಗ್ಗಟ್ಟು ಮಾಡುತ್ತದೆ ಎಂದು ಅಭಿಪ್ರಾಯಿಸಿದರು. ಕೊಡಗು ಗೌಡ ಸಮಾಜಗಳ ಒಕ್ಕೂಟದ ಅಧ್ಯಕ್ಷ ಆನಂದ್ ಕರಂದ್ಲಾಜೆ,ಗೌಡ ಯುವೇದಿಕೆ ಅಧ್ಯಕ್ಷ ಪಾಣತ್ತಲೆ ಜಗದೀಶ್ , ಕೊಡಗು ಗೌಡ ವಿದ್ಯಾ ಸಂಘದ ಅಧ್ಯಕ್ಷ ಅಂಬೆಕಲ್ ನವೀನ್ ಕುಶಾಲಪ್ಪ, ಯುವ ವೇದಿಕೆ ಕ್ರೀಡಾ ಸಮಿತಿ ಸಂಚಾಲಕ ಕುಟ್ಟನ ಪ್ರಶಾಂತ್, ನಗರಸಭಾ ಸದಸ್ಯೆ ಶ್ವೇತಾ ಪ್ರಶಾಂತ್, ಮಹಿಳಾ ಒಕ್ಕೂಟದ ಅಧ್ಯಕ್ಷೆ ಮೂಟೇರ ಪುಷ್ಪಾವತಿ, ಸ್ಥಾಪಕ ಅಧ್ಯಕ್ಷೆ ಪುದಿಯನೆರವನ ರೇವತಿ ರಮೇಶ್, ದಾನಿಗಳಾದ ತೆಕ್ಕಡೆ ಪ್ರಜ್ವಲ್, ಹಿರಿಯರಾದ ತುಂತಜ್ಜಿರ ಗಣೇಶ್, ಅಂಬೆಕಲ್ ಕುಶಾಲಪ್ಪ, ಕುಶಾಲನಗರ ಗೌಡ ಯುವಕ ಸಂಘದ ಅಧ್ಯಕ್ಷ ಕೊಡಗನ ಹರ್ಷ ಇದ್ದರು.

ಬಿಳಿಗಿರಿ ಪ್ಲಾಂಟರ್ಸ್ ಕ್ಲಬ್ ಚಾಂಪಿಯನ್ ಪಟ್ಟ ಅಲಂಕರಿಸಿತು.

ಡಾ.ಅಂಬೇಡ್ಕರ್ ಇಡೀ ವಿಶ್ವಕ್ಕೆ ನಾಯಕರು

ಮಂಡ್ಯ: ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಭಾರತಕ್ಕೆ ಮಾತ್ರವಲ್ಲ, ಇಡೀ ವಿಶ್ವ ನಾಯಕರಾಗಿರುವ ಮಹಾ ಮಾನವ ತವಾದಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದರು.

ತಾಲೂಕಿನ ಕೆರಗೋಡು ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಗೆ ನಡೆದ ಕೆರಗೋಡು ಭೀಮೋತ್ಸವ ಕಾರ್ಯ ಕ್ರಮದಲ್ಲಿ ಮಾತನಾಡಿದರು. ಪ್ರಪಂಚದ 70ಕ್ಕೂ ಹೆಚ್ಚು ರಾಷ್ಟ್ರಗಳಲ್ಲಿ ಅಂಬೇಡ್ಕರ್ ಪುತ್ಥಳಿಗಳು, ಪ್ರತಿಮೆಗಳು ಇವೆ ಎಂದರೆ ಅವರ ಚಿಂತನೆ,ಸಾಧನೆ, ಕೊಡುಗೆಗಳು ಯಾವ ಮಟ್ಟದಲ್ಲಿವೆ ಎಂಬುವುದರ ಬಗ್ಗೆ ಆತ್ಮವಲೋಕನ ಮಾಡಬೇಕು ಎಂದು ಹೇಳಿದರು.

ಅಂಬೇಡ್ಕರ್ ಅವರು ಭಾರತ ದೇಶದಲ್ಲಿ ಹುಟ್ಟಲಿಲ್ಲ ಎಂದರೆ ಭಾರತ ದೇಶ ಬಡವಾಗುತ್ತಿತ್ತು. ಇಂತಹ ಭಾರತ ದೇಶದಲ್ಲಿ ಹುಟ್ಟಿರುವ ನಾವು ಭಾಗ್ಯಶಾಲಿಗಳು. ಅವರ ಆದರ್ಶ ಅಳವಡಿಸಿಕೊಂಡು ನಮ್ಮ ಮಕ್ಕಳಿಗೂ ತಿಳಿಸಬೇಕು ಎಂದು ಹೇಳಿದರು.

ದೇಶದ 140 ಕೋಟಿ ಜನರಿಗೂ ಇರುವ ಏಕೈಕ ಗ್ರಂಥ ಎಂದರೆ ಅದು ಸಂವಿಧಾನ. ಸಂವಿಧಾನದಿಂದ ಸಮಾನತೆಯ ಸಾರ್ಥಕತೆ ಕಂಡುಕೊಳ್ಳಬೇಕು ಹಾಗೂ ಸಮ ಸಮಾಜದ ಸಾರ್ಥಕತೆ ಕಂಡುಕೊಳ್ಳಬೇಕು ಎಂದು ಹೇಳಿದರು. ಶಾಸಕ ಪಿ.ರವಿಕುಮಾರ್ ಗಣಿಗ ಉದ್ಘಾಟಿಸಿ ಮಾತನಾಡಿ, ಸಂವಿಧಾನವನ್ನು ಕೋಮುವಾದಿಗಳು ಬದಲಾಯಿಸುವುದಕ್ಕಾಗಿ ಧರ್ಮ ಹಾಗೂ ಜಾತಿಗಳ ನಡುವೆ ವಿಷ ಬೀಜ ಬಿತ್ತುವ ಮೀರ್ ಸಾಧಿಕ್ ಕೆಲಸವನ್ನು ಮಾಡುತ್ತಿದ್ದಾರೆ, ಅಂತವರ ಬಗ್ಗೆ ಸಾರ್ವಜನಿಕರು ಹಾಗೂ ಯುವಕರು ಎಚ್ಚರ ವಹಿಸಬೇಕೆಂದು ತಿಳಿಸಿದರು.

ಕೆರಗೋಡಿನ ಅಂಬೇಡ್ಕರ್ ಭವನದ ಕಾಮಗಾರಿ ಸ್ಥಗಿತವಾಗಿದ್ದು, ಒಂದು ವರ್ಷ ದಲ್ಲಿ ಅಗತ್ಯ ಅನುದಾನ ಒದಗಿಸುತ್ತೇವೆ.ಅಲ್ಲದೇ ಪಂಚಲಿಂಗೇಶ್ವರ ದೇವಾಲಯದ ಅಭಿವೃದ್ಧಿಗೆ 5 ಕೋಟಿ ರೂ.ವೆಚ್ಚ ಮಾಡಿ, ಇಡೀ ರಾಜ್ಯವೇ ತಿರುಗಿ ನೋಡುವಂತೆ ಮಾಡಲಾಗು ವುದು ಎಂದರು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ದೀಪಕ್ ಮುಖ್ಯ ಭಾಷಣ ಮಾಡಿದರು. ಮೈಷುಗರ್ ಎಂ.ಡಿ. ಮಂಗಲ್ ದಾಸ್, ದಸಂಸ ಸಂಚಾಲಕ ಗುರುಪ್ರಸಾದ್, ಮಂಕುತಿಮ್ಮ ಟ್ರಸ್ಟ್ ಅಧ್ಯಕ್ಷ ವಿನಯ್ ಕುಮಾರ್, ಮುಖಂಡರಾದ ಮುದ್ದನಘಟ್ಟ ಮಹಾಲಿಂಗೇಗೌಡ, ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಕೆ.ನಾಗೇಶ್, ಸಾರಿಗೆ ಅಧಿಕಾರಿ ಎಸ್.ಪಿ.ನಾಗರಾಜು, ಮದನ್, ಪ್ರಸನ್ನ ಕುಮಾರ್, ವಸಂತರಾಜು, ಗ್ರಾಪಂ ಅಧ್ಯಕ್ಷ ನವೀನ್, ಶಾಂತಗಿರಿ ಇದ್ದರು.

ಕೆರಗೋಡು ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ವೈಯಕ್ತಿಕ ಹಣದಿಂದ ಒಕ್ಕಲಿಗರ ಭವನ

ಹುಣಸೂರು: ಇಲ್ಲಿ ಒಕ್ಕಲಿಗ ಸಮುದಾಯ ಭವನ ಅಥವಾ ಶೈಕ್ಷಣಿಕ ಕಟ್ಟಡ ನಿರ್ಮಾಣವಾಗಲಿ. ಅದಕ್ಕೆ ನನ್ನ ಸಹಕಾರವಿದೆ ಎಂದು ಶಾಸಕ ಜಿ.ಡಿ. ಹರೀಶ್ ಗೌಡ ತಿಳಿಸಿದರು.

ನಗರದ ನರಸಿಂಹಸ್ವಾಮಿ ತಿಟ್ಟಿನ ಎರಡು ಎಕರೆ ಖಾಲಿ ಜಾಗದಲ್ಲಿ ಶಾಲಾ, ಕಾಲೇಜು ನಿರ್ಮಿಸಿದರೆ ಒಂದಷ್ಟು ಗ್ರಾಮೀಣ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ. ಹುಣಸೂರು ತಾಲೂಕಿನಲ್ಲಿ ಅತೀ ಹೆಚ್ಚು ಜನಸಂಖ್ಯೆ ಇದ್ದರೂ ಒಂದು ಒಕ್ಕಲಿಗರ ಭವನ ಇಲ್ಲದಿರುವುದು ಬೇಸರದ ಸಂಗತಿ. ಆದ್ದರಿಂದ ವೈಯಕ್ತಿಕ ಹಣದಿಂದ ನಿವೇಶನ ಕೊಡಿಸಿ ಸಮುದಾಯ ಭವನ ನಿರ್ಮಿಸಿಕೊಡುವ ಜವಾಬ್ದಾರಿ ನನ್ನದು ಎಂದರು.

ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ, ಮಾಜಿ ಶಾಸಕರಾದ ಕರೀಯಪ್ಪಗೌಡರ ಪರಿಶ್ರಮದಿಂದ 1.5. ಎಕರೆ ಭೂಮಿ ಸರಕಾರದಿಂದ ಕೊಡಿಸಲಾಗಿತ್ತು. ಅದು ಸೂಕ್ತವಲ್ಲವೆಂದು ಬಿಜೆಪಿ ಸರಕಾರದಲ್ಲಿ ಎರಡು ಎಕರೆ ಭೂಮಿ ಜತೆಗೆ 55 ಲಕ್ಷ ಹಣವನ್ನು ಸಮುದಾಯ ಭವನ ನಿರ್ಮಾಣಕ್ಕೆ ಕೊಡಿಸಲಾಗಿದೆ ಎಂದರು.

ಮುಂದೆ ನಡೆಯುವ ಜಾತಿಗಣತಿಯಲ್ಲಿ ಸಮುದಾಯ ಜಾಗೃತಿಯಿಂದ ಹೆಜ್ಜೆ ಹಿಡಬೇಕಿದೆ. ಸ್ವಾಮಿಗಳ ನೇತೃತ್ವದಲ್ಲಿ ಸಭೆ ಕರೆದು ಅರಿವು ಮೂಡಿಸಲಾಗುವುದು ಎಂದು ತಿಳಿಸಿದರು.

ಶ್ರೀ ಸೋಮನಾಥ ಸ್ವಾಮೀಜಿ, ತಾಲೂಕು ಅಧ್ಯಕ್ಷ ಗಣೇಶ್ ಗೌಡ ಕೆ., ನಿರ್ದೇಶಕರಾದ, ಗೋವಿಂದೇಗೌಡ, ಬಾಲಚಂದ್ರಣ್ಣ, ಹಬ್ಬನ ಕುಪ್ಪೆ, ಜಯರಾಮ್, ಯೋಗಾನಂದ್ ಕುಮಾರ್, ರಾಮಕೃಷ್ಣೇಗೌಡ, ಕಿರಂಗೂರು ಬಸವರಾಜು, ನಂಜಪ್ಪ, ಹೆಚ್.ಎನ್. ರವಿಕುಮಾರ್, ಬಿಳಿಕೆರೆ ಸೋಮಶೇಖರ್, ಉಂಡವಾಡಿ ಚಂದ್ರೇಗೌಡ, ಬಿಳಿಕೆರೆ ಪ್ರಸನ್ನ, ರವಿಗೌಡ, ಜಯಣ್ಣ, ರಾಮಚಂದ್ರ ಇದ್ದರು.

ಶಾಲಾ, ಕಾಲೇಜು ನಿರ್ಮಾಣಕ್ಕೆ ಭೂಮಿ ಪೂಜೆ ನಡೆಯಿತು.

THIS IS A PUBLIC ANNOUNCEMENT FOR INFORMATION PURPOSES ONLY AND IS NOT A PROSPECTUS ANNOUNCEMENT AND DOES NOT CONSTITUTE AN INVITATION OR OFFER TO ACQUIRE, PURCHASE OR SUBSCRIBE TO SECURITIES. NOT FOR RELEASE, PUBLICATION OR DISTRIBUTION DIRECTLY OR INDIRECTLY OUTSIDE INDIA.
Initial Public Offering of equity shares on the main board of BSE Limited (**"BSE"**) and National Stock Exchange of India Limited **("NSE")** (and together with BSE, the **"Stock Exchanges"** in compliance with Chapter II of the Securities and Exchange Board of India (Issue of Capital and Disclosure Requirements) Regulations, 2018, as amended ("**SEBI ICDR Regulations**").

ATHER

ATHER ENERGY LIMITED

(Please scan this QR code to view the Prospectus)

Our Company was originally incorporated as "Ather Energy Private Limited" as a private limited company under the provisions of the Companies Act, 1956, pursuant to a certificate of incorporation dated October 21, 2013, issued by the Registrar of Companies, Tamil Nadu, Chennai, Andaman and Nicobar Islands. Pursuant to a change in the registered office of our Company, a certificate of registration dated May 31, 2016, was issued by the Registrar of Companies, Karnataka at Bangalore. Upon the conversion of our Company into a public limited company, pursuant to a board resolution dated June 18, 2024, and a shareholders' resolution dated June 21, 2024, the name of our Company was changed to "Ather Energy Limited", and a fresh certificate of incorporation dated August 27, 2024 was issued by the Registrar of Companies, Central Processing Centre. For details in relation to the changes in the registered office of our Company, see "*History and Certain Corporate Matters - Changes in the registered office of our Company*" on page 326 of the Prospectus dated April 30, 2025 ("**Prospectus**").

Registered Office: 3rd Floor, Tower D, IBC Knowledge Park, #4/1 Bannerghatta Main Road, Bangalore 560 029, Karnataka, India; **Corporate Office:** 13th Floor, Tower D, IBC Knowledge Park, #4/1 Bannerghatta Main Road, Bangalore 560 029, Karnataka, India
Contact Person: Puja Aggarwal, Company Secretary and Compliance Officer; **Tel:** +91 80 6646 5750; **E-mail:** cs@atherenergy.com; **Website:** www.atherenergy.com, **Corporate Identity Number:** U40100KA2013PLC093769

PROMOTERS OF OUR COMPANY: TARUN SANJAY MEHTA, SWAPNIL BABANLAL JAIN AND HERO MOTOCORP LIMITED

Our Company has filed the Prospectus with the RoC and the Equity Shares (as defined below) are proposed to be listed on the Main Board platform of the Stock Exchanges and the trading is expected to commence on Tuesday, May 6, 2025.

BASIS OF ALLOTMENT

INITIAL PUBLIC OFFERING OF 92,867,945 EQUITY SHARES OF FACE VALUE OF ₹ 1 EACH ("EQUITY SHARES") OF ATHER ENERGY LIMITED (OUR "COMPANY" OR THE "ISSUER") FOR CASH AT A PRICE OF ₹ 321^ PER EQUITY SHARE INCLUDING A SECURITIES PREMIUM OF ₹ 320^ PER EQUITY SHARE (THE "OFFER PRICE") AGGREGATING UP TO ₹ 29,808 MILLION^ (THE "OFFER"). THE OFFER COMPRISES A FRESH ISSUE OF 81,816,199 EQUITY SHARES OF FACE VALUE OF ₹ 1 BY OUR COMPANY AGGREGATING TO ₹26,260 MILLION^ (THE "FRESH ISSUE") AND AN OFFER FOR SALE OF 11,051,746 EQUITY SHARES OF FACE VALUE OF ₹ 1 EACH AGGREGATING UP TO ₹ 3,548 MILLION COMPRISING OF 980,000 EQUITY SHARES OF FACE VALUE OF ₹ 1 EACH AGGREGATING TO ₹ 314.58 MILLION BY TARUN SANJAY MEHTA, 980,000 EQUITY SHARES OF FACE VALUE OF ₹ 1 EACH AGGREGATING TO ₹ 314.58 MILLION BY SWAPNIL BABANLAL JAIN (TOGETHER THE "PROMOTER SELLING SHAREHOLDERS"), 6,003,460 EQUITY SHARES OF FACE VALUE OF ₹ 1 EACH AGGREGATING TO ₹ 1,927.12 MILLION BY CALADIUM INVESTMENT PTE LTD, 2,634,514 EQUITY SHARES OF FACE VALUE OF ₹ 1 AGGREGATING TO ₹ 845.68 MILLION BY NATIONAL INVESTMENT AND INFRASTRUCTURE FUND II, 400,000 EQUITY SHARES OF FACE VALUE OF ₹ 1 EACH AGGREGATING TO ₹ 128.40 MILLION BY INTERNET FUND III PTE. LTD., 31,050 EQUITY SHARES OF FACE VALUE OF ₹ 1 EACH AGGREGATING TO ₹ 9.97 MILLION BY IITM INCUBATION CELL, 4,191 EQUITY SHARES OF FACE VALUE OF ₹ 1 EACH AGGREGATING TO ₹ 1.35 MILLION BY IITMS RURAL TECHNOLOGY AND BUSINESS INCUBATOR (TOGETHER THE "CORPORATE SELLING SHAREHOLDERS") AND 18,531 EQUITY SHARES OF FACE VALUE OF ₹ 1 EACH AGGREGATING TO ₹ 5.95 MILLION BY AMIT BHATIA ("INDIVIDUAL SELLING SHAREHOLDER", AND TOGETHER WITH THE PROMOTER SELLING SHAREHOLDERS AND THE CORPORATE SELLING SHAREHOLDERS REFERRED TO AS THE "SELLING SHAREHOLDERS").

ANCHOR INVESTOR OFFER PRICE: ₹ 321^ PER EQUITY SHARE OF FACE VALUE OF ₹ 1 EACH
OFFER PRICE: ₹ 321^ PER EQUITY SHARE OF FACE VALUE OF ₹ 1 EACH
THE OFFER PRICE IS 321 TIMES THE FACE VALUE OF THE EQUITY SHARES.

^A discount of ₹ 30 per equity share was offered to eligible employee bidding in the employee reservation portion.

RISK TO INVESTORS

For details refer to section titled "Risk Factors" on page 43 of the Prospectus

1. **Supply Risk:** We rely on third party suppliers for the supply of EV components, such as motor controllers, transmissions, vehicle control units, dashboards, DC-DC converters, harnesses and chassis, as well as lithium-ion cells, which we use to assemble our E2Ws and manufacture battery packs at our Hosur Factory. Chargers and motors are also procured from our suppliers who design and manufacture them. Thus, we are reliant on our suppliers for the continued supply of such component parts and any failure on the part of our suppliers, particularly key suppliers, to deliver such parts in accordance with the terms of our arrangements with them, could cause business disruptions, including delays in manufacturing and delivery timelines.
2. **Losses and negative cash flow from operating activities in the past:** We derive our revenue principally from sales of our E2Ws, supplemented by sales of the Atherstack, accessories and other services. Our revenue from operations was ₹15,789 million and ₹17,538 million for the nine months period ended December 31, 2024 and for fiscal year ended March 31, 2024 respectively. Our loss before tax was ₹5,779 million and ₹10,597 million for the nine months period ended December 31, 2024 and for fiscal year ended March 31, 2024 respectively.
   We have had negative cash flows from operations continuously since our incorporation. Net cash used in operating activities is ₹7,171 million and ₹2,676 million for the nine months period ended December 31, 2024 and for fiscal year ended March 31, 2024 respectively.
3. **Product concentration risk:** We currently derive our revenue from the sale of E2Ws, with our E2W portfolio comprising variants of the Ather 450 series and the Ather Rizta series. They contributed ₹13,930 million, ₹11,015 million, ₹15,706 million, ₹14,327 million and ₹3,703 million in revenue for the nine months ended December 31, 2024 and 2023 and fiscal years ended March 31, 2024, 2023 and 2022, respectively, or 88%, 90%, 90%, 80% and 91% of revenue from operations for those respective periods.
4. **Sales concentration risk:** Sales from our retail centres in south zones in India contributes to a significant portion of our revenue. We had sales of 65,914 units, 50,340 units, 74,372 units, 60,977 units and 15,199 units in the nine months ended December 31, 2024 and 2023 and fiscal years ended March 31, 2024, 2023 and 2022, respectively, amounting to 61%, 68%, 68%, 66% and 65% of our total volumes for those respective periods. Due to this geographical concentration, any occurrences affecting southern India's economy could disrupt our sales activities and reduce our overall sales volume, thereby adversely affecting our business, operating results and financial condition.
5. **Competition Risk:** We compete with both E2W manufacturers and traditional automotive companies in the highly competitive Indian automotive industry. We cannot assure you that we will be able to compete successfully within India, or in other jurisdictions that we expand into. Our existing and future competitors may have significantly greater experience and financial, technical, manufacturing, marketing and other resources than we do and may be able to devote greater resources to the design, development, manufacturing, marketing, sales and support of their vehicles.
   According to the CRISIL Report, we had a 10.7% and 11.5% market share of the Indian E2W market in the nine months ended December 31, 2024 and Fiscal Year 2024, respectively.
   According to the CRISIL Report, India's 2W industry is an oligopolistic market with the top four players contributing more than 80% of annual sales. In particular, the E2W segment has been highly concentrated with a few players primarily catering to the entire segment, according to the CRISIL Report. Over the years, with the entry of new players, EV launches from legacy ICE OEMs as well as the expansion in the EV portfolio of players, competition intensified within the EV space, according to the CRISIL Report.
6. **Demand and Adoption Risk:** Demand for our E2Ws and services greatly depends on the demand for EVs in the Indian EV market, and in particular, E2Ws. According to the CRISIL Report, in the last two to three years, EV offerings have increased multi-fold with the entry of new players, expansion of legacy players and profile expansion of current players. According to the CRISIL Report, ICE scooters made up 84.8% and 85.3% of domestic scooter sales in the nine months ended December 31, 2024 and Fiscal Year 2024 respectively, while e-scooters made up 15.2% and 14.7% for the same periods, respectively.
7. **Limited operating history:** Our Company was incorporated in 2013 and launched our first E2W, the Ather 450, in June 2018. As we have a limited operating history, there is a limited historical basis on which we can make judgements regarding our ability to develop, manufacture, and deliver E2Ws or their components or our results of operations, including our ability to achieve profitability in the future. Our historical revenue growth should not be considered indicative of our future performance.
8. **Majority portion of our Objects are towards investment into research and development purposes:** ₹7,500 million of the Net Proceeds are intended to be utilised for investment into our research and development requirements, which constitutes a significant portion of the Net Proceeds proposed to be raised from the Offer. Our R&D costs comprise manpower and non-manpower costs. Our R&D expenditures include, among others, the design and development costs in relation to our key E2W components, new motorbike platform, Atherstack, accessories and charging technology. Our R&D expenditure (inclusive of taxes) amounted to ₹2,388 million, ₹1,637 million, ₹2,365 million, ₹1,916 million and ₹1,010 million in the nine months ended December 31, 2024 and 2023 and fiscal years ended March 31, 2024, 2023 and 2022, respectively, or 15%, 13%, 13%, 11% and 24% of total income for those respective periods.
9. **Ineligibility/elimination of Government incentives/subsidiaries:** We benefit from various government incentives. We previously benefited from the FAME subsidy, which was introduced by the then Department of Heavy Industry in 2015 and expired on March 31, 2024. The FAME subsidy was superseded by the Electric Mobility Promotion Scheme 2024 ("EMPS 2024") effective from April 1, 2024. We had obtained EMPS 2024 subsidies for Ather 450S, Ather 450X and Ather Rizta (S and Z), of ₹10,000 per E2W, eligible for reimbursement for claims made on a monthly basis. Reduction, elimination or ineligibility for government incentives, or any reduction, elimination, non-receipt or delays in receiving such incentives, could reduce the demand for E2Ws and potentially result in us becoming less price competitive compared to conventional ICE 2Ws.
10. **Risk related to sourcing of raw materials from China:** We sourced our lithium-ion cells, one of the critical components in our E2Ws, from two foreign suppliers located in China and South Korea in the nine months ended December 31, 2024 and in Fiscal Years 2024, 2023 and 2022. Further, in relation to the sourcing lithium-ion cells from China, we may experience supply disruptions and increased costs in the event of any changes in the policies, rules and regulations of the Indian or Chinese government relating to imports or exports from China, whether as a result of geopolitical factors or for other reasons, such as the implementation of trade tariffs or a complete halt on imports from China.
    During the nine months ended December 31, 2024, we imported supplies from China and Hong Kong SAR and in Fiscal Years 2024, 2023 and 2022, we imported supplies from China, Hong Kong SAR, Singapore and South Korea. In such periods, we imported seven E2W components for E2W manufacturing, comprising five battery components, one electronic component and one mechanical component.
    The cost of material consumed from China is 25%, 30%, 28% and 10% of the total cost of materials consumed for our E2Ws for the nine months period ended December 31, 2024, December 31, 2023 and for fiscal year ended March 31, 2024 and March 31, 2023 respectively.
11. **Risk associated to New Factory:** ₹9,272 million of the Net Proceeds are intended to be utilised for funding our capital expenditure requirements to construct Phase 1 of Factory 3.0 at Chhatrapati Sambhajinagar (formerly Aurangabad), Maharashtra. We plan to construct the Factory 3.0 on a 95-year leased property in both phases, having a total production capacity of 1 million E2Ws per year upon completion of construction of both phases to achieve a total production capacity of 1.42 million of E2Ws per year across all our manufacturing facilities. This first phase of Factory 3.0 is proposed to be financed through the Net Proceeds and expected to be completed in March 2027, with a production capacity of 0.5 million E2Ws per year, based on the D&B Report. However, if, amongst other factors, the market demand is weak, we may not complete or may delay the construction of the two phases of Factory 3.0. Further, we could experience delays, disruptions or other difficulties during construction, such as labour disruptions, technological advancement rendering the purchased software redundant, foreign exchange rate fluctuations and failure to receive approvals from relevant government and statutory authorities. These may cause us to incur additional expenses and experience cost overruns or face difficulties in meeting the demand for our products as we continue to grow our business, thus adversely affecting our business, prospects, financial condition and results of operation.
12. **Intellectual property rights risk:** We rely on a combination of trademarks, designs, patents, domain names, trade secrets, proprietary technologies, and similar intellectual property to establish and protect our rights in our technology and intellectual property. As at February 28, 2025, we have 45 patents, 201 design registrations and 303 trademarks registered and have applied for additional 303 patents, 12 design registrations and 102 trademarks.
    While we undertake to register our intellectual property, there is no assurance that such applications will be granted. An intellectual property registration granted to us may not be sufficient to protect our intellectual property rights. We may also be susceptible to claims from third-parties asserting infringement and other related claims. Further, monitoring unauthorised use of our intellectual property is difficult and costly, and the steps we will take to prevent misappropriation in the future may not be successful. Failure to defend, maintain or protect these rights could harm our business. Any unauthorised use of our intellectual property by third-parties may adversely affect our current and future revenues and our reputation.
13. **Inadequate access to Ather Grid:** We may face challenges in our expansion of the Ather Grid, our two-wheeler charging infrastructure comprising (i) fast chargers, which are direct current chargers that can charge E2Ws at the rate of 15 km per 10 minutes and accessible by Ather E2W owners and customers of EV OEMs using our Light Electric Combined Charging System **("LECCS")**, and (ii) neighbourhood chargers, which are 3.3 kW alternating current charging points at various locations, such as apartment blocks, office buildings and university campuses, and generally accessible by the public. While we provide a portable charger with every E2W we sell, our abilities to provide out-of-home charging solutions and continue the expansion of our charging infrastructure depend on our partnerships with third-parties to install and maintain our chargers. If our continued expansion of the Ather Grid cannot keep pace with the increasing demand for our charging infrastructure, customer wait times may increase, which may result in customer dissatisfaction and adversely affect our brand and demand for our E2Ws.
14. **Driving range on a single charge of our electric vehicle declines over time:** The rate at which the driving range of our E2Ws on a single battery charge declines depends on usage, time and charging patterns. E2Ws with higher battery capacities offer longer driving ranges. The driving range of an E2W may decline over time due to a deterioration in the battery pack's ability to hold charge. As customers use E2Ws for various purposes, in differing manners and durations, the performance of the battery packs in our E2Ws may vary and decline at a faster rate than the manufacturer's estimate. For instance, the frequency of a customer's usage and charging patterns can all result in accelerated deterioration of the battery pack's ability to hold a charge. While we have completed standard warranty cycles in the past, our limited operating history means that we are unable to accurately assess the actual deterioration of our battery packs in the future. The decline in driving range on a single battery charge over time may negatively affect potential customers' decision to purchase our E2Ws, thereby affecting our business and financial operations.
15. **Since the Company has incurred loss in the Financial Year 2024, the basic and diluted EPS is negative and hence, the Price to Earnings ratio is not ascertainable.**
16. **Weighted Average Return on Net Worth for Financial Year ended 2024, 2023 and 2022 is (170%).**
17. **Average cost of acquisition per Equity Share for the Promoters and Selling Shareholders as on the date of the Prospectus is as follows:**

S. No.	Name	Number of Equity Shares of face value of ₹1 each, held	Average cost of acquisition per Equity Share (in ₹)
	Promoters		
1.	Tarun Sanjay Mehta	20,517,732	21.09
2.	Swapnil Babanlal Jain	20,517,732	21.09
3.	Hero MotoCorp Limited	115,083,252	146.01
	Selling Shareholders		
4.	Caladium Investment Pte Ltd	46,514,376	204.24
5.	National Investment and Infrastructure Fund II *(represented by and acting through its investment manager, National Investment and Infrastructure Fund Limited)*	20,412,027	183.71
6.	Internet Fund III Pte. Ltd.	19,760,832	38.58
7.	IITM Incubation Cell	1,372,860	Nil
8.	IITMS Rural Technology and Business Incubator	185,310	8.31
9.	Amit Bhatia	18,531	184.82

18. **Weighted average cost of acquisition of all equity shares transacted in last one year, 18 months and three years preceding the date of the Prospectus.**

Period	Weighted average cost of acquisition (in ₹)	Cap Price is 'x' times the weighted average cost of acquisition	Range of acquisition price: lowest price – highest price (in ₹)
